ಸಂಪುಟ: 21, ಸಂಚಿಕೆ: 262, ಪುಟಗಳು: 8, ಭಾನುವಾರ, 30 ಜೂನ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

### ಸುಭಾಷಿತ

ನಮ್ಮೆಲ್ಲ ಸಮಸ್ಯೆಗಳು ಪರಿಹಾರಗೊಳ್ಳುವ ತನಕ ಚಳವಳಿಗಳನ್ನು ಜೀವಂತವಾಗಿಟ್ಟಿರುವುದು ಅತ್ಯಗತ್ಯ.
। ಕುವೆಂಪು

### ಪಂಚಾಂಗ

(ಭಾನುವಾರ 30, ಜೂನ್-2024)

- ಸಂವತ್ಸರ: ಕ್ರೋಧಿ ನಾಮ
- ಋತು: ಗ್ರೀಷ್ಮ
- ಅಯನ: ಉತ್ತರಾಯಣ
- ಮಾಸ: ಜೇಷ್ಠ • ಪಕ್ಷ: ಕೃಷ್ಣ
- ತಿಥಿ: ನವಮಿ • ನಕ್ಷತ್ರ: ರೇವತಿ
- ರಾಹುಕಾಲ: 05:13 - 6:49
- ಗುಳಿಕಕಾಲ: 03:36 - 5:13
- ಯಮಗಂಡಕಾಲ: 12:23 - 1:59



dp

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



## ಸಂಕ್ಷಿಪ್ತ ಸುದ್ದಿ

### ಮುಜರಾಯಿ ವ್ಯಾಪ್ತಿಯ ದೇವಾಲಯಗಳಿಗೆ ಶೆಲ್ಟರ್



**ಬೆಂಗಳೂರು:** ಈಗಾಗಲೇ ಮಳೆಗಾಲ ಆರಂಭವಾಗಿದೆ. ಬರುವ ತಿಂಗಳಿನಿಂದ ಮುಂಗಾರು ತೀವ್ರಗೊಳ್ಳುವ ನಿರೀಕ್ಷೆ ಇದೆ. ಸಾಮಾನ್ಯವಾಗಿ ಮಳೆಗಾಲದ ಅವಧಿಯಲ್ಲಿ ದೇವಸ್ಥಾನಕ್ಕೆ ಬರುವವರ ಸಂಖ್ಯೆ ಕಡಿಮೆಯಾಗುತ್ತದೆ. ಈ ಸಮಸ್ಯೆ ಪರಿಹಾರಕ್ಕೆ ಮುಜರಾಯಿ ಇಲಾಖೆ ಪ್ಲಾನ್ ಮಾಡಿದೆ. ಪುಟ 2

### ನಾಳೆಯಿಂದ ಹೊಸ ಕ್ರಿಮಿನಲ್ ಕಾನೂನು ಜಾರಿ



**ಬೆಂಗಳೂರು:** ನಾಳೆಯಿಂದ ದೇಶಾದ್ಯಂತ ಮೂರು ಹೊಸ ಕ್ರಿಮಿನಲ್ ಕಾನೂನುಗಳು ಜಾರಿಯಾಗಲಿವೆ. ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ ಮತ್ತು ಭಾರತೀಯ ಸಾಕ್ಷಿ ಕಾಯಿದೆಯು ನಾಳೆಯಿಂದ ಜಾರಿಗೆ ಬರಲಿವೆ. ಜೊತೆಗೆ ಹೊಸ ಕ್ರಿಮಿನಲ್ ಕಾನೂನುಗಳ ಪ್ರಮುಖ ಲಕ್ಷಣಗಳ ಬಗ್ಗೆ ಮಹಿಳೆಯರು, ಯುವಕರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಮತ್ತು ಗಣ್ಯ ವ್ಯಕ್ತಿಗಳಿಗೆ ತಿಳಿಸಲು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಬ್ರಿಟಿಷರ ಕಾಲದ ಐಪಿಸಿ-ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ, ಇಂಡಿಯನ್ ಎವಿಡೆನ್ಸ್ ಆಕ್ಟ್-ಭಾರತೀಯ ಸಾಕ್ಷ್ಯ ಅಧಿನಿಯಮ ಅನ್ನು ಬದಲಿಸುತ್ತವೆ. ಈಗಿರುವ ಕಾಯಿದೆಗಳಿಗೆ ಹೋಲಿಸಿದರೆ ಈ ಮೂರು ಹೊಸ ಕಾನೂನುಗಳಲ್ಲಿ ಹಲವು ವಿನೂತನ ಉದ್ದೇಶಗಳಿವೆ. ಪುಟ 2

### ಅದೇನೇ ಆಗಲಿ ಕೊಹ್ಲಿ ಬೇಕು ಎಂದಿದ್ದ ರೋಹಿತ್ ಶರ್ಮಾ

# ನಂಬಿಕೆ ಉಳಿಸಿದ ವಿರಾಟ್



ಬಾರ್ಬಡೋಸ್ ನ ಕೆನ್ಸಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಟಿ20 ವಿಶ್ವಕಪ್ ನ ಫೈನಲ್ ಪಂದ್ಯದಲ್ಲಿ ಬಲಿಷ್ಠ ಸೌತ್ ಆಫ್ರಿಕಾ ತಂಡವನ್ನು ಬಗ್ಗು ಬಡಿದು ಟೀಮ್ ಇಂಡಿಯಾ ವಿಶ್ವಕಪ್ ಗೆದ್ದುಕೊಂಡಿದೆ. ಈ ಗೆಲುವಿನ ರೂವಾರಿಗಳಲ್ಲಿ ವಿರಾಟ್ ಕೊಹ್ಲಿ ಕೂಡ ಒಬ್ಬರು. ಆದರೆ ಇದೇ ವಿರಾಟ್ ಕೊಹ್ಲಿಗೆ ಟಿ20 ವಿಶ್ವಕಪ್ ತಂಡದಲ್ಲಿ ಸ್ಥಾನ ನೀಡಲು ಬಿಸಿಸಿಐ ಹಿಂದೇಟು ಹಾಕಿತ್ತು ಎಂಬುದೇ ಸತ್ಯ.



ಈ ಬಾರಿಯ ಟಿ20 ವಿಶ್ವಕಪ್ ತಂಡದ ಆಯ್ಕೆಗೂ ಮುನ್ನ ವಿರಾಟ್ ಕೊಹ್ಲಿಯನ್ನು ತಂಡದಿಂದ ಕೈ ಬಿಡುವಂತೆ ಆಯ್ಕೆ ಸಮಿತಿಗೆ ಬಿಸಿಸಿಐ ಸೂಚಿಸಿತ್ತು. ಆದರೆ ರೋಹಿತ್ ಶರ್ಮಾ ಪಟ್ಟು ಹಿಡಿದ ಕಾರಣ ಕಿಂಗ್ ಕೊಹ್ಲಿಯನ್ನು ವಿಶ್ವಕಪ್ ತಂಡಕ್ಕೆ ಆಯ್ಕೆ ಮಾಡಲಾಗಿತ್ತು. ಅದರಂತೆ ವಿಶ್ವಕಪ್ ನಲ್ಲಿ ಕಣಕ್ಕಿಳಿದ ಕೊಹ್ಲಿ 7 ಪಂದ್ಯಗಳಲ್ಲೂ ವಿಫಲರಾಗಿದ್ದರು.

ಅದರಲ್ಲೂ ಸೆಮಿಫೈನಲ್ ನಲ್ಲಿ ಕೇವಲ 9 ರನ್ ಗಳಿಸಿ ಔಟಾಗಿದ್ದ ವಿರಾಟ್ ವಿರುದ್ಧ ಭಾರೀ ಟೀಕೆಗಳು ವ್ಯಕ್ತವಾಗಿದ್ದವು. ಅಲ್ಲದೆ ಆರಂಭಿಕನ ಸ್ಥಾನದಿಂದ ಕೊಹ್ಲಿಯನ್ನು ಕೆಳಗಿಳಿಸುವಂತೆ ಕೂಗುಗಳು ಕೇಳಿಬಂದಿದ್ದವು. ಪುಟ 2






### ಕೆನ್ಸಿಂಗ್ಟನ್ ಓವಲ್ ಪಿಚ್‌ನ ಹುಲ್ಲು ತಿಂದ ರೋಹಿತ್

ಬಹುಕಾಲದ ಕನಸು ಈಡೇರಿಸಿದ ಕೆನ್ಸಿಂಗ್ಟನ್ ಓವಲ್ ಮೈದಾನದ ಪಿಚ್‌ಗೆ ನಮಿಸಿದ ರೋಹಿತ್. ಅಷ್ಟೇ ಅಲ್ಲದೆ ಪಿಚ್ ನಲ್ಲಿನ ಹುಲ್ಲನ್ನು ಕಿತ್ತು ತಿನ್ನುವ ಮೂಲಕ ಸ್ಮರಣೀಯ ಗೆಲುವನ್ನು ನೀಡಿದ ಕೆನ್ಸಿಂಗ್ಟನ್ ಮೈದಾನದ ಋಣವನ್ನು ದೇಹಕ್ಕೆ ಸೇರಿಸಿಕೊಂಡರು. ಇದೀಗ ರೋಹಿತ್ ಶರ್ಮಾ ಅವರ ಈ ಭಾವುಕ ಕ್ಷಣಗಳ ಫೋಟೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.



ಪುಟ 2



### ದ್ರಾವಿಡ್ ಭಾವನಾತ್ಮಕ ಸಂಭ್ರಮಾಚರಣೆ

ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡ ಎರಡನೇ ಬಾರಿಗೆ ವಿಶ್ವ ಚಾಂಪಿಯನ್ ಆಗಿದೆ. ಬಾರ್ಬಡೋಸ್ ನಲ್ಲಿ ನಡೆದ ಟಿ20 ವಿಶ್ವಕಪ್‌ನ ಫೈನಲ್ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡವನ್ನು 7 ರನ್ ಗಳಿಂದ ಸೋಲಿಸುವ ಮೂಲಕ ಟೀಮ್ ಇಂಡಿಯಾ ಮತ್ತೊಮ್ಮೆ ವಿಶ್ವಕಪ್‌ಗೆ ಮುತ್ತಿಕ್ಕಿದೆ. 2007ರಲ್ಲಿ ಮಹೇಂದ್ರ ಸಿಂಗ್ ಧೋನಿ ನಾಯಕತ್ವದಲ್ಲಿ ಭಾರತ ಟಿ20 ವಿಶ್ವ ಕಪ್ ಗೆದ್ದಿತ್ತು. ಇದೀಗ 17 ವರ್ಷಗಳ ನಂತರ ಭಾರತ ವಿಶ್ವ ಕಪ್ ಗೆದ್ದಿದೆ. ಭಾರತದಲ್ಲಿ ನಡೆದ ಏಕದಿನ 2023ರ ವಿಶ್ವಕಪ್ ನಲ್ಲಿ ಫೈನಲ್ ಪಂದ್ಯದಲ್ಲಿ ಭಾರತ ಸೋಲು ಕಂಡಿತು. ಅಂದು ಕೋಚ್, ಕನ್ನಡಿಗ ರಾಹುಲ್ ದ್ರಾವಿಡ್ ಕಣ್ಣೀರು ಹಾಕಿದ್ದರು. ಇದೀಗ ಟಿ20 ವಿಶ್ವಕಪ್ ಗೆಲ್ಲುತ್ತಿದ್ದಂತೆ ಕನ್ನಡಿಗ ರಾಹುಲ್ ದ್ರಾವಿಡ್ ಸಂಭ್ರಮ ಮುಗಿಲು ಮುಟ್ಟಿದೆ. ಪುಟ 2



### ಇಡೀ ಪಂದ್ಯದ ಚಿತ್ರಣ ಬದಲಿಸಿದ ಜಸ್ ಪ್ರೀತ್ ಬುಮ್ರಾ

ಟಿ20 ವಿಶ್ವಕಪ್ ನ 9ನೇ ಆವೃತ್ತಿಯಲ್ಲಿ ಭಾರತ ತಂಡವು ಚಾಂಪಿಯನ್ ಪಟ್ಟ ಅಲಂಕರಿಸಿದೆ. ಬಾರ್ಬಡೋಸ್‌ನ ಕೆನ್ಸಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ರಣರೋಚಕ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡವನ್ನು ಮಣಿಸಿ ಟೀಮ್ ಇಂಡಿಯಾ ವಿಶ್ವಕಪ್ ಎತ್ತಿ ಹಿಡಿದಿದೆ. ಈ ಪಂದ್ಯದ ಗೆಲುವಿನ ರೂವಾರಿಗಳೆಂದರೆ ವಿರಾಟ್ ಕೊಹ್ಲಿ ಮತ್ತು ಜಸ್ ಪ್ರೀತ್ ಬುಮ್ರಾ. 76 ರನ್ ಗಳ ಕೊಡುಗೆಯೊಂದಿಗೆ ಕಿಂಗ್ ಕೊಹ್ಲಿ ಟೀಮ್ ಇಂಡಿಯಾ 176 ರನ್ ಪೇರಿಸಲು ನೆರವಾದರೆ, ಈ ಗುರಿಯನ್ನು ಬೆನ್ನತ್ತದಂತೆ ತಡೆಯುವಲ್ಲಿ ಜಸ್ ಪ್ರೀತ್ ಬುಮ್ರಾ ಯಶಸ್ವಿಯಾದರು. ಪುಟ 2

### ಟೀಂ ಇಂಡಿಯಾಕ್ಕೆ ಮೋದಿ ಅಭಿನಂದನೆ

**ನವದೆಹಲಿ:** 17 ವರ್ಷಗಳ ಬಳಿಕ ಭಾರತಕ್ಕೆ ಟಿ20 ವಿಶ್ವಕಪ್ ತಂದುಕೊಟ್ಟ ಟೀಂ ಇಂಡಿಯಾ ಆಟಗಾರರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.



ಚಾಂಪಿಯನ್ಸ್! ನಮ್ಮ ತಂಡವು ಟಿ20 ವಿಶ್ವಕಪ್ ಅನ್ನು ಸ್ಟೈಲ್‌ನಲ್ಲಿ ಮನೆಗೆ ತಂದಿದೆ. ಭಾರತ ಕ್ರಿಕೆಟ್ ತಂಡದ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಪ್ರಧಾನಿ ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಹಾಕಿ ವಿಶ್ ಮಾಡಿದ್ದಾರೆ. ಜೊತೆಗೆ ವೀಡಿಯೋ ಸಂದೇಶ ಕೂಡ ಹಂಚಿಕೊಂಡಿದ್ದಾರೆ.

ಟೀಂ ಇಂಡಿಯಾ ವಿಶ್ವಕಪ್ ಅಷ್ಟೇ ಅಲ್ಲ, ಕೋಟ್ಯಂತರ ಭಾರತೀಯರ ಹೃದಯವನ್ನೂ ಗೆದ್ದಿದೆ. ಒಂದೇ ಒಂದು ಪಂದ್ಯವನ್ನು ಸೋಲದಿರುವುದು ಸಣ್ಣ ಸಾಧನೆಯಲ್ಲ ಎಂದು ಪ್ರಧಾನಿ ಬಣ್ಣಿಸಿದ್ದಾರೆ.

ಈ ಅದ್ಭುತ ಗೆಲುವಿಗಾಗಿ ಭಾರತಕ್ಕೆ ಅಭಿನಂದನೆಗಳು. ಇಂದು, 140 ಕೋಟಿ ದೇಶವಾಸಿಗಳು ನಿಮ್ಮ ಅದ್ಭುತ ಪ್ರದರ್ಶನದ ಬಗ್ಗೆ ಹೆಮ್ಮೆಪಡುತ್ತಾರೆ. ನೀವು ವಿಶ್ವಕಪ್ ಗೆದ್ದಿದ್ದೀರಿ ಮತ್ತು ಕೋಟ್ಯಂತರ ಭಾರತೀಯರ ಹೃದಯವನ್ನೂ ಗೆದ್ದಿದ್ದೀರಿ. ನೀವು ಒಂದು ಪಂದ್ಯವನ್ನೂ ಸೋತಿಲ್ಲ. ಅದು ಸಣ್ಣ ಸಾಧನೆಯಲ್ಲ. ನೀವು ಅದ್ಭುತ ವಿಜಯವನ್ನು ಸಾಧಿಸಿದ್ದೀರಿ. ನಾನು ನಿಮ್ಮನ್ನು ಅಭಿನಂದಿಸುತ್ತೇನೆ ಎಂದು ಪ್ರಧಾನಿ ಮೋದಿ ತಿಳಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೂಡ ಪೋಸ್ಟ್ ಹಾಕಿದ್ದು, ಟಿ20 ವಿಶ್ವಕಪ್ ಗೆದ್ದ ಟೀಮ್ ಇಂಡಿಯಾಕ್ಕೆ ನನ್ನ ಹೃತ್ಪೂರ್ವಕ ಅಭಿನಂದನೆಗಳು. ಎಂದಿಗೂ ಬತ್ತದ ಉತ್ಸಾಹದಿಂದ, ತಂಡವು ಕಠಿಣ ಪರಿಸ್ಥಿತಿಗಳಲ್ಲಿ ಸಾಗಿತು. ಪಂದ್ಯಾವಳಿಯುದ್ದಕ್ಕೂ ಅತ್ಯುತ್ತಮ ಕೌಶಲ್ಯವನ್ನು ಪ್ರದರ್ಶಿಸಿತು. ಫೈನಲ್ ಪಂದ್ಯದಲ್ಲಿ ಅಸಾಧಾರಣ ಗೆಲುವು. ಟೀಮ್ ಇಂಡಿಯಾ! ನಿಮ್ಮ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಶ್ಲಾಘಿಸಿದ್ದಾರೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಅವರು ರೋಹಿತ್ ಶರ್ಮಾ ಅವರ ನಾಯಕತ್ವವನ್ನು ಶ್ಲಾಘಿಸಿದ್ದಾರೆ. ಅದ್ಭುತ ವಿಶ್ವಕಪ್ ವಿಜಯ ಮತ್ತು ಟೂರ್ನಿಯುದ್ದಕ್ಕೂ ಅದ್ಭುತ ಪ್ರದರ್ಶನ ನೀಡಿದ ಟೀಂ ಇಂಡಿಯಾಗೆ ಅಭಿನಂದನೆಗಳು! ಸೂರ್ಯ, ಎಂತಹ ಅದ್ಭುತ ಕ್ಯಾಚ್! ರೋಹಿತ್, ಈ ಗೆಲುವು ನಿಮ್ಮ ನಾಯಕತ್ವಕ್ಕೆ ಸಾಕ್ಷಿಯಾಗಿದೆ. ರಾಹುಲ್, ಟೀಮ್ ಇಂಡಿಯಾ ನಿಮ್ಮ ಮಾರ್ಗದರ್ಶನವನ್ನು ಕಳೆದುಕೊಳ್ಳುತ್ತದೆ ಎಂದು ನನಗೆ ತಿಳಿದಿದೆ. ಅದ್ಭುತ ಮೆನ್ ಇನ್ ಬ್ಲ್ಯೂ ನಮ್ಮ ದೇಶವನ್ನು ಹೆಮ್ಮೆ ಪಡುವಂತೆ ಮಾಡಿದ್ದಾರೆ ಎಂದು ಹಾಡಿ ಹೊಗಳಿದ್ದಾರೆ.

### ಬೆಂಗಳೂರಿನಲ್ಲಿ ಮತ್ತೊಂದು ಅಪಹರಣ ಪ್ರಕರಣ

## ಕನ್ನಡ ಪರ ಸಂಘಟನೆ ಅಧ್ಯಕ್ಷ ಸೇರಿ ಆರು ಜನರ ವಿರುದ್ಧ ಎಫ್ಐಆರ್

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮತ್ತೊಂದು ಅಪಹರಣ ಪ್ರಕರಣ ಬೆಳಕಿಗೆ ಬಂದಿದೆ. ಈ ಅಪಹರಣ ಪ್ರಕರಣದಲ್ಲಿ ಲೇಡಿ ಗ್ಯಾಂಗ್ ಜೊತೆ ಕನ್ನಡ ಪರ ಸಂಘಟನೆ ಅಧ್ಯಕ್ಷ ಪ್ರಕಾಶ್ ಹೆಸರು ಸಹ ಕೇಳಿ ಬಂದಿದೆ. ಘಟನೆ ಸಂಬಂಧ ಶಂಕರಪುರ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಪ್ರಕಾಶ್ ಅಲಿಯಾಸ್ ಕನ್ನಡ ಪ್ರಕಾಶ್ ಗ್ಯಾಂಗ್ ವಿರುದ್ಧ ಪ್ರಕರಣ ದಾಖಲಾಗಿದೆ.

ಬ್ಯಾಂಕ್ ಉದ್ಯೋಗಿಯಾಗಿರುವ ಮಂಜುನಾಥ್ ಅವರನ್ನು ಪ್ರಕಾಶ್ ಗ್ಯಾಂಗ್ ಅಪಹರಿಸಿತ್ತು. ಕಿಡ್ನಾಪ್ ಮಾಡಿದ ದೃಶ್ಯಗಳು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಇನ್ನು ಕನ್ನಡ ಪ್ರಕಾಶ್ ಗೆ ಸೇರಿದ ಕಚೇರಿಯಲ್ಲಿ ಮಂಜುನಾಥ್ ಅವರನ್ನು ಕರೆದುಕೊಂಡು ಬಂದು ಥಳಿಸಲಾಗಿತ್ತು. ಅಪಹರಿಸಿ ಹಣ, ಮನೆ ದಾಖಲೆಗಳನ್ನು ಕಸಿದುಕೊಂಡ ಆರೋಪ ಕೇಳಿ ಬಂದಿದೆ.

ಇನ್ನು ಮತ್ತೊಂದೆಡೆ ಅಪಹರಣಕ್ಕೊಳಗಾದ ಮಂಜುನಾಥ್ ಅವರು ಮಂಜುಳಾ ಎಂಬುವರ ಬಳಿ 8 ಲಕ್ಷ ಸಾಲ ಪಡೆದಿದ್ದರು. ಆದರೆ ಸಾಲ ಪಡೆದಿದ್ದ ಹಣ ವಾಪಸ್ ನೀಡದೆ ಮಂಜುನಾಥ್ ಸತಾಯಿಸಿದ್ದರು. ಹೀಗಾಗಿ ಮಂಜುಳಾ ಅವರು ಕನ್ನಡ ಪ್ರಕಾಶ್ ಜೊತೆ ಸೇರಿ ಕಿಡ್ನ್ಯಾಪ್ ಪ್ಲ್ಯಾನ್ ಮಾಡಿದ್ದರು. ಮಂಜುನಾಥ್ ನನ್ನು ಕಿಡ್ನ್ಯಾಪ್ ಮಾಡಿ ದಾಖಲೆ ಕಿತ್ತುಕೊಂಡಿದ್ದರು. ಸದ್ಯ ಮಂಜುಳಾ, ಪ್ರಕಾಶ್, ಚಲಪತಿ ಸೇರಿ 6 ಆರೋಪಿಗಳ ವಿರುದ್ಧ ಎಫ್ಐಆರ್ ದಾಖಲಾಗಿದೆ.



### ಮೋದಿಯನ್ನು ಭೇಟಿಯಾದ ಸಿಎಂ, ಡಿಸಿಎಂ

## ಪ್ರಧಾನಿಯಿಂದ ಬೇಡಿಕೆ ನೇರವೇರಿಸುವ ಭರವಸೆ

**ನವದೆಹಲಿ:** ರಾಜ್ಯದ ಅಭಿವೃದ್ಧಿ ಮತ್ತು ಬಾಕಿ ಅನುದಾನಗಳ ಬಿಡುಗಡೆ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿಯವರನ್ನ ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ಈ ವೇಳೆ ರಾಜ್ಯದ ಪ್ರಮುಖ ಯೋಜನೆಗಳಿಗೆ ಅನುಮತಿ ನೀಡುವಂತೆ ಸಿಎಂ ಮನವಿ ಮಾಡಿದ್ದಾರೆ.

ಪ್ರಧಾನಿ ಭೇಟಿ ಬಳಿಕ ದೆಹಲಿಯಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ನಾನು ಸಿಎಂ, ಪರಮೇಶ್ವರ್ ಹಾಗೂ ಮಹಾದೇವಪ್ಪ ಪ್ರಧಾನಿ ಭೇಟಿ ಮಾಡಿ 40 ನಿಮಿಷ ಚರ್ಚೆ ಮಾಡಿದ್ದೇವೆ. ಮುಖ್ಯವಾಗಿ ಮಹದಾಯಿ, ಮೇಕೆದಾಟು, ಕೃಷ್ಣ ಮೇಲ್ದಂಡೆ ಯೋಜನೆ, ಬೆಂಗಳೂರು ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದ್ದೇವೆ. ಕರ್ನಾಟಕ ಹೆಚ್ಚು ತೆರಿಗೆ ನೀಡುತ್ತಿದೆ. ಹೀಗಾಗಿ ಅಗತ್ಯ ಕೆಲಸಗಳು ಆಗಬೇಕು ಎಂದು ಮನವಿ ಮಾಡಿದ್ದೇವೆ ಎಂದು ತಿಳಿಸಿದರು.

ನಮ್ಮ ಬೇಡಿಕೆಗಳನ್ನು ಪರಿಶೀಲಿಸುವ ಭರವಸೆಯನ್ನು ಪ್ರಧಾನಿಗಳು ನೀಡಿದ್ದಾರೆ. ಗಿಫ್ಟ್ ಸಿಟಿ ರಾಜ್ಯಕ್ಕೊಂದು ಕೊಡುವಂತೆ ಮನವಿ ಮಾಡಿದ್ದೇವೆ. ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ ಸಹಕಾರ ಮಾಡಿ ಎಂದು ಮನವಿ ಮಾಡಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಬೆಂಗಳೂರು ನಗರಕ್ಕೆ ಕುಡಿಯುವ ನೀರು ಒದಗಿಸುವ ಹಾಗೂ 400 ಮೆ.ವ್ಯಾ ವಿದ್ಯುತ್ ಉತ್ಪಾದನೆ ಮಾಡುವ ಮೇಕೆದಾಟು ಅಣೆಕಟ್ಟು ಯೋಜನೆಯ 9000 ಕೋಟಿ ರೂ.ಗಳ ಡಿಪಿಆರ್‌ಗೆ ಕೇಂದ್ರ ಜಲ ಆಯೋಗದಿಂದ ಪುಟ 2



### ರಾಹುಲ್ ಗಾಂಧಿ ಭುಜದ ಮೇಲೆ ಸಿದ್ದರಾಮಯ್ಯ ಕೈ!

## 'ಸಿಎಂ ಬದಲಾವಣೆ' ಕೂಗಿಗೆ ಟಾಂಗ್

**ಬೆಂಗಳೂರು:** ರಾಜ್ಯ ರಾಜಕಾರಣದಲ್ಲಿ ಸಿಎಂ ಬದಲಾವಣೆಯ ಕೂಗು ಹೆಚ್ಚಾಗಿದೆ. ಮುಖ್ಯವಾಗಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದಲ್ಲೇ ಸಿಎಂ ಬದಲಾವಣೆ ಬಗ್ಗೆ ಕೂಗು ಹೆಚ್ಚಾಗಿದೆ. ಕಾರ್ಯಕ್ರಮವೊಂದರಲಿ ಒಕ್ಕಲಿಗ ಮಠದ ಪುಟ 2



## 13ನೇ ವಯಸ್ಸಿಗೆ ಬಾಲಕಿ ಗರ್ಭಿಣಿ, ಹೊಟ್ಟೆನೋವಿನಿಂದ ಸಾವು




**ಕಲಬುರಗಿ:** 13 ವರ್ಷದ ಗರ್ಭಿಣಿ ಬಾಲಕಿ ಹೊಟ್ಟೆನೋವಿನಿಂದ ಖಾಸಗಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ ಘಟನೆ ಕಲಬುರಗಿ ನಗರದ ಸಬ್ ಅರ್ಬನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸರ್ಫರಾಜ್ ಎಂಬಾತ 13 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿ ಗರ್ಭಿಣಿ ಮಾಡಿದ್ದಾನೆ ಎಂದು ಆರೋಪಿಸಲಾಗಿದೆ. ಜೀವ ಬೆದರಿಕೆ ಹಾಕಿ ಬಾಲಕಿ ಮೇಲೆ ನಿರಂತರ ಅತ್ಯಾಚಾರ ಮಾಡಿದ್ದು, ಗರ್ಭಿಣಿಯಾದ ಬಳಿಕ ವಿಷಯ ಬೆಳಕಿಗೆ ಬಂದಿದೆ. ಶುಕ್ರವಾರ ಹೊಟ್ಟೆನೋವಿನಿಂದ ಬಳಲುತ್ತಿದ್ದ ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆಕೆಯನ್ನು ಪರೀಕ್ಷಿಸಿದ ವೈದ್ಯರು ಗರ್ಭಿಣಿಯಾಗಿರುವುದಾಗಿ ತಿಳಿಸಿದ್ದರು. ಹೊಟ್ಟೆನೋವಿನಿಂದ ಬಾಲಕಿ ಆಸ್ಪತ್ರೆಯಲ್ಲೇ ಕೊನೆಯುಸಿರೆಳೆದಿದ್ದಾಳೆ. ಅತ್ಯಾಚಾರ ಎಸಗಿದ ಆರೋಪಿ ಸರ್ಫರಾಜ್ ಮಿರ್ಜಾನನ್ನು ಪೊಲೀಸರು ಬಂಧಿಸಿದ್ದಾರೆ. ಈ ಕುರಿತು ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಪ್ರಕರಣ ದಾಖಲಿಸಲಾಗಿದೆ.

## ಗ್ರಹ ಗತಿ ಸರಿಯಿಲ್ಲ: ಕೊಲೆ ಕೇಸ್‌ಗೂ ಮುನ್ನ ದರ್ಶನ್‌ಗೆ ಎಚ್ಚರಿಕೆ ನೀಡಿದ್ರಾ ಪೂಜಾರಿ?



**ಬೆಂಗಳೂರು:** ಗ್ರಹ ಗತಿ ಸರಿಯಿಲ್ಲ. ಬೇಡ ಎಂದರೂ ತಪ್ಪು ಮಾಡಿಸುತ್ತದೆ. ಒಂದಷ್ಟು ದಿನ ಹೊರಗೆ ಎಲ್ಲಾದರು ಹೋಗಿ ಬನ್ನಿ ಎಂದು ಕೊಲೆ ಪ್ರಕರಣಕ್ಕೂ ಮುನ್ನ ನಟ ದರ್ಶನ್‌ಗೆ ಪೂಜಾರಿಯೊಬ್ಬರು ಸಲಹೆ ನೀಡಿದ್ದರು ಎಂಬ ವಿಚಾರ ತಿಳಿದುಬಂದಿದೆ. ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನಕ್ಕೆ ಒಳಗಾಗುವ ಮುನ್ನ ಗುರುವಾರದಂದು, ಮನಸ್ಸಲ್ಲಿ ತಳಮಳ ಗೊಂದಲ ಎಂದು ಮನೆಯಲ್ಲಿ ದೃಷ್ಟಿ ಪೂಜೆ ಮಾಡಿಸಿ ಶಕ್ತಿ ದೇವತೆ ಆರಾಧಿಸುವ ಪೂಜಾರಿಯಿಂದ ತಡೆ ಒಡೆಸಿದ್ದರು ಎನ್ನಲಾಗಿದೆ. ಗ್ರಹ ಗತಿ ಸರಿ ಇಲ್ಲಾ. ಬೇಡ ಎಂದರೂ ತಪ್ಪು ಮಾಡಿಸುತ್ತೆ. ಒಂದಷ್ಟು ದಿನ ಹೊರಗೆಲ್ಲಾದರು ಹೋಗಿ ಅರ್ಚಕರು ಸಲಹೆ ಕೊಟ್ಟಿದ್ದರು ಎನ್ನಲಾಗಿದೆ. ಅಂದು ನಕ್ಕು ದರ್ಶನ್ ನಮಸ್ಕರಿಸಿದ್ದರು. ಅದಾದ ಎರಡು ದಿನದಲ್ಲಿ ರೇಣುಕಾಸ್ವಾಮಿ ಹತ್ಯೆ ಆರೋಪಕ್ಕೆ ಗುರಿಯಾದರಾ ಎಂಬ ಪ್ರಶ್ನೆ ಹುಟ್ಟಿದೆ. ಈಗ ದರ್ಶನ್ ಆರೋಪ ಮುಕ್ತರಾಗಲಿ ಎಂದು ಆಪ್ತರು ಅದೇ ಶಕ್ತಿ ದೇವತೆ ಮೊರೆ ಹೋಗಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಜೈಲು ಪಾಲಾಗಿದ್ದಾರೆ. ಆದರೆ ಶನಿವಾರದ ಕೊಲೆಗೂ ಮೊದಲು ಒಂದಷ್ಟು ಗೊಂದಲ ಹಾಗೂ ತಳಮಳವನ್ನು ದರ್ಶನ್ ಅನುಭವಿಸಿದ್ದರು ಎನ್ನಲಾಗಿದೆ.

## ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಬೆಂಜ್ ಕಾರು: ಚಾಲಕ ಸಾವು

**ಮಂಗಳೂರು:** ನಿಯಂತ್ರಣ ಕಳೆದುಕೊಂಡ ಬೆಂಜ್ ಕಾರೊಂದು ಅಪಘಾತಕ್ಕೀಡಾಗಿ ಚಾಲಕ ಸಾವನ್ನಪ್ಪಿದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿಯ ಉಜಿರೆಯಲ್ಲಿ ನಡೆದಿದೆ.

ಅಪಘಾತದಲ್ಲಿ ಕಾರು ಚಾಲಕ ಉಜಿರೆ ನಿವಾಸಿ ಪ್ರಜ್ವಲ್ ಗಂಭೀರ ಗಾಯಗೊಂಡು ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ವೇಗವಾಗಿ ಬಂದ ಕಾರು ನಿಯಂತ್ರಣ ತಪ್ಪಿ ರಸ್ತೆ ಡಿವೈಡರ್ ಏರಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಪಕ್ಕದ ರಸ್ತೆಗೆ ಉರುಳಿ ಬಿದ್ದಿತ್ತು. ಅಪಘಾತದ ತೀವ್ರತೆಗೆ ಐಷಾರಾಮಿ ಬೆಂಜ್ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ.

ತಕ್ಷಣ ಸ್ಥಳೀಯರು ಪ್ರಜ್ವಲ್‌ನನ್ನು ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಘಟನೆಯ ಕುರಿತು ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಯೋಗ್ಯತೆ ಇಲ್ಲ ಅಂದ್ರೆ ಜವಾಬ್ದಾರಿ ಬಿಟ್ಟು ಚುನಾವಣೆಗೆ ಹೋಗುವುದು ವಾಸಿ

**ರಾಮನಗರ:** ಸರ್ಕಾರ ಉತ್ತಮ ಆಡಳಿತ ನಡೆಸಲಿ ಎಂದು ಜವಾಬ್ದಾರಿ ಕೊಟ್ಟಿದೆ. ಅದಕ್ಕೆ ಯೋಗ್ಯತೆ ಇಲ್ಲ ಅಂದರೆ ಎಲ್ಲರೂ ಸೇರಿ ಇದನ್ನು ಬಿಟ್ಟು ಚುನಾವಣೆಗೆ ಹೋಗುವುದು ವಾಸಿ ಎಂದು ಸಚಿವ ಕೆ.ಎನ್.ರಾಜಣ್ಣಗೆ ಮಾಜಿ ಸಂಸದ ಡಿ.ಕೆ.ಸುರೇಶ್ ತಿರುಗೇಟು ನೀಡಿದರು.

ಲೋಕಸಭಾ ಚುನಾವಣೆ ಬಳಿಕ ಡಿಕೆಶಿ ಅಧ್ಯಕ್ಷ ಸ್ಥಾನ ಬಿಡಬೇಕು. ಈ ಬಗ್ಗೆ ಹೈಕಮಾಂಡ್ ಹೇಳಿತ್ತು ಎಂಬ ಕೆ.ಎನ್.ರಾಜಣ್ಣ ಹೇಳಿಕೆ ವಿಚಾರವಾಗಿ ಮಾತನಾಡಿದ ಡಿ.ಕೆ. ಸುರೇಶ್, ಡಿಕೆಶಿ ಅವರಿಗೆ ಜವಾಬ್ದಾರಿ ಕೊಟ್ಟಿರುವುದು ಪಕ್ಷದ ವರಿಷ್ಠರು. ಶಿವಕುಮಾರ್ ವರಿಷ್ಠರ ಮುಂದೆ ಎಲ್ಲವನ್ನೂ ತಿಳಿಸಿದ್ದಾರೆ. ವರಿಷ್ಠರ ಬಳಿ ನೀಡಿರುವ ಮಾಹಿತಿಯನ್ನ ಬೇರೆಯವರಿಗೆ ತಿಳಿಸಲು ಸಾಧ್ಯವಿಲ್ಲ. ಯಾವ ಹುದ್ದೆ ಕೂಡ ಶಾಶ್ವತ ಅಲ್ಲ. ಯಾವ ನಾಯಕರು ಕೂಡಾ ಶಾಶ್ವತ ಅಲ್ಲ. ಹೇಳಿಕೆ ಕೊಡುವವರು ಕೂಡ ಹಿಂದೆ ತಿರುಗಿ ಅವರ ಬೆನ್ನು ನೋಡಿಕೊಳ್ಳಬೇಕಾಗುತ್ತದೆ. ಸರ್ಕಾರ ಉತ್ತಮ ಆಡಳಿತ ನಡೆಸಲಿ ಎಂಬ ಜವಾಬ್ದಾರಿ ಕೊಟ್ಟಿದೆ. ಅದಕ್ಕೆ ಯೋಗ್ಯತೆ ಇಲ್ಲ ಅಂದ್ರೆ, ಎಲ್ಲರೂ ಸೇರಿ ಇದನ್ನ ಬಿಟ್ಟು ಚುನಾವಣೆಗೆ ಹೋಗುವುದು ವಾಸಿ ಎಂದು ಸಚಿವ ರಾಜಣ್ಣ ವಿರುದ್ಧ ಹರಿಹಾಯ್ದರು.

ಡಿಕೆಶಿ ಸಿಎಂ ಆಗಬೇಕು ಎಂಬ ಚಂದ್ರಶೇಖರನಾಥ ಸ್ವಾಮೀಜಿ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಶಿವಕುಮಾರ್ ಸಿಎಂ ಆಗಬೇಕು ಎಂಬುದು ಸ್ವಾಮೀಜಿಗಳ ಅಭಿಪ್ರಾಯ. ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ವೈಯಕ್ತಿಕ ಅಭಿಪ್ರಾಯ ತಿಳಿಸಿದ್ದಾರೆ. ಸಿಎಂ ಸ್ಥಾನದ ಬಗ್ಗೆ ತೀರ್ಮಾನ



ಮಾಡಬೇಕಾಗಿರೋದು ಪಕ್ಷದ ಹೈಕಮಾಂಡ್. ಈಗ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ. ಸಿಎಂ ಸ್ಥಾನ ಖಾಲಿಯಾದ ಸಂದರ್ಭದಲ್ಲಿ ಈ ವಿಷಯ ಚರ್ಚೆಗೆ ಬರುತ್ತದೆ ಎಂದರು.

ಮೂವರಲ್ಲ 9 ರಿಂದ 10 ಮಂದಿ ಹೆಸರೇಳಿದ್ದೇನೆ. ಅವರೆಲ್ಲರೂ ಡಿಸಿಎಂ ಸ್ಥಾನಕ್ಕೆ ಅರ್ಹರಿದ್ದಾರೆ. ಅವರೆಲ್ಲರನ್ನೂ ಡಿಸಿಎಂ ಮಾಡಬೇಕೆಂದು ನಾನು ಒತ್ತಾಯಿಸುತ್ತೇನೆ. ಈಗ ಇರುವ 33 ಮಂತ್ರಿಗಳಿಗೂ ಇರುವ ಅಧಿಕಾರ ಡಿಕೆಶಿ ಅವರಿಗೂ ಇದೆ ಎಂದು ತಿಳಿಸಿದರು.

ಯಾರೂ ಕೂಡ ಡಿ.ಕೆ.ಶಿವಕುಮಾರ್ ಟಾರ್ಗೆಟ್ ಮಾಡಲು ಸಾಧ್ಯವಿಲ್ಲ. ಯಾರಾದ್ರೂ ಟಾರ್ಗೆಟ್ ಮಾಡ್ತೇನೆ ಅನ್ನೋದು ಇದ್ರೆ, ಅದು ಅವರ ಭ್ರಮೆ. 35 ವರ್ಷಗಳ ಸುದೀರ್ಘ ರಾಜಕಾರಣ ಮೂಲಕ ರಾಜ್ಯದಲ್ಲಿ, ಪಕ್ಷದಲ್ಲಿ ಕೆಲಸ ಮಾಡುತ್ತಿದ್ದಾರೆ. ಯಾರದೋ ಹೆಸರಿನಲ್ಲಿ ರಾಜಕೀಯಕ್ಕೆ ಬಂದವರಲ್ಲ ಡಿ.ಕೆ.ಶಿವಕುಮಾರ್. ಹೋರಾಟದ ಮೂಲಕ ರಾಜಕಾರಣ ಮಾಡಿಕೊಂಡು ಬಂದವರು. ಸದ್ಯ ಪಕ್ಷದ ಅಧ್ಯಕ್ಷ ಹಾಗೂ ಡಿಸಿಎಂ ಆಗಿ ಜನರ ಸೇವೆ ಮಾಡುತ್ತಿದ್ದಾರೆ. ಬೇರೆಯವರು ಅವರವರ ಅಭಿಪ್ರಾಯ ತಿಳಿಸಲು ಅರ್ಹರಿದ್ದಾರೆ. ಡಿಕೆಶಿ ಅವರನ್ನ ಟಾರ್ಗೆಟ್ ಮಾಡಿ ಲೀಡರ್ ಆಗುತ್ತೇನೆ ಎಂದರೆ ಅದು ಅವರ ಭ್ರಮೆ ಆಗತ್ತದೆ ಅಷ್ಟೇ ಎಂದು ರಾಜಣ್ಣಗೆ ಪರೋಕ್ಷವಾಗಿ ಟಾಂಗ್ ಕೊಟ್ಟರು.

ಚನ್ನಪಟ್ಟಣದಲ್ಲಿ ಅನಿವಾರ್ಯತೆ ಬಂದರೆ ಸ್ಪರ್ಧೆ ಬಗ್ಗೆ ಮಾತನಾಡಿದ ಅವರು, ನನ್ನನ್ನು ಜನ ತಿರಸ್ಕಾರ ಮಾಡಿದ್ದಾರೆ. ನಾನು ಸಾಮಾನ್ಯ ಪ್ರಜೆಯಾಗಿ, ಕಾರ್ಯಕರ್ತನಾಗಿ ಇರುತ್ತೇನೆ. ಇದನ್ನ ಬಿಟ್ಟು ನಾನು ಸ್ಪರ್ಧೆ ಮಾಡಲ್ಲ. ಸಮರ್ಥ ಅಭ್ಯರ್ಥಿಯನ್ನೇ ಎದುರಾಳಿಯನ್ನಾಗಿ ಮಾಡುತ್ತೇವೆ. ಪಕ್ಷದ ಕಾರ್ಯಕರ್ತರ ಭಾವನೆ ತಿಳಿಯಲು ಅಧ್ಯಕ್ಷರು ಸಮಿತಿ ರಚಿಸಿದ್ದಾರೆ. ಪಕ್ಷ ಸಂಘಟನೆ ಮಾಡಲು ಕಾರ್ಯಕ್ರಮ ರೂಪಿಸುತ್ತಿದ್ದೇವೆ. ರಾಜ್ಯಾಧ್ಯಕ್ಷರು, ಮುಖ್ಯಮಂತ್ರಿ, ಜಿಲ್ಲಾ ನಾಯಕರು ಚುನಾವಣೆ ಮಾಡುವ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

ಚನ್ನಪಟ್ಟಣಕ್ಕೆ ಯಾರು ಮೊದಲು ಬಂದ್ರು ಅನ್ನೋದು ಬೇಡ. ಈಗ ಚನ್ನಪಟ್ಟಣ ಖಾಲಿ ಇದೆ. ಒಂದು ಕಣ್ಣು ರಾಮನಗರದಿಂದ ಹೋಗಾಯ್ತು. ಇನ್ನೊಂದು ಕಣ್ಣು ಚನ್ನಪಟ್ಟಣದಿಂದ ಹೋಗಾಯ್ತು. ಹೀಗಾಗಿ ಅವರ ಹಳೇ ಹೇಳಿಕೆಗಳನ್ನ ಮಾಧ್ಯಮಗಳು ತೋರಿಸಬೇಕು ಎಂದು ಹೆಚ್.ಡಿ.ಕುಮಾರಸ್ವಾಮಿಗೆ ಚಾಟಿ ಬೀಸಿದರು.

# ಚಿಣ್ಣರ ಕಲರವ ಅದ್ದೂರಿ

**ಬೆಂಗಳೂರು:** ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಶಾಸ್ತ್ರೀಯ ಸಂಗೀತ ಹಾಗೂ ನೃತ್ಯ ಘಟಕದ ರಾಜ್ಯ ಅಧ್ಯಕ್ಷರಾದ ಅನಂತ್ ವಿಕ್ರಮ್ ರವರು ಆಯೋಜಿಸಿದ್ದ ಚಿಣ್ಣರ ಕಲರವ ಸಂಚಿಕೆ 22 ನೇ ಕಾರ್ಯಕ್ರಮ ಬಹಳ ವಿಜೃಂಭಣೆಯಿಂದ ಜರುಗಿತು. ಪುತಾಣಿಗಳು ದೇವರಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಪ್ರಾರಂಭಿಸಲಾಯಿತು. ಗಣೇಶ ಕೌಸ್ತುಭ,ಚಂದ್ರಚೂಡ ಮುಂತಾದ ಹಾಡುಗಳಿಗೆ ಮಕ್ಕಳು ಅದ್ಭುತ ಪ್ರದರ್ಶನ ನೀಡಿದರು. ಕೇವಲ ಭರತನಾಟ್ಯವಲ್ಲದೇ ಯಕ್ಷಗಾನವನ್ನು ಸಹಾ ಪ್ರದರ್ಶಿಸಲಾಯಿತು. ತಟ್ಟೆಯ ಮೇಲೆ ಕಾಲುಗಳಿಟ್ಟು ತಲೆಯ ಮೇಲೆ ಕಳಸದೊಂದಿಗೆ ಮಾಡಿದ ನೃತ್ಯ,ಯಕ್ಷಗಾನ,ಪುತಾಣಿ ಮಹಿತಿ ನೃತ್ಯಗಳು ಸಭಿಕರ ಮನಸೂರಗೊಂಡಿದ್ದವು. ಹಿರಿಯ ಪತ್ರಕರ್ತರಾದ ಲೇಪಾಕ್ಷಿ ಸಂತೋಷರಾವ್ ರವರು ಕಲೆ ಯಾರೊಬ್ಬರ ಸೊತ್ತಲ್ಲ, ಸಾಧಕರ ಸೊತ್ತು. ಕಲೆಯು ನಿರಂತರ ಅಭ್ಯಾಸದಿಂದ ಮಾತ್ರ ನಮ್ಮದಾಗುತ್ತದೆ.ಇಂತಹ ಕಲೆಯನ್ನು ಸಾಧನೆ ಮಾಡುವುದೇ ಒಂದು ಜೀವನದ ಗುರಿಯಾಗಿರಬೇಕು.ಇಂತಹ ಅದ್ಭುತ ಕಲೆಗಳನ್ನು ಗ್ರಾಮಾಂತರ ಪ್ರದೇಶಗಳಲ್ಲಿ ಪರಿಚಯಿಸಬೇಕು, ಇಂತಹ ಕಲೆಗಳನ್ನು ಯುವ ಜನತೆ ಮುಂದಿನ ಪೀಳಿಗೆಗೆ



ಪರಿಚಯಿಸಲು ಮುಂದಾಗಬೇಕು. ಈ ನಿಟ್ಟಿನಲ್ಲಿ ನಮ್ಮ ಸಾಂಪ್ರದಾಯಿಕ ಕಲೆಗಳನ್ನು ಅಭ್ಯಸಿಸಿ ಪ್ರದರ್ಶಿಸಬೇಕು ಎಂದರು.

ಆಯೋಜಕರಾದ ವಿದ್ವಾನ್ ಅನಂತವಿಕ್ರಮ್ ಮಾತನಾಡಿ, ಚಿಣ್ಣರಿಗಾಗಿ ಈ ಕಾರ್ಯಕ್ರಮ ರೂಪಿಸಲಾಗಿದೆ.ಈವರೆಗೂ 21 ಸಂಚಿಕೆಗಳನ್ನು ಪರಿಚಯಿಸಲಾಗಿದೆ. ಇದು 22 ನೇಯ ಸಂಚಿಕೆ.ಮಕ್ಕಳಿಗೆ ತಮ್ಮ ಪ್ರದರ್ಶನ ನೀಡಲು ವೇದಿಕೆ ಕಲ್ಪಿಸಿಕೊಡಲು ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದರು.ಜೀವನದಲ್ಲಿ ಕಲೆಗೂ ಸಹಾ ಆದ್ಯತೆ ನೀಡಬೇಕಾಗಿದೆ ಎಂದರು. ಕಾರ್ಯಕ್ರಮದಲ್ಲಿ ಗುರುಗಳಾದ ಶ್ರೀರಂಜನಿ ಉಮೇಶ್,ನಾಗಶ್ರೀ ಸಾತ್ವಿಕ್,ರೂಪಾ ಆದಿಶೇಷನ್,ಸಾನ್ವಿಕ ಸಂದೀಪ್ ಕುಂದರ್ಗಿ ರವರ ವಿಧ್ಯಾರ್ಥಿಗಳು ತಮ್ಮ ಕಲಾಪ್ರದರ್ಶನ ನೀಡಿದರು. ನಟ್ಟುವಾಂಗದಲ್ಲಿ ವಿದ್ವಾನ್ ಅನಂತ ವಿಕ್ರಮ್,ಮೃದಂಗದಲ್ಲಿ ಜಿಎಸ್ ನಾಗರಾಜು, ವೇಣುವಿನಲ್ಲಿ ದೀಪಕ್ ಹೆಬ್ಬಾರ್ ಕಲಾವಿದರಿಗೆ ಸಹಕಾರ ನೀಡಿದರು. ರಾಘಶ್ರೀಅವರ ವಿವರಣಾತ್ಮಕ ನಿರೂಪಣೆ ಯಲ್ಲಿ ಕಾರ್ಯಕ್ರಮ ಅದ್ಬುತವಾಗಿ ಮೂಡಿಬಂದಿತು. ಕಾರ್ಯಕ್ರಮದಲ್ಲಿ ಚೈತ್ರ ಅನಂತ್,ರಾಮಚಂದ್ರ ಉಪಾಧ್ಯಾಯ,ನರಸಿಂಹ ಅಚಾರ್ಯ, ನಾಗೇಂದ್ರ, ಗೌಡ ಹಾಜರಿದ್ದರು.

## ಒಕ್ಕಲಿಗ ಸ್ವಾಮೀಜಿಗಳ ವಿರುದ್ಧ ಏಕವಚನ ಪ್ರಯೋಗ: ಸಿಎಂ ವಿರುದ್ಧ ಅಶೋಕ ಕಿಡಿ

**ಬೆಂಗಳೂರು:** ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಬೇಕು ಎಂದು ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಜಗದ್ಗುರು ಚಂದ್ರಶೇಖರನಾಥ ಸ್ವಾಮೀಜಿ ಹೇಳಿದ್ದರು. ಈ ಕುರಿತು ನವದೆಹಲಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಕ್ಕಲಿಗ ಸ್ವಾಮೀಜಿಗಳ ವಿರುದ್ಧ ಏಕವಚನ ಪ್ರಯೋಗ ಮಾಡಿದ್ದಾರೆ ಎಂದು ಆರೋಪಿಸಿ ವಿರೋಧ ಪಕ್ಷದ ನಾಯಕ ಆರ್ ಅಶೋಕ ಕಿಡಿಕಾರಿದ್ದಾರೆ. 'ಕೇಸರಿ, ಕುಂಕುಮ ಕಂಡರೆ ದ್ವೇಷ ಕಾರುವ ಸಿಎಂ ಸಿದ್ದರಾಮಯ್ಯ ಅವರು, ಈಗ ಒಕ್ಕಲಿಗ ಸ್ವಾಮೀಜಿಗಳ ವಿರುದ್ಧ ಏಕವಚನ



ಪ್ರಯೋಗ ಮಾಡಿ ನಿಂದಿಸುವ ಮೂಲಕ ಮತ್ತೊಮ್ಮೆ ತಮ್ಮ ಹಿಂದೂ ವಿರೋಧಿ ಧೋರಣೆ ಪ್ರದರ್ಶನ ಮಾಡಿದ್ದಾರೆ. ಸ್ವಾಮಿ ಸಿದ್ದರಾಮಯ್ಯನವರೇ, ನಿಮ್ಮ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ನಡುವೆ ವೈಮನಸ್ಸು ಇದ್ದರೆ, ಅದನ್ನ ಪಕ್ಷದ ವೇದಿಕೆಯಲ್ಲಿ ನಾಲ್ಕು ಗೋಡೆಗಳ ಮಧ್ಯೆ ಪರಿಹರಿಸಿಕೊಳ್ಳಿ. ಅದು ಬಿಟ್ಟು, ಸ್ವಾಮೀಜಿಗಳು ವ್ಯಕ್ತಪಡಿಸಿದ ಅಭಿಪ್ರಾಯದ ಬಗ್ಗೆ ಈ ರೀತಿ ಅಗೌರವದಿಂದ ಮಾತನಾಡುವುದು ನಿಮಗೆ ಶೋಭೆ ತರುವುದಿಲ್ಲ. ಒಕ್ಕಲಿಗ ಸಮುದಾಯ ಇದನ್ನ ತೀವ್ರವಾಗಿ ಖಂಡನೆ ಮಾಡುತ್ತದೆ ಎಂದು ಆರ್ ಅಶೋಕ ಎಕ್ಸ್ ಖಾತೆಯಲ್ಲಿ ವಾಗ್ದಾಳಿ ನಡೆಸಿದ್ದಾರೆ.

## ಅತ್ತಿಗೆ ತಂಗಿಯಿಂದ ಮದುವೆಗೆ ನಿರಾಕರಣೆ ಮನನೊಂದು ಯುವಕ ಆತ್ಮಹತ್ಯೆ

**ರಾಯಚೂರು:** ಪ್ರೇಮ ವೈಫಲ್ಯ ಹಿನ್ನೆಲೆ ಯುವಕನೋರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನ ಕನಸಾವಿಯಲ್ಲಿ ನಡೆದಿದೆ. ಸಂತೋಷ್ (22) ನೇಣುಬಿಗಿದುಕೊಂಡು ಸಾವಿಗೆ ಶರಣಾದ ಯುವಕ. ಮನೆಯಲ್ಲಿನ ಫ್ಯಾನ್‌ಗೆ ನೇಣು ಬಿಗಿದುಕೊಂಡು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆತ್ಮಹತ್ಯೆಗೂ ಮೊದಲು ನಾನು ಒಬ್ಬ ಹುಚ್ಚು ಪ್ರೇಮಿ ಎಂದು ವಾಟ್ಸಪ್‌ನಲ್ಲಿ ಸ್ಟೇಟಸ್ ಹಾಕಿ ಬಳಿಕ ಆತ್ಮಹತ್ಯೆಗೆ ಶರಣಾಗಿದ್ದಾನೆ. ಸಂತೋಷ್ ಅತ್ತಿಗೆ ತಂಗಿಯನ್ನು ಪ್ರೀತಿಸುತ್ತಿದ್ದ. ಮದುವೆಗೆ ಯುವತಿಯಿಂದ ಒಪ್ಪಿಗೆ ಸಿಗದಿದ್ದಾಗ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮುದಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನಂಬಿಕೆ ಉಳಿಸಿದ ವಿರಾಟ್

ಆದರೆ ರೋಹಿತ್ ಶರ್ಮಾ ತಮ್ಮ ನಿರ್ಧಾರಕ್ಕೆ ಅಚಲವಾಗಿದ್ದರು. ಯಾವುದೇ ಒತ್ತಡಕ್ಕೂ ಮಣಿಯಲು ಹಿಟ್ ಮ್ಯಾನ್ ಸಿದ್ಧರಿರಲಿಲ್ಲ.

ಸೆಮಿಫೈನಲ್ ನಲ್ಲಿ ಕಳಪೆ ಪ್ರದರ್ಶನ ನೀಡಿದ ಬಳಿಕ ಕೂಡ ರೋಹಿತ್ ಶರ್ಮಾ ವಿರಾಟ್ ಕೊಹ್ಲಿಯ ಬೆಂಬಲಕ್ಕೆ ನಿಂತಿದ್ದರು. ಅಲ್ಲದೆ ಅವರು ಫೈನಲ್ ನಲ್ಲಿ ಆಡುತ್ತಾರೆ. ಅದಕ್ಕಾಗಿ ರನ್ ಗಳಿಕೆಯನ್ನು ಉಳಿಸಿಕೊಂಡಿದ್ದಾರೆ ಎಂಬ ಹೇಳಿಕೆ ನೀಡಿದ್ದರು. ರೋಹಿತ್ ಶರ್ಮಾ ಅವರ ಈ ಹೇಳಿಕೆ ವಿರುದ್ಧ ಕೂಡ ಕೆಲವರು ಕೊಂಕು ನುಡಿದಿದ್ದರು.

ಆದರೆ ರೋಹಿತ್ ಶರ್ಮಾ ಅವರ ನಂಬಿಕೆ ಹುಸಿಯಾಗಲಿಲ್ಲ. ಫೈನಲ್ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದರು. ಒಂದೆಡೆ ಕ್ರೀಸ್ ಕಚ್ಚಿ ನಿಂತು ಇನಿಂಗ್ಸ್ ಕಟ್ಟಿದರು. ಪರಿಣಾಮ ಅರ್ಧಶತಕ ಪೂರೈಸಲು 48 ಎಸೆತಗಳನ್ನು ತೆಗೆದುಕೊಂಡರು. ಇದರ ಬೆನ್ನಲ್ಲೇ ಮತ್ತೆ ಕೊಹ್ಲಿ ಸೋಷಿಯಲ್ ಮೀಡಿಯಾದಲ್ಲಿ ಟ್ರೋಲ್ ಆದರು.

ಅರ್ಧಶತಕದ ಬಳಿಕ ಬ್ಯಾಟಿಂಗ್ ಗೇರ್ ಬದಲಿಸಿದ ವಿರಾಟ್ ಕೊಹ್ಲಿ ಅಬ್ಬರಿಸಿದರು. ಪರಿಣಾಮ ಕಿಂಗ್ ಕೊಹ್ಲಿ ಬ್ಯಾಟ್ ನಿಂದ 59 ಎಸೆತಗಳಲ್ಲಿ 76 ರನ್ ಗಳು ಮೂಡಿಬಂತು. ಈ ಅರ್ಧಶತಕದ ನೆರವಿನಿಂದ ಟೀಮ್ ಇಂಡಿಯಾ 176 ರನ್ ಗಳಿಸಲು ಸಾಧ್ಯವಾಯಿತು. ಈ ಗುರಿಯನ್ನು ಬೆನ್ನತ್ತಿದ ಸೌತ್ ಆಫ್ರಿಕಾ ತಂಡವು 169 ರನ್ ಗಳಿಸಲಷ್ಟೇ ಶಕ್ತರಾದರು. ಈ ಮೂಲಕ ಟೀಮ್ ಇಂಡಿಯಾ 7 ರನ್ ಗಳ ರೋಚಕ ಜಯ ಸಾಧಿಸಿತು.

ಅಂದರೆ ಇಲ್ಲಿ ಟಿ20 ವಿಶ್ವಕಪ್ ಆಯ್ಕೆಯಿಂದ ಹಿಡಿದು, ಅಂತ್ಯದವರೆಗೂ ಬೆಂಬಲ ಸೂಚಿಸಿದ ನಾಯಕ ರೋಹಿತ್ ಶರ್ಮಾ ಅವರ ನಂಬಿಕೆಯನ್ನು ಉಳಿಸಿಕೊಳ್ಳುವಲ್ಲಿ ವಿರಾಟ್ ಕೊಹ್ಲಿ ಕೊನೆಗೂ ಯಶಸ್ವಿಯಾಗಿದ್ದಾರೆ. ಅಲ್ಲದೆ ದಿಗ್ಗಜರಿಬ್ಬರು ಸೇರಿ 17 ವರ್ಷಗಳ ಬಳಿಕ ಭಾರತ ತಂಡಕ್ಕೆ ಟಿ20 ವಿಶ್ವಕಪ್ ತಂದುಕೊಡುವಲ್ಲಿ ಸಫಲರಾಗಿರುವುದು ವಿಶೇಷ.

### ರೋಹಿತ್

ಇನ್ನು ಈ ಗೆಲುವಿನ ಬಳಿಕ ಸುದ್ದಿಗೋಷ್ಠಿಯಲ್ಲಿ ಕಾಣಿಸಿಕೊಂಡ ರೋಹಿತ್ ಶರ್ಮಾ, ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್ ಗೆ ವಿದಾಯ ಹೇಳಿದ್ದಾರೆ. ನಾನು ಟಿ20 ಸ್ವರೂಪದೊಂದಿಗೆ ವೃತ್ತಿಜೀವನ ಆರಂಭಿಸಿದ್ದೆ. ಇದೀಗ ಈ ಸ್ವರೂಪಕ್ಕೆ ವಿದಾಯ ಹೇಳಲು ಸಕಾಲ. ಹೀಗಾಗಿ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್ ನಿಂದ ನಿವೃತ್ತಿ ಹೊಂದುತ್ತಿರುವುದಾಗಿ ರೋಹಿತ್ ಶರ್ಮಾ ತಿಳಿಸಿದ್ದಾರೆ.

ಈ ಗೆಲುವಿನೊಂದಿಗೆ ಟೀಮ್ ಇಂಡಿಯಾ ಪರ ವಿಶ್ವಕಪ್ ಗೆದ್ದ ಮೂರನೇ ನಾಯಕ ಎಂಬ ಹೆಗ್ಗಳಿಕೆಗೆ ರೋಹಿತ್ ಶರ್ಮಾ ಪಾತ್ರರಾಗಿದ್ದಾರೆ. 1983 ರಲ್ಲಿ ಕಪಿಲ್ ದೇವ್ ಮೊದಲ ಬಾರಿಗೆ ಈ ಸಾಧನೆ ಮಾಡಿದರೆ, 2007 ಮತ್ತು 2011 ರಲ್ಲಿ ಭಾರತ ತಂಡ ಮಹೇಂದ್ರ ಸಿಂಗ್ ಧೋನಿ ನಾಯಕತ್ವದಲ್ಲಿ ವಿಶ್ವಕಪ್ ಗೆದ್ದಿತ್ತು. ಇದೀಗ 2024 ರಲ್ಲಿ ಟಿ20 ವಿಶ್ವಕಪ್ ಗೆಲ್ಲುವ ಮೂಲಕ ರೋಹಿತ್ ಶರ್ಮಾ ಈ ಸಾಧನೆ ಮಾಡಿದ ಮೂರನೇ ನಾಯಕ ಎನಿಸಿಕೊಂಡಿದ್ದಾರೆ.

### ಸಂಭ್ರಮಾಚರಣೆ

ಟೀಂ ಇಂಡಿಯಾ ಆಟಗಾರರು ಮತ್ತು ಕೋಚ್ ರಾಹುಲ್ ದ್ರಾವಿಡ್ ಮೈದಾನದಲ್ಲಿ ಗೆಲುವಿನ ಸಂಭ್ರಮಾಚರಣೆ ನಡೆಸುತ್ತಿದ್ದರು. ಈ ವೇಳೆ ಟೀಮ್ ಇಂಡಿಯಾ ಆಟಗಾರರು ಕೋಚ್ ರಾಹುಲ್ ದ್ರಾವಿಡ್ ಅವರನ್ನು ಮೇಲಕ್ಕೆ ತೂರಿ, ಕೋಚ್ ಗೆ ಧನ್ಯವಾದ ಸಮರ್ಪಿಸಿದರು. ಇದು ಭಾವನಾತ್ಮಕ ಸಂಭ್ರಮಾಚರಣೆಗೆ ಸಾಕ್ಷಿಯಾಯಿತು.

ಮೊದಲನೇ ಪುಟದಿಂದ...

## ಜಸ್ ಪ್ರೀತ್ ಬುಮ್ರಾ

ಅದರಲ್ಲೂ ಕೊನೆಯ 5 ಓವರ್ ಗಳಲ್ಲಿ ಬುಮ್ರಾ ಎಸೆದ 2 ಓವರ್‌ಗಳು ಭಾರತದ ಗೆಲುವಿನಲ್ಲಿ ನಿರ್ಣಾಯಕ ಪಾತ್ರವಹಿಸಿತು.

ಏಕೆಂದರೆ 15 ಓವರ್ ಗಳಲ್ಲಿ ಸೌತ್ ಆಫ್ರಿಕಾ ತಂಡವು 147 ರನ್ ಬಾರಿಸಿ ಗೆಲುವಿನತ್ತ ಮುಖ ಮಾಡಿತ್ತು. ಅಲ್ಲದೆ ಕೊನೆಯ 30 ಎಸೆತಗಳಲ್ಲಿ ಬೇಕಿದದ್ದು ಕೇವಲ 30 ರನ್ ಗಳು ಮಾತ್ರ. ಈ ಹಂತದಲ್ಲಿ ದಾಳಿಗಿಳಿದ ಬುಮ್ರಾ ಸೌತ್ ಆಫ್ರಿಕಾ ಬ್ಯಾಟರ್ ಗಳ ಮೇಲೆ ಒತ್ತಡ ಹೇರುವಲ್ಲಿ ಯಶಸ್ವಿಯಾದರು.

16ನೇ ಓವರ್ ನಲ್ಲಿ ಜಸ್ ಪ್ರೀತ್ ಬುಮ್ರಾ ನೀಡಿದ್ದು ಕೇವಲ 4 ರನ್ ಗಳು ಮಾತ್ರ. ಇದರಿಂದ ಒತ್ತಡಕ್ಕೆ ಸಿಲುಕಿದ ಹೆನ್ರಿಕ್ ಕ್ಲಾಸೆನ್ 17ನೇ ಓವರ್ ನ ಮೊದಲ ಎಸೆತದಲ್ಲಿ ಹಾರ್ದಿಕ್ ಪಾಂಡ್ಯಗೆ ವಿಕೆಟ್ ಒಪ್ಪಿಸಿದರು. ಅಲ್ಲದೆ ಈ ಓವರ್ ನಲ್ಲಿ ಪಾಂಡ್ಯ ನೀಡಿದ್ದು ಕೇವಲ 4 ರನ್ ಗಳು ಮಾತ್ರ.

ಇದಾದ ಬಳಿಕ 18ನೇ ಓವರ್ ನಲ್ಲಿ ಬಿಗಿ ದಾಳಿ ಸಂಘಟಿಸಿದ ಜಸ್ ಪ್ರೀತ್ ಬುಮ್ರಾ ಮಾರ್ಕೊ ಯಾನ್ಸೆನ್ ಅವರನ್ನು ಕ್ಲೀನ್ ಬೌಲ್ಡ್ ಮಾಡಿದರು. ಈ ಓವರ್ ನಲ್ಲಿ ಬುಮ್ರಾ ನೀಡಿದ್ದು ಕೇವಲ 2 ರನ್ ಗಳು ಮಾತ್ರ.

ಅಂದರೆ ಸೌತ್ ಆಫ್ರಿಕಾ ಪಾಲಿಗೆ ನಿರ್ಣಾಯಕವಾಗಿದ್ದ ಕೊನೆಯ ಎರಡು ಓವರ್ ಗಳಲ್ಲಿ ಜಸ್ ಪ್ರೀತ್ ಬುಮ್ರಾ ಕೇವಲ 6 ರನ್ ಗಳನ್ನು ಮಾತ್ರ ನೀಡಿದ್ದರು. ಪರಿಣಾಮ ಸೌತ್ ಆಫ್ರಿಕಾ ತಂಡದ ಗುರಿ ಅಂತಿಮ 2 ಓವರ್ ಗಳಲ್ಲಿ 20 ರನ್ ಗಳಿಗೆ ಬಂದು ನಿಂತಿತು.

ಈ ಹಂತದಲ್ಲಿ 19ನೇ ಓವರ್ ಎಸೆದ ಅರ್ಷದೀಪ್ ಸಿಂಗ್ 4 ರನ್ ಮಾತ್ರ ನೀಡಿದರು. ಅದರಂತೆ ಕೊನೆಯ ಓವರ್ ನಲ್ಲಿ 16 ರನ್ ಗುರಿ ಪಡೆದ ಸೌತ್ ಆಫ್ರಿಕಾ ತಂಡಕ್ಕೆ ಡೇವಿಡ್ ಮಿಲ್ಲರ್ ಗೆಲುವಿನ ಭರವಸೆ ಮೂಡಿಸಿದ್ದರು.

ಆದರೆ ಹಾರ್ದಿಕ್ ಪಾಂಡ್ಯ ಎಸೆದ 20ನೇ ಓವರ್ ನ ಮೊದಲ ಎಸೆತದಲ್ಲಿ ಬೌಂಡರಿ ಲೈನ್ ನಲ್ಲಿ ಸೂರ್ಯಕುಮಾರ್ ಯಾದವ್ ಹಿಡಿದ ಅದ್ಭುತ ಕ್ಯಾಚ್ ನಿಂದಾಗಿ ಡೇವಿಡ್ ಮಿಲ್ಲರ್ ಇನಿಂಗ್ಸ್ ಅಂತ್ಯಗೊಂಡಿತು. ಅಲ್ಲದೆ ಕೊನೆಯ ಓವರ್ ನಲ್ಲಿ ಕೇವಲ 8 ರನ್ ನೀಡಿ ಪಾಂಡ್ಯ ಭಾರತ ತಂಡಕ್ಕೆ 7 ರನ್ ಗಳ ರೋಚಕ ಜಯ ತಂದು ಕೊಟ್ಟರು.

ಇಲ್ಲಿ ಅಂತಿಮ ಓವರ್ ಗಳಲ್ಲಿ ಟೀಮ್ ಇಂಡಿಯಾ ಬೌಲರ್ ಗಳು ಸಾಂಘಿಕ ಪ್ರದರ್ಶನ ನೀಡಿದ್ದು ಗೆಲುವಿಗೆ ಪ್ರಮುಖ ಕಾರಣವಾಯಿತು. ಅದರಲ್ಲೂ 4 ಓವರ್ ಗಳಲ್ಲಿ ಕೇವಲ 18 ರನ್ ನೀಡಿ 2 ವಿಕೆಟ್ ಕಬಳಿಸಿದ ಜಸ್ ಪ್ರೀತ್ ಬುಮ್ರಾ ಇಡೀ ಪಂದ್ಯದ ಚಿತ್ರಣ ಬದಲಿಸಿ ಗೆಲುವಿನ ರೂವಾರಿ ಎನಿಸಿಕೊಂಡರು.

## ಬೇಡಿಕೆ ನೇರವೇರಿಸುವ ಭರವಸೆ

ಅನುಮೋದನೆ ಬಾಕಿ ಇದೆ. ಮೇಕೆದಾಟು ಯೋಜನೆಗೆ ಪ್ರಧಾನಿಗಳು ಖುದ್ದಾಗಿ ಆಸಕ್ತಿ ವಹಿಸುವಂತೆಯೂ ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್ 2023-2024 ನಲ್ಲಿ ಘೋಷಿಸಿದಂತೆ 5300 ಕೋಟಿ ರೂ. ಗಳ ಬಿಡುಗಡೆ ಹಾಗೂ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆಗೆ ಶೀಘ್ರವಾಗಿ ತೀರುವಳಿ ನೀಡುವಂತೆ ಜಲಶಕ್ತಿ ಸಚಿವಾಲಯ ಮತ್ತು ಪರಿಸರ ಹಾಗೂ ಅರಣ್ಯ ಮಂತ್ರಾಲಯದ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಿದ್ದಾರೆ. ಕಿತ್ತೂರು ಕರ್ನಾಟಕ ಭಾಗದ ಜನರ ಬಹುದಿನಗಳ ಕನಸಿನ ಯೋಜನೆಯಾದ ಮಹಾದಾಯಿ ಯೋಜನೆಯಿಂದಾಗಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯಲಿದೆ ಎಂದಿದ್ದಾರೆ.

ಬೆಂಗಳೂರು ನಗರದ ಸಂಚಾರ ದಟ್ಟಣೆ ನಿವಾರಣೆಗೆ 60 ಕಿ.ಮೀ ಸುರಂಗ ಮಾರ್ಗಕ್ಕೆ 3000 ಕೋಟಿ ವೆಚ್ಚವಾಗಲಿದ್ದು, ಯೋಜನೆಯಿಂದ ಹಲವಾರು ಲಾಭಗಳಿವೆ. ಈ ಸುರಂಗ ಮಾರ್ಗ ರಾಷ್ಟ್ರೀಯ ಹೆದ್ದಾರಿ 7 ನ್ನು ರಾ.ಹೆ.4 ಕ್ಕೆ ಸಂಪರ್ಕಿಸುವುದರಿಂದ ಕರ್ನಾಟಕ ಸರ್ಕಾರ ಕೇಂದ್ರ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಸಹಯೋಗದೊಂದಿಗೆ ಕೈಗೊಳ್ಳಬಹುದಾಗಿದ್ದು, ಕೇಂದ್ರ ಬಜೆಟ್ ಮೂಲಕ ರಾಜ್ಯ ಸರ್ಕಾರ ಹಾಗೂ ಎನ್.ಹೆಚ್.ಎ.ಐ ಗೆ ಅನುದಾನ ನೀಡುವಂತೆ ಮನವಿ ಮಾಡಿದ್ದಾರೆ.

ಕಲ್ಯಾಣ ಕರ್ನಾಟಕದ ಭಾಗದ ಏಳು ಜಿಲ್ಲೆಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 3000 ಕೋಟಿ ರೂ. ಗಳ ಅನುದಾನವನ್ನು ಬಜೆಟ್ ನಲ್ಲಿ ಮೀಸಲಿರಿಸಿದ್ದು ಕೇಂದ್ರ ಸರ್ಕಾರವು ತನ್ನ 2024-25 ರ ಬಜೆಟ್ ನಲ್ಲಿ ಅನುರೂಪದ ಅನುದಾನವನ್ನು ಒದಗಿಸಲು ಹಾಗೂ ಕೇಂದ್ರ ಸರ್ಕಾರದ ಅಭಿವೃದ್ಧಿ ಆಕಾಂಕ್ಷಿ ಜಿಲ್ಲಾ ಕಾರ್ಯಕ್ರಮದಡಿ ಒದಗಿಸುವ ಅನುದಾನವನ್ನು ಹೆಚ್ಚಿಸಲು ಮತ್ತು ಹೊಸ ಕಾರ್ಯಕ್ರಮಗಳನ್ನು ಯೋಜನೆಯಲ್ಲಿ ಸೇರ್ಪಡೆಗೊಳಿಸಲು ಅನುಕೂಲವಾಗುವಂತೆ ಧನಸಹಾಯ ನೀಡಲು ಕೋರಲಾಗಿದೆ.

## ಕೂಗಿಗೆ ಟಾಂಗ್

ಚಂದ್ರಶೇಖರ ಸ್ವಾಮೀಜಿ ಸಿಎಂ ಬದಲಾವಣೆ ಬಗ್ಗೆ ಸಾರ್ವಜನಿಕವಾಗಿಯೇ ದನಿ ಎತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ತಮ್ಮ ಸ್ಥಾನ ಬಿಟ್ಟುಕೊಟ್ಟು, ಡಿಕೆ ಶಿವಕುಮಾರ್ ಅವರನ್ನು ಸಿಎಂ ಮಾಡಬೇಕು ಅಂತ ಚಂದ್ರಶೇಖರ ಸ್ವಾಮೀಜಿ ಆಗ್ರಹಿಸಿದ್ದರು. ಇದಾದ ಬಳಿಕ ಸಿಎಂ ಬದಲಾವಣೆ ಕೂಗು ಜೋರಾಗಿದೆ. ಆದರೆ ಸಿಎಂ ಬದಲಾವಣೆ ಬಯಸಿದ್ದವರಿಗೆ ಟಾಂಗ್ ಕೊಡುವಂತೆ ಸಿಎಂ ಸಿದ್ದರಾಮಯ್ಯ ಫೋಟೋವೊಂದನ್ನು ಶೇರ್ ಮಾಡಿದ್ದಾರೆ! ರಾಹುಲ್ ಗಾಂಧಿ ಜೊತೆ ನಿಂತಿದ್ದಲ್ಲದೇ, ತಾವೇ ರಾಹುಲ್ ಗಾಂಧಿ ಅವ್ರ ಭುಜ ತಟ್ಟುತ್ತಿರೋ ಫೋಟೋವನ್ನು ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ! ಇದು ವಿರೋಧಿ ಬಣಕ್ಕೆ ಬೇರೆಯದ್ದೇ ಸಂದೇಶ ಅಂತ ರಾಜಕೀಯ ವಿಶ್ಲೇಷಕರು ಹೇಳ್ತಿದ್ದಾರೆ.

ಸಿಎಂ ಸಿದ್ದರಾಮಯ್ಯ ಇಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾದ್ರು. ದೆಹಲಿಗೆ ಭೇಟಿ ನೀಡಿದ್ದ ಸಿದ್ದರಾಮಯ್ಯ, ರಾಹುಲ್ ಗಾಂಧಿಯವರನ್ನು ಭೇಟಿಯಾದ್ರು. ಈ ವೇಳೆ ರಾಹುಲ್ ಗಾಂಧಿ ಜೊತೆ ಇರುವ ಫೋಟೋವನ್ನು ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ.

**ಫೋಟೋದ ಮೂಲಕ ವಿರೋಧಿ ಬಣಕ್ಕೆ ಸಂದೇಶ:** ರಾಹುಲ್ ಗಾಂಧಿ ಅವರ ಭುಜದ ಮೇಲೆ ಕೈಹಾಕಿರೋ ಫೋಟೋವನ್ನು ಸಿದ್ದರಾಮಯ್ಯ ಶೇರ್ ಮಾಡಿದ್ದಾರೆ. ಈ ಫೋಟೋದ ಮೂಲಕ ಸಿಎಂ ಬದಲಾವಣೆ ಕೂಗೆಬ್ಬಿಸಿದವರಿಗೆ ಸಿದ್ದರಾಮಯ್ಯ ಸಂದೇಶ ಕೊಟ್ಟಂತೆ ಕಾಣುತ್ತಿದೆ. ತಾನು ಹೈಕಮಾಂಡ್ ಮಟ್ಟದಲ್ಲಿ ಎಷ್ಟು ಪ್ರಭಾವಿಯಾಗಿದ್ದೇನೆ ಅನ್ನೋದನ್ನು ತೋರಿಸಿಕೊಟ್ಟಂತೆ ಕಾಣಿಸುತ್ತಿದೆ ಈ ಫೋಟೋ!

**ಸ್ವಾಮೀಜಿಗೂ, ರಾಜಕೀಯ ಪಕ್ಷಕ್ಕೂ ಏನು ಸಂಬಂಧ:** ಸ್ವಾಮೀಜಿಗೂ ರಾಜಕೀಯ ಪಕ್ಷಕ್ಕೂ ಏನಾದ್ರೂ ಸಂಬಂಧ ಇದೆಯಾ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮುಖ್ಯಮಂತ್ರಿ ಯಾರಾಗಬೇಕೆಂದು ಶಾಸಕರು ಹಾಗೂ ಹೈಕಮಾಂಡ್ ನಿರ್ಧಾರ ಮಾಡುತ್ತದೆ ಅಂತ ಟ್ವೀಟ್ ಮಾಡಿದ್ದಾರೆ. ಈ ಮೂಲಕ ಚಂದ್ರಶೇಖರ್ ಸ್ವಾಮೀಜಿ ಸೇರಿದಂತೆ ಸಿಎಂ ಬದಲಾವಣೆ ಕೂಗೆಬ್ಬಿಸಿದ್ದ ತಮ್ಮ ವಿರೋಧಿಗಳಿಗೆ ಸಿದ್ದರಾಮಯ್ಯ ಟಾಂಗ್ ಕೊಟ್ಟಿದ್ದಾರೆ.

## ಶೆಲ್ಟರ್

ರಾಜ್ಯದಲ್ಲಿ ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ ಎಂದು ಹವಾಮಾನ ತಜ್ಞರು ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯ ಮುಜರಾಯಿ ಇಲಾಖೆಗೆ ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಹೊಸ ಸಲಹೆ ಕೊಟ್ಟಿದ್ದಾರೆ. ಆಷಾಢ ಮುಗಿದು ಶ್ರಾವಣ ಮಾಸ ಆರಂಭವಾದಾಗ ಅಥವಾ ಮಳೆಗಾಲದಲ್ಲಿ ಮಳೆ ಆರ್ಭಟದ ಮಧ್ಯೆ ದೇವಸ್ಥಾನಕ್ಕೆ ಹೋಗೋದು ಹೇಗಪ್ಪಾ ಅನ್ನೋ ತಲೆನೋವು ಭಕ್ತಾದಿಗಳಲ್ಲಿ ಇರುತ್ತದೆ. ಜೊತೆಗೆ ಮಳೆ ಬಂದಾಗ ದೇವಸ್ಥಾನದ ಮುಂದೆ ಗಂಟೆಗಟ್ಟಲೆ ಕ್ಯೂ ನಿಲ್ಲಬೇಕಾದ ಪರಿಸ್ಥಿತಿ ಸಹ ಎದುರಾಗಬಹುದು. ಹೀಗಾಗಿ ಮಳೆಗಾಲದಲ್ಲಿ ದೇವಾಲಯಕ್ಕೆ ಬರುವ ಭಕ್ತಾದಿಗಳ ಸಂಖ್ಯೆ ಕಡಿಮೆಯಾಗುತ್ತದೆ.

ಇನ್ನು ಮಳೆಗಾಲದಲ್ಲಿ ಉಂಟಾಗುವ ಇಂತಹ ಸಮಸ್ಯೆ ನಿವಾರಣೆಗೆ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಮುಜರಾಯಿ ಇಲಾಖೆಗೆ ದೇವಾಲಯಗಳಲ್ಲಿ ಶೆಲ್ಟರ್ ನಿರ್ಮಾಣಕ್ಕೆ ಸಲಹೆ ನೀಡಿದ್ದಾರೆ. ಅದರಂತೆ ರಾಜ್ಯದ ಮುಜರಾಯಿ ವ್ಯಾಪ್ತಿಯ ಎಲ್ಲಾ ದೇವಾಲಯಗಳ ಮುಂಭಾಗದಲ್ಲಿಯೂ ಶೆಲ್ಟರ್‌ಗಳು ತಲೆಯೆತ್ತಲಿವೆ.

ಈ ಬಗ್ಗೆ ಮಾತನಾಡಿದ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಬಿಸಿಲಿನಿಂದ ರಕ್ಷಿಸಲು ಭಕ್ತಾದಿಗಳಿಗೆ ದೇವಾಲಯಗಳಲ್ಲಿ ಶಾಮಿಯಾನ ವ್ಯವಸ್ಥೆ ಮಾಡಿದ್ದೆವು. ಈಗ ಮಳೆಗಾಲದಲ್ಲಿ ಭಕ್ತಾದಿಗಳಿಗಾಗಿ ದೇಗುಲದ ಮುಂಭಾಗದಲ್ಲಿ ಶೆಲ್ಟರ್ ನಿರ್ಮಿಸಲು ಸಲಹೆ ಕೊಟ್ಟಿದ್ದೇನೆ. ಅದರಂತೆ ದೇವಾಲಯದಲ್ಲಿ ಶೆಲ್ಟರ್‌ಗಳು ನಿರ್ಮಾಣವಾಗಲಿವೆ. ಇದರಿಂದ ವಯಸ್ಸಾದ ಹಾಗೂ ಮಕ್ಕಳಿಗೆ ಅನುಕೂಲವಾಗಲಿದೆ. ಮೊದಲನೇ ಹಂತದಲ್ಲಿ ಹೆಚ್ಚು ಮಳೆ ಬರುವ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳ ದೇವಾಲಯಗಳಲ್ಲಿ ಶೆಲ್ಟರ್ ನಿರ್ಮಿಸಲಾಗುವುದು ಎಂದರು. ಒಟ್ಟಿನಲ್ಲಿ ಮುಜರಾಯಿ ಇಲಾಖೆಯ ಈ ನಿರ್ಧಾರ ಭಕ್ತಾದಿಗಳಿಗೆ ಸಹಾಯವಾಗಲಿದೆ.

## ಜಾರಿ

ಐಪಿಸಿ (ಇಂಡಿಯನ್ ಪೀನಲ್ ಕೋಡ್) ಭಾರತೀಯ ನ್ಯಾಯ ಸಂಹಿತಾ, ಸಿಆರ್‌ಪಿಸಿ( ಕ್ರಿಮಿನಲ್ ಪ್ರೊಸಿಜರ್ ಕೋಡ್)- ಭಾರತೀಯ ನಾಗರೀಕ ಸುರಕ್ಷಾ ಸಂಹಿತಾ 2023ಬಿಎನ್‌ಎಸ್‌ಎಸ್), (ಇಂಡಿಯನ್ ಎವಿಡೆನ್ಸ್ ಆಕ್ಟ್ ) ಭಾರತೀಯ ಸಾಕ್ಷ್ಯ ಅಧಿನಿಯಮ 2023 ಬಿಎಸ್‌ಎ ಕಾಲಮಿತಿಯೊಳಗೆ ತನಿಖೆ ಮತ್ತು ತ್ವರಿತ ನ್ಯಾಯ ಖಾತ್ರಿಪಡಿಸುವ ನಿಟ್ಟಿನಲ್ಲಿ ಪ್ರಮುಖ ಬದಲಾವಣೆ ಮಾಡಲಾಗಿದೆ. ಶಾಸನಗಳ ಮೂಲಕ ಡಿಜಿಟಲ್ ದಾಖಲೆಗಳನ್ನು ಪ್ರಾಥಮಿಕ ಪುರಾವೆಗಳಾಗಿಸುವಲ್ಲಿ ಪ್ರಮುಖ ಬದಲಾವಣೆ ಮಾಡಲಾಗಿದೆ.

ಮೂರು ಕ್ರಿಮಿನಲ್ ಕಾನೂನುಗಳನ್ನು ಕಳೆದ ವರ್ಷವೇ ಸಂಸತ್ತು ಅಂಗೀಕರಿಸಿತ್ತು. ಅದೇ ತಿಂಗಳು ರಾಷ್ಟ್ರಪತಿಗಳ ಒಪ್ಪಿಗೆಯನ್ನೂ ಸಹ ಪಡೆಯಲಾಗಿತ್ತು. ಆದರೆ, ಅವು ಜಾರಿಗೆ ಬಂದಿರಲಿಲ್ಲ. ಈ ವರ್ಷ ಫೆಬ್ರವರಿ 25ರಂದು ಮೂರು ಕಾನೂನುಗಳು ನಾಳೆಯಿಂದ ಜಾರಿಗೆ ಬರುತ್ತವೆ ಎಂದು ಸರ್ಕಾರವು ಅಧಿಸೂಚನೆಯನ್ನು ಹೊರಡಿಸಿತ್ತು.

ಭಾರತೀಯ ಸಾಕ್ಷ್ಯ ಅಧಿನಿಯಮ. ಈ ಅಧಿನಿಯಮವನ್ನು ಮೂರು ಭಾಗಗಳಾಗಿ ವಿಂಗಡಿಸಲಾಗಿದೆ ಮತ್ತು ಈ ಅಧಿನಿಯಮದ ಅಡಿಯಲ್ಲಿ ಒಟ್ಟು 11 ಅಧ್ಯಾಯಗಳಿವೆ.

## ಶೀಘ್ರದಲ್ಲೇ ರಾಜ್ಯದಲ್ಲಿ ಶವರ್ಮಾ ಬ್ಯಾನ್

**ಬೆಂಗಳೂರು:** ಗೋಬಿ ಮಂಚೂರಿ ಹಾಗೂ ಕಬಾಬ್ ಬಳಿಕ ಇದೀಗ ರಾಜ್ಯದಲ್ಲಿ ಶವರ್ಮಾ ಬ್ಯಾನ್ ಮಾಡಲು ಸರ್ಕಾರ ಚಿಂತನೆ ನಡೆಸುತ್ತಿದೆ ಎನ್ನಲಾಗುತ್ತಿದೆ. ಚಿಕನ್ ಶವರ್ಮಾಗಳಲ್ಲಿ ಬ್ಯಾಕ್ಟೀರಿಯಾ ಹಾಗೂ ಈಸ್ಟ್ ಪತ್ತೆಯಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಕೇರಳದಲ್ಲಿ ಈಗಾಗಲೇ



ಶವರ್ಮಾ ತಿಂದು ಸಾಕಷ್ಟು ಜನ ಮೃತಪಟ್ಟಿರುವ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆ ರಾಜ್ಯದಲ್ಲಿ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಿದೆ.

ಬೆಂಗಳೂರಿನಲ್ಲಿ ಶವರ್ಮಾ ಗುಣಮಟ್ಟ ಪರಿಶೀಲನೆ ನಡೆಸಿದ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಗೆ ಬೆಚ್ಚಿ ಬೀಳಿಸುವ ಅಂಶ ಕಂಡು ಬಂದು ಬಂದಿದೆ. ಶವರ್ಮಾಗಳಲ್ಲಿ ಅನಾರೋಗ್ಯಕ್ಕೆ ಕಾರಣವಾಗುವ ಬ್ಯಾಕ್ಟೀರಿಯಾ, ಈಸ್ಟ್ ಪತ್ತೆಯಾಗಿದೆ. ಬೆಂಗಳೂರು ಮಾತ್ರವಲ್ಲ ಹುಬ್ಬಳ್ಳಿ, ಮೈಸೂರು, ತುಮಕೂರು, ಮಂಗಳೂರು, ಬಳ್ಳಾರಿ ಸೇರಿದಂತೆ ಹಲವೆಡೆ ಪರೀಕ್ಷೆ ನಡೆಸಲಾಗಿದೆ.

ಶವರ್ಮಾ ತಯಾರಿಕೆಯಲ್ಲಿ ನೈರ್ಮಲ್ಯದ ಕೊರತೆ ಕಂಡು ಬರುತ್ತಿದೆ. ಅಲ್ಲದೆ ಧೀರ್ಘ ಕಾಲದವರೆಗೂ ಶೇಖರಣೆ ಮಾಡುವುದರಿಂದ ಇದರಲ್ಲಿ ಅಪಾಯಕಾರಿ ಬ್ಯಾಕ್ಟೀರಿಯಾ, ಈಸ್ಟ್ ಉತ್ಪತ್ತಿಯಾಗಿ ಅಪಾಯಕಾರಿಯಾಗಿ ಪರಿಣಮಿಸುತ್ತದೆ. ಶವರ್ಮಾ ತಿನ್ನುವುದರಿಂದ ಆರೋಗ್ಯದಲ್ಲಿ ಭಾರೀ ಪರಿಣಾಮ ಬೀರುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ.

**ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹೇಳಿದ್ದೇನು :** ಮಾಧ್ಯಮಗಳಲ್ಲಿ ಶವರ್ಮಾ ಸೇವಿಸಿ ಫುಡ್ ಪಾಯ್ಸನ್ ಆಗಿರುವ ಕುರಿತು ವರದಿ ಪ್ರಕಟವಾದ ಹಿನ್ನೆಲೆಯಲ್ಲಿ ಬಿಬಿಎಂಪಿ ವಲಯ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೈಸೂರು, ತುಮಕೂರು, ಧಾರವಾಡ, ಮಂಗಳೂರು, ಬಳ್ಳಾರಿ ಮತ್ತು ಬೆಳಗಾವಿ ಜಿಲ್ಲೆಗಳ ಕಾರ್ಪೋರೇಷನ್ ವ್ಯಾಪ್ತಿಗಳಲ್ಲಿ ಮಾರಾಟ ಮಾಡಲಾಗುತ್ತಿರುವ ಶವರ್ಮಾದ ಆಹಾರ ಮಾದರಿಗಳನ್ನ ವಿಶ್ಲೇಷಣೆಗೊಳಪಡಿಸಲಾಗಿದೆ. ಒಟ್ಟು 17 ಮಾದರಿಗಳಲ್ಲಿ 9 ಮಾದರಿಗಳು ಸುರಕ್ಷಿತವಾಗಿದ್ದರೆ 8 ಮಾದರಿಗಳಲ್ಲಿ ಬ್ಯಾಕ್ಟೀರಿಯಾ ಮತ್ತು ಈಸ್ಟ್ ಕಂಡು ಬಂದಿರುವುದರಿಂದ ಅಸುರಕ್ಷಿತ ಎಂದು ನಿರ್ಧರಿಸಲಾಗಿದೆ. ಅಸುರಕ್ಷಿತ ಎಂದು ವರದಿಯಾಗಿರುವ ಆಹಾರ ಮಾದರಿಗಳ ತಯಾರಕರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ.

ಎಲ್ಲ ಶವರ್ಮಾ ತಯಾರಕರು ಆಹಾರ ತಯಾರಿಕೆ, ಸಂಗ್ರಹಣೆ ಮತ್ತು ವಿತರಣೆಯ ಸಂದರ್ಭದಲ್ಲಿ ಸಂಪೂರ್ಣ ನೈರ್ಮಲ್ಯತೆ ಮತ್ತು ಗುಣಮಟ್ಟವನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ 2006ರ ಶೆಡ್ಯೂಲ್ 4ರ ಅನುಸಾರ ಕಾಪಾಡಲು ಸೂಚಿಸಲಾಗಿದೆ. ಜತೆಗೆ ಶವರ್ಮಾವನ್ನು ಪ್ರತಿ ದಿನ ಹೊಸದಾಗಿ ತಯಾರಿಸಿ ತಾಜಾ ಸ್ಥಿತಿಯಲ್ಲಿ ಮಾರಾಟ ಮಾಡಲು ಸೂಚಿಸಲಾಗಿದೆ. ಅಲ್ಲದೆ ಎಲ್ಲ ಶವರ್ಮಾ ಆಹಾರ ತಯಾರಕರು ತಮ್ಮ ಉದ್ದಿಮೆಗೆ ಎಫ್‌ಎಸ್‌ಎಸ್‌ಎಐ ನೋಂದಣಿ / ಪರವಾನಿಗೆಯನ್ನು ಪಡೆದುಕೊಳ್ಳುವುದಲ್ಲದೇ ಅದನ್ನು ತಮ್ಮ ವ್ಯಾಪಾರದ ಸ್ಥಳದಲ್ಲಿ ಪ್ರದರ್ಶಿಸಲು ಸೂಚಿಸಿದೆ.

## ಡಿವೈಡರ್‌ಗೆ ಕಾರು ಡಿಕ್ಕಿಯಾಗಿ ಇಬ್ಬರು ಸಾವು

**ವಿಜಯನಗರ:** ವೈಡರ್‌ಗೆ ಕಾರು ಡಿಕ್ಕಿಯಾಗಿ ಇಬ್ಬರು ಮೃತಪಟ್ಟ ಘಟನೆ ವಿಜಯನಗರ ಜಿಲ್ಲೆ ಕೂಡ್ಲಿಗಿ ಬಳಿ ಹೆದ್ದಾರಿಯಲ್ಲಿ ತಡರಾತ್ರಿ ನಡೆದಿದೆ. ಚಾಲಕ ವಿನಯ್ (27), ಚನ್ನಬಸವ (28) ಮೃತ ದುರ್ದೈವಿಗಳು. ಘಟನೆಯಲ್ಲಿ ನಾಲ್ವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಗಾಯಾಳುಗಳನ್ನು ತಾಲೂಕಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಇಳಕಲ್‌ನಿಂದ ಬೆಂಗಳೂರಿಗೆ ತೆರಳುತ್ತಿದ್ದ ಎರಿಟಿಗಾ ಕಾರಿನಲ್ಲಿ 7 ಜನರು ಪ್ರಯಾಣಿಸುತ್ತಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಕಾರು ಡಿಕ್ಕಿಯಾಗಿದ್ದು ಇಬ್ಬರು ಮೃತಪಟ್ಟಿದ್ದಾರೆ. ಓರ್ವರ ಸ್ಥಿತಿ ಚಿಂತಾಜನಕವಾಗಿದೆ. ನಾಲ್ವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಡಿಕ್ಕಿ ಹೊಡೆದ ರಭಸಕ್ಕೆ ಕಾರು ನಜ್ಜುಗುಜ್ಜಾಗಿದೆ.

# ರಂಭಾಪುರಿ ಜಗದ್ಗುರುಗಳ ಪ್ರವಾಸ ವಿವರ



**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ 2024ನೇ ಸಾಲಿನ ಜುಲೈ ಹಾಗೂ ಆಗಸ್ಟ್ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ.

ಜುಲೈ 3ರಂದು ಶಿವಮೊಗ್ಗದಲ್ಲಿ ಶ್ರೀ ರಂಭಾಪುರೀಶ ನಿವಾಸ ನೂತನ ಕಟ್ಟಡ ಉದ್ಘಾಟನೆ, 5ರಂದು ಹಾಸನ ಜಿಲ್ಲೆ ಆಲೂರು ತಾಲೂಕ ಕಾರ್ಜುವಳ್ಳಿಯಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭ, 6ರಂದು ಬೇಲೂರು ತಾಲೂಕ ಬಿಕ್ಕೋಡು ಗ್ರಾಮದಲ್ಲಿ ಪುರ ಪ್ರವೇಶ ಹಾಗೂ ಧರ್ಮ ಸಮಾರಂಭ, 7ರಂದು ಶಿವಮೊಗ್ಗದಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಶಿವದೀಕ್ಷಾ ಸಮಾರಂಭ, 8ರಂದು ಉತ್ತರ ಕನ್ನಡ ಜಿಲ್ಲೆ ಮುಂಡಗೋಡ ತಾಲೂಕ ಹನುಮಾಪುರ ಗ್ರಾಮದಲ್ಲಿ ಲಿಂ.ಸದಾನಂದ ಶ್ರೀಗಳ 4ನೇ ವರ್ಷದ ಪುಣ್ಯಾರಾಧನಾ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 9ರಿಂದ 11ರ ವರೆಗೆ ಹರಿಹರದಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭ, 12ರಂದು ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕ ಲೋಕಾಪುರದಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭ ನಡೆಸುವರು. ದಿನಾಂಕ 14ರಂದು ತುಮಕೂರು ಜಿಲ್ಲೆ ಗುಬ್ಬಿ ತಾಲೂಕ ನಿಟ್ಟೂರಿನಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಸಭಾ ಭವನ ಉದ್ಘಾಟನಾ ಸಮಾರಂಭ, 17ರಂದು ಬೀದರ ಜಿಲ್ಲೆ ಮುಧೋಳ(ಬಿ) ಗ್ರಾಮದಲ್ಲಿ ಲಿಂ.ಶಿವಲಿಂಗ ಶಿವಾಚಾರ್ಯರ ಲಿಂಗಾಂಗ ಸಾಮರಸ್ಯದ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸುವರು. ದಿನಾಂಕ 21ರಂದು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಗುರು ಪೌರ್ಣಮಾ ಸಮಾರಂಭದಲ್ಲಿ ಪಾಲ್ಗೊಂಡು ಭಕ್ತಾದಿಗಳಿಗೆ ದರ್ಶನಾಶೀರ್ವಾದ ನೀಡುವರು. ದಿನಾಂಕ 24ರಿಂದ 28ರ ವರೆಗೆ ಬೆಂಗಳೂರು ಮಹಾನಗರದಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಸಮಾರಂಭ, ಜುಲೈ 29ರಿಂದ ಆಗಸ್ಟ್ 3ರ ವರಗೆ ದಾವಣಗೆರೆಯಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭ ನಡೆಸುವರು. ಆಗಸ್ಟ್ 4ರಂದು ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲೂಕ ತಾವರೆಕೆರೆ ಶಿಲಾಮಠದಲ್ಲಿ ಲಿಂ.ಸಿದ್ಧಲಿಂಗ ಶ್ರೀಗಳವರ ಪುಣ್ಯ ಸ್ಮರಣೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಆಗಸ್ಟ್ 5ರಿಂದ ಸೆಪ್ಟಂಬರ್ 2ರ ವರೆಗೆ ಬಾಳೆಹೊನ್ನೂರು ಧರ್ಮ ಪೀಠದಲ್ಲಿ ವಾಸ್ತವ್ಯ ಇದ್ದು ತಮ್ಮ 33ನೇ ವರ್ಷದ ಶ್ರಾವಣ ಪೂಜಾನುಷ್ಠಾನ ನಡೆಸುವರು. ಶ್ರೀ ರಂಭಾಪುರಿ ಜಗದ್ಗುರುಗಳವರ ಧಾರ್ಮಿಕ ಕಾರ್ಯಕ್ರಮಗಳ ಲಾಭವನ್ನು ಸಮಸ್ತ ಜನತೆ ಪಡೆದುಕೊಳ್ಳಬೇಕೆಂದು ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ತಿಳಿಸಿದ್ದಾರೆ.

# ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಪಿಯುಸಿ ಮತ್ತು ಪಿಯುಸಿ ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ತಾಲ್ಲೂಕು ಕಲ್ಯಾಣಾಧಿಕಾರಿ ತಿಳಿಸಿದ್ದಾರೆ. ವಿದ್ಯಾರ್ಥಿಗಳು https://shp.karnataka.gov.in/bcwdಅನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸಲು ಜುಲೈ 20 ಕೊನೆಯ ದಿನಾಂಕವಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು ಹಾಗೂ ಸಹಾಯವಾಣಿ ಸಂಖ್ಯೆ: 8050370004, 8050770005 ಅಥವಾ ಕಚೇರಿ ದೂ.ಸಂ:0816-200160 ಗೆ ಸಂಪರ್ಕಿಸಬಹುದು ಎಂದು ಚಿಕ್ಕಬಳ್ಳಾಪುರ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಪರಿಹಾರ ಹಣ ಬಹುಬೇಗ ಸೇರಲಿ

**ಕೋಲಾರ:** ವೇಮಗಲ್ಲಿನ ಐ ಬಿ ಯಲ್ಲಿ ಇಂದುನಡೆದ ಅಧಿಕಾರಿಗಳ ಮತ್ತು ರೈತರ ಸಭೆಯಲ್ಲಿ ಮಾತನಾಡಿದ ಮಾಜಿ ಸಭಾಪತಿಗಳಾದ ವಿ ಎಲ್ ಸುದರ್ಶನ್ ಮೂರನೇ ಹಂತದ ಕೈಗಾರಿಕಾ ಉದ್ದೇಶಕ್ಕಾಗಿ ಭೂಮಿಯನ್ನು ವಶಪಡಿಸುವಸಲುವಾಗಿ ಸಭೆ ನಡೆಯುತ್ತಿದ್ದು ರೈತರ ಹಿತಕಾಪಾಡಬೇಕಾಗಿರುವುದು ನಮ್ಮ ಮೊದಲ ಆದ್ಯತೆ ಮೊದಲನೇ ಹಂತಕ್ಕೆ ಮೂವತ್ತೈದು ಲಕ್ಷ ಈಗ ಒಂದುಕೋಟಿಗೂ ಅದಿಕವಾಗಿ ಭೂಮಿಯನ್ನು ಕರೀದಿಸಲಾಗುತ್ತಿದೆ ಎರಡನೆಹಂತದಲ್ಲಿ ಸ್ವಲ್ಪ ಸಮಸ್ಯೆಗಳಿತ್ತು ಮುಂದಿನ ತಿಂಗಳೊಳಗಾಗಿ ರೈತರಿಗೆ ಸೇರಬೇಕಾದ ಪರಿಹಾರ ಹಣವನ್ನು ಸೇರುವಂತೆ ಅಧಿಕಾರಗಳು ನೋಡಿಕೊಳ್ಳುವಂತಾಗಬೇಕು

ಎರಡನೇ ವಿಷಯ ಸುಮಾರು ಐನೂರು ಎಕರೆ ಜಮೀನು ವಶಪಡಿಸಿಯಾಗಿದೆ ಪರಿಹಾರವಾಗಿ ನೂರು ಕೋಟಿ ಬಿಡುಗಡೆಯಾಗಿದೆ ಆದರೆ ಕೆಲವು ರೈತರಿಗೆ ಇದುವರೆವಿಗೂ ಪರಿಹಾರಸಿಗದಿರುವುದು ಎಷ್ಟುಸರಿ ಎಂದರು.

ಸಿವಿಲ್ ಕೆಲಸಗಳನ್ನು ಸ್ಥಳೀಯ ಕಾಂಟ್ರ್ಯಾಕ್ಟರ್ಸ್ಗಳಿಗೆಕೊಟ್ಟರೆ ಒಳ್ಳೆಯದು ಸಾಮಾನ್ಯವಾಗಿ ಸ್ಥಳೀಯಸಮಸ್ಯೆಗಳನ್ನು ಅವರು ಅರಿತಿರುತ್ತಾರೆ ಇದನ್ನು ಗಮನದಲ್ಲಿಟ್ಟುಕೊಳ್ಳುವುದು ಒಳ್ಳೆಯದು, ಮೂರನೇ ಹಂತದ ಕಾಮಗಾರಿಗಳಿಗೆ ಜಮೀನು ವಶಪಡಿಸಿಕೊಳ್ಳುವ ವಿಷಯಕ್ಕೆ ಸಂಬಂದಿಸಿದಂತೆ ಸಭೆ ಕರೆದಿರುವುದು ಸ್ವಾಗತಾರ್ಹ ಬಹಳಷ್ಟು ಸಣ್ಣ ರೈತರಿದ್ದು ಅವರಿಗೆ ಸೂಕ್ತ ಪರಿಹಾರ ಮತ್ತು ಉದ್ಯೋಗ ಸಿಗುವಂತಾಗಲಿ ಎಂದರು.

ಇದರ ಮಧ್ಯೆ ಭೂಮಿಯನ್ನು ನೀಡದಿರಲು ಸಣ್ಣಮತ್ತು ಅತಿಸಣ್ಣ ರೈತರು ಗಟ್ಟಿನಿರ್ಧಾರ ಕೈಗೊಂಡಿದ್ದು ನಮಗಿರುವುದು ಹತ್ತು ಗುಂಟೆ ,ಒಂದು ಎಕರೆ ,ಅರ್ಧ ಎಕರೆ ಜಾಗವಿದ್ದು ಉಳಿದಿರುವ ಭೂಮಿಯನ್ನೂ ವಶಪಡಿಸಿಕೊಂಡರೆ ನಮ್ಮಗತಿಯೇನು ಕೈಗಾರಿಕೆಗಳವರೋ ಈಗ ಒಂದು ಮಾತು ಕೆಲಸವಾದಮೇಲೆ ಒಂದುಮಾತು ಇವರನ್ನು ನಂಬುವುದು ಹೇಗೆ ನಿಮಗೆ ಉದ್ಯೋಗ ನೀಡುತ್ತೇವೆ ಎಂದು ಹೇಳಿ ನಂತರ ಗೇಟ್ ಬಳಿಯೂ ಬಿಡುವುದಿಲ್ಲ ಹಾಗೂ ಕೆಲಸ ಕೊಟ್ಟರೆ ವಿದ್ಯಾರ್ಹತೆಗೆ ತಕ್ಕ ಕೆಲಸ ನೀಡದೆ ಟಾಯ್ಲೆಟ್ ಕ್ಲೀನ್ ಮಾಡಲು ಹಾಕುತ್ತಾರೆ ಇನ್ನು ಪರಿಹಾರ ಹಣ ಪಡೆಯಬೇಕಾದರೆ ಎರಡರಿಂದ ಐದು ಲಕ್ಷದ ವರೆವಿಗೂ ಲಂಚ ನೀಡಬೇಕಾಗುತ್ತದೆಂದರು.

ಅಪೂರ್ವ ಬಿದರಿ ಸ್ಪೆಷಲ್ ಲ್ಯಾಂಡ್ ಅಕ್ವಿಜೇಶನ್ ಆಫೀಸರ್ಮಾತನಾಡಿ ನಿಮ್ಮ ಬೇಡಿಕೆಗಳು ಏನೇಯಿದ್ದರೂ ಬರವಣಿಗೆ ರೂಪದಲ್ಲಿಕೊಡಿ ಈಗಾಗಲೇ ಮೂರೇನ್ ಹಂತದ ಕಾಮಗಾರಿಗಳಿಗೆ ಆದಿಸೂಚನೆಯಾಗಿದೆ ನಿಮ್ಮ ಎಲ್ಲಾ ಬೇಡಿಕೆಗಳನ್ನು ಸಂಭಂದಪಟ್ಟ ಅಧಿಕಾರಿಗಳ ಬಳಿ ಮಾತನಾಡಿ ಸಮಸ್ಯೆಗಳಿಗೆ ಪರಿಹಾರ ಕೊಡಿಸುವ ಮತ್ತು ಎಲ್ಲ ಬೇಡಿಕೆಗಳನ್ನು ಈಡೇರಿಸುವ ಪ್ರಯತ್ನ ಪಡುತ್ತೇವೆ ಇನ್ನು ಶೇಕಡಾವಾರು ಅನುಪಾತದ ಮೇಲೆ ಭೂಮಿಯನ್ನು ವಶಪಡಿಸಿಕೊಳ್ಳುವ ಕಾರ್ಯ ಮುಂದುವರೆಯುತ್ತದೆಂದರು.

ವೇಮಗಲ್ ಪಟ್ಟಣ ಪಂಚಾಯತಿಯ ಮುಖಂಡರಾದ ಮಂಜುನಾಥ್ , ರಾಮಚಂದ್ರೇಗೌಡ , ಅಂಜಿನಪ್ಪ, ಶ್ರಮ್ರಾಂ ,ನಾಗಪ್ಪ ,ವಿಜಯಕುಮಾರ್ ,ತಿರುಮಲೇಶ , ಶ್ರೀನಿವಾಸ್ , ಪೃಥ್ವಿ,ಗೋಪಾಲ್ ,ನಾರಾಯಣಸ್ವಾಮಿ ,ಎನ್ ವಿಜಯಕುಮಾರ್ ,ಮಣಿ , ಶಿವು ,ಸಂತೋಷ್ ಹಾಗೂ ರೈತರು ಇದ್ದರು.



# ಕೆಂಪೇಗೌಡರು ಮರೆಯಲಾಗದ ಮಾಣಿಕ್ಯರು



**ಚಾಮರಾಜನಗರ:** ಸುಂದರ ಬೆಂಗಳೂರು ನಿರ್ಮಿಸಿ ವಿಶ್ವಕ್ಕೆ ನೀಡಿದ ಶ್ರೀ ಕೆಂಪೇಗೌಡರು ಮರೆಯಲಾಗದ ಮಾಣಿಕ್ಯರು. ನಾಡಪ್ರಭುವಾಗಿ ,ಧರ್ಮ ಪ್ರಭುವಾಗಿ ಜನಸಾಮಾನ್ಯರ ಹಾಗೂ ಸಮಗ್ರ ಅಭಿವೃದ್ಧಿಯ ಪ್ರಭುವಾಗಿ ಸದಾ ಕಾಲ ಜನರ ಹೃದಯ ಸಾಮ್ರಾಜ್ಯದಲ್ಲಿ ಶಾಶ್ವತ ಪ್ರಭುವಾಗಿರುವ ಶ್ರೀ ಕೆಂಪೇಗೌಡರ ಇತಿಹಾಸ ಅಜರಾಮರವೆಂದು ಸಂಸ್ಕೃತಿ ಚಿಂತಕ , ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಸಂಸಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶ್ರೀ ಕೆಂಪೇಗೌಡರ ಜಯಂತಿ ಹಾಗೂ ಅವರ ಕೊಡುಗೆಗಳು ಬಗ್ಗೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಶ್ರೀ ಕೆಂಪೇಗೌಡರು ಅಭಿವೃದ್ಧಿಯ ಹರಿಕಾರರಾಗಿ , ಸರ್ವ ಜನರ ಅಭ್ಯುದಯಕ್ಕಾಗಿ ಶ್ರಮಿಸಿದ ನಾಡಪ್ರಭು. ಕೆಂಪೇಗೌಡರ ದೂರ ದೃಷ್ಟಿ ಜನಸಾಮಾನ್ಯರ ಅಭಿವೃದ್ಧಿ ಹಾಗೂ ಸಮಾಜದ ಪ್ರತಿಯೊಬ್ಬರು ಸಮತ್ವ ಭಾವದಿಂದ ಅಭಿವೃದ್ಧಿ ಹೊಂದಬೇಕೆಂಬ ದೃಷ್ಟಿಕೋನವೇ ಇಂದಿನ ಆಡಳಿತಗಾರರಿಗೆ ಮಾರ್ಗದರ್ಶನವಾಗಿದೆ. ಇಂದು ವಿಶ್ವದಲ್ಲಿ ಬೃಹತ್ ಬೆಂಗಳೂರು ಪರಿವರ್ತನೆಯಾಗಿ ಭಾರತ ದೇಶಕ್ಕೆ ಹೆಮ್ಮೆಯ ನಗರವಾಗಿರುವ ಬೆಂಗಳೂರನ್ನು ನಿರ್ಮಿಸಿದ ಮಹಾನ್ ದೂರದೃಷ್ಟಿ ಪ್ರಭುವಿಗೆ ಸದಾ ಕಾಲ ಚಿರಋಣಿಯಾಗಿದ್ದೇವೆ. ನಾಡು ,ನುಡಿ ,ಜಲ ,ಭಾಷೆ ,ಸಂಸ್ಕೃತಿ ಪರಂಪರೆ ,ನೀರಾವರಿ ,ಕೃಷಿ ,ಕೈಗಾರಿಕೆ, ವ್ಯಾಪಾರ, ವಾಣಿಜ್ಯ , ಹಲವು ಕ್ಷೇತ್ರಗಳ ಅಭಿವೃದ್ಧಿಯ ಪ್ರಭುವಾದ ಕೆಂಪೇಗೌಡರ ಕೊಡುಗೆ ದಾಖಲೆಯಾಗಿದೆ ಎಂದರು.

ಅಖಿಲ ಕರ್ನಾಟಕ ಕನ್ನಡ ಮಹಾಸಭಾದ ರಾಜ್ಯಾಧ್ಯಕ್ಷರಾದ ಶ್ರೀನಿವಾಸಗೌಡರವರು ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕೆಂಪೇಗೌಡರನ್ನು ಸ್ಮರಿಸುವ ಕಾರ್ಯಕ್ರಮ ರೂಪಿಸಿ ಅವರ ಇತಿಹಾಸವನ್ನು ತಿಳಿಸುವ ಕಾರ್ಯಕ್ರಮ ರೂಪಿಸಿರುವುದು ಮೆಚ್ಚುಗೆಯಾದದ್ದು. ಕನ್ನಡ ದೊರೆಯಾಗಿ ,ಕೆರೆಗಳ ನಿರ್ಮಾಣ ಉದ್ಯಾನವನಗಳ ನಿರ್ಮಾಣ, ಬೆಂಗಳೂರು ನಗರ ಗಡಿ ಹಾಗೂ ದೇವಾಲಯಗಳ ನಿರ್ಮಾಣ, ಪ್ರತಿ ಸಮಾಜದ ಅಭಿವೃದ್ಧಿಗೆ ಶ್ರಮಿಸಿದ ಕೆಂಪೇಗೌಡರು ಯುವ ಪೀಳಿಗೆಗೆ ಮಾರ್ಗದರ್ಶಕರಾಗಿದ್ದಾರೆ. ಸರ್ಕಾರ ಕೆಂಪೇಗೌಡರ ಕಾರ್ಯಕ್ರಮವನ್ನು ಬೃಹಪ್ರಮಾಣದಲ್ಲಿ ರೂಪಿಸಿ ಪ್ರತಿಯೊಬ್ಬರು ಕೆಂಪೇಗೌಡರ ಇತಿಹಾಸವನ್ನು ತಿಳಿಯಲು ಅವಕಾಶ ಮಾಡಿರುವುದು ಮೆಚ್ಚುಗೆಯಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಕೊಳ್ಳೇಗಾಲ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೊಂಗರಹಳ್ಳಿ ನಾಗರಾಜು ಮಾತನಾಡಿ ವಿಜಯನಗರ ಸಾಮ್ರಾಜ್ಯದ ಸಾಮಂತ ದೊರೆಯಾಗಿ ನಂಬಿಕೆ ಹಾಗೂ ನಿಷ್ಠೆಗೆ ಹೆಸರಾದವರು ಕೆಂಪೇಗೌಡರು. ಕೆಂಪೇಗೌಡರ ಅಭಿವೃದ್ಧಿ ಸದಾಕಾಲ ಸ್ಮರಣೀಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕರಾದ ಪಣ್ಯದಹುಂಡಿ ರಾಜು, ಮಹೇಶ್ ಗೌಡ ,ರವಿಚಂದ್ರಪ್ರಸಾದ್, ಬಿಕೆ ಆರಾಧ್ಯ, ಶಿವಲಿಂಗ ಮೂರ್ತಿ ,ಸರಸ್ವತಿ ,ಪದ್ಮ ಪುರುಷೋತ್ತಮ್ ,ಸುರೇಶ್ ಗೌಡ, ಎಸ್ ಲಕ್ಷ್ಮೀನರಸಿಂಹ ,ಬೊಮ್ಮಾಯಿ, ನಂಜುಂಡಸ್ವಾಮಿ,ಕಾರ್ ಕುಮಾರ್ ಉಪಸ್ಥಿತರಿದ್ದರು

# ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಚಾಮರಾಜನಗರ ತಾಲೂಕಿನ ಮೆಟ್ರಿಕ್ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

5 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು. ಉಚಿತ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಮತ್ತು ಲೇಖನ ಸಾಮಾಗ್ರಿ, ವೈದ್ಯಕೀಯ ಸೌಲಭ್ಯ, ವಿಶೇಷ ಭೋಜನಾ ವ್ಯವಸ್ಥೆ ಹಾಗೂ ಸರ್ಕಾರ ಸೂಚಿಸುವ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತದೆ.

ಚಾಮರಾಜನಗರ ಪಟ್ಟಣದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಾಲಕಿಯರ ವಿದ್ಯಾರ್ಥಿನಿಲಯ, ಚಾಮರಾಜನಗರ ತಾಲೂಕಿನ ವೆಂಕಟಯ್ಯನಛತ್ರದ, ಅರಕಲವಾಡಿ, ಕಾಗಲವಾಡಿಯಲ್ಲಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು. ವಿದ್ಯಾರ್ಥಿ ಹಿಂದಿನ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅವಕಾಶವಿರುವುದಿಲ್ಲ. ಪ್ರವರ್ಗ-1, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ 1 ಲಕ್ಷ ರೂ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆಕುಟುಂಬದ ವಾರ್ಷಿಕ ಆದಾಯ ಮಿತಿ 44,500 ರೂ ಒಳಗಿರಬೇಕು. 2024-25ನೇ ಸಾಲಿನಲ್ಲಿ ವಿದ್ಯಾರ್ಥಿನಿಲಯದಲ್ಲಿ ವರ್ಗವಾರು ಖಾಲಿ ಇರುವ ಸ್ಥಾನಗಳಿಗೆ ಮಾತ್ರ ಆಯ್ಕೆ ಮಾಡಲಾಗುವುದು. ವಿದ್ಯಾರ್ಥಿಗಳು ವೆಬ್‌ಸೈಟ್ https://shp.karnataka.gov.in/bcwd ಸಂಪರ್ಕಿಸಿ ಆನ್ ಲೈನ್ ಮೂಲಕ ಜುಲೈ 10ರೊಳಗೆ ಅರ್ಜಿ ಸಲ್ಲಿಸಬೇಕು. ವಿವರಗಳಿಗೆ ಚಾಮರಾಜನಗರ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಸಂಪರ್ಕಿಸುವಂತೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಹಾಸ್ಟೆಲ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಂತಾಮಣಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ತಾಲ್ಲೂಕು ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ವಿದ್ಯಾರ್ಥಿಗಳು https://shp.karnataka.gov.in/bcwdಅನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿಗಳನ್ನು ಸಲ್ಲಿಸಲು ಜುಲೈ 20 ಕೊನೆಯ ದಿನಾಂಕವಾಗಿದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ಅನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು ಹಾಗೂ ಸಹಾಯವಾಣಿ ಸಂಖ್ಯೆ: 8050370004, 8050770005 ಗೆ ಸಂಪರ್ಕಿಸಬಹುದು ಎಂದು ಚಿಂತಾಮಣಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಅನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪ್ರವರ್ಗ-1, ಎಸ್.ಸಿ ಮತ್ತು ಎಸ್.ಟಿ. ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ. 1 ಲಕ್ಷ ಹಾಗೂ ಪ್ರವರ್ಗ-2ಎ,2ಬಿ,3ಎ,3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ. 44,500 ಮಿತಿ ಇರುವ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್ https://shp.karnataka.gov.in/bcwd ಮೂಲಕ ಆನ್ಲೈನ್ನಲ್ಲಿ ಜುಲೈ 10 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.in ನ್ನು ನೋಡಬಹುದಾಗಿದ್ದು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 8050770004 ಮತ್ತು 8050770005 ಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ತಿಳಿಸಿದ್ದಾರೆ.

# ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಮೈಸೂರು:** ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಪಿಯುಸಿ ಮತ್ತು ಪಿ.ಯು.ಸಿ. ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳಿಗೆ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಅನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪ್ರವರ್ಗ-1, ಎಸ್.ಸಿ ಮತ್ತು ಎಸ್.ಟಿ. ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ. 2.50 ಲಕ್ಷ ಹಾಗೂ ಪ್ರವರ್ಗ- 2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ.1 ಲಕ್ಷ ಇರುವ ವಿದ್ಯಾರ್ಥಿಗಳು ಇಲಾಖೆಯ ವೆಬ್ಸೈಟ್ https://shp.karnataka.gov.in/bcwd ಮೂಲಕ ಆನ್ಲೈನ್ನಲ್ಲಿ ಜುಲೈ 20 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.inನ್ನು ನೋಡಬಹುದಾಗಿದ್ದು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.comಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.ಹೆಚ್ಚಿನ ಮಾಹಿತಿಗಾಗಿ ದೂ.ಸಂ: 8050770004 ಮತ್ತು 8050770005 ಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ತಿಳಿಸಿದ್ದಾರೆ.

# ಇಂದು ಹಲವೆಡೆ ವಿದ್ಯುತ್ ವ್ಯತ್ಯಯ

**ಮೈಸೂರು:** ಜೂನ್ 30 ರಂದು ಬೆಳಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ದೊಡ್ಡಕೆರೆ ಮೈದಾನ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕ.ವಿ.ಪ್ರ.ನಿ.ನಿ. ವತಿಯಿಂದ ಮೊದಲನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ರಾಮಾನುಜ ರಸ್ತೆ 01 ರಿಂದ 09ನೇ ಕ್ರಾಸ್ ವರೆಗೆ, ಹೊಸಬಂಡಿಕೇರಿ, ಜೆ.ಎಸ್.ಎಸ್. ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ, ಚಾಮುಂಡಿಪುರಂನ



ಹಲವು ಭಾಗಗಳು, ತ್ಯಾಗರಾಜ ರಸ್ತೆ, ಚಾಮುಂಡಿಬೆಟ್ಟ ಮತ್ತು ಪಾದ, ಗುಂಡುರಾವ್ ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನಗೂಡು ಟೋಲ್ ಗೇಟ್, ತಾವರೆಕೆರೆ, ಜಾಕಿ ಕ್ವಾಟ್ರಸ್, ರೇಸ್ ಕೋರ್ಸ್ ಹಿಂಭಾಗ, ಸಬರ್ಬ್ ಬಸ್ ನಿಲ್ದಾಣ, ನಜರ್ಬಾದ್, ಇಟ್ಟಿಗೆಗೂಡು, ಮೃಗಾಲಯದ ಸುತ್ತ-ಮುತ್ತ, ಸರ್ಕಾರಿ ಅತಿಥಿ ಗೃಹ ಮತ್ತು ಸುತ್ತ-ಮುತ್ತಲಿನ ಪ್ರದೇಶಗಳು, ತಾಲ್ಲೂಕು ಕಛೇರಿ, ಡಿ. ದೇವರಾಜ ಅರಸು ರಸ್ತೆ, ಬಿ.ಎನ್. ರಸ್ತೆ, ಚಾಮುಂಡಿಬೆಟ್ಟ, ಸಿದ್ಧಾರ್ಥನಗರ, ಕುರುಬಾರಹಳ್ಳಿ, ಜೆ.ಸಿ. ನಗರ, ಕೆ.ಸಿ ನಗರ, ಜೆ.ಎಸ್.ಎಸ್ ಆಯುರ್ವೇದಿಕ್ ಸುತ್ತ-ಮುತ್ತ, ಅರಮನೆ ಸುತ್ತ-ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ, ಸಯ್ಯಾಜೀರಾವ್ ರಸ್ತೆ, ಇರ್ವಿನ್ ರಸ್ತೆ ಸುತ್ತ-ಮುತ್ತಲಿನ ಪ್ರದೇಶಗಳು, ಧನ್ವಂತರಿ ರಸ್ತೆ ಹಾಗೂ ಶಿವರಾಂಪೇಟೆ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

# ವಕ್ಕಲೇರಿ ಗ್ರಾಮದಲ್ಲಿ ಉಚಿತ ಮೂರ್ಛೆ ರೋಗ ತಪಾಸಣೆ

**ಕೋಲಾರ:** ವಕ್ಕಲೇರಿ ಗ್ರಾಮದಲ್ಲಿ ಇಂದು ಉಚಿತ ಮೂರ್ಛೆ ರೋಗ ತಪಾಸಣೆ ಮತ್ತು ಚಿಕಿತ್ಸೆ ಶಿಬಿರಕ್ಕೆ ಚಾಲನೆ ನೀಡಲಾಯಿತು ಸುತ್ತಮುತ್ತಲಿನ ಸಾರ್ವಜನಿಕರಲ್ಲಿ ಈ ರೋಗದ ಬಗ್ಗೆ ಜಾಗೃತಿಮೂಡಿಸಿ ಸಂಬಂಧಪಟ್ಟಂತಹ ರೋಗಿಗಳಿಗೆ ಧೈರ್ಯತುಂಬಿಸುವ ಮತ್ತು ಸೂಕ್ತ ಚಿಕಿತ್ಸೆ ಕೊಡಿಸುವ ಸಲುವಾಗಿ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಬೆಂಗಳೂರಿನ ಆಸ್ಟರ್ ಆಸ್ಪತ್ರೆ ಮೂರ್ಛೆರೋಗತಜ್ಞ ಡಾಕ್ಟರ್ ಸತೀಶ್ ರುದ್ರಪ್ಪ ರೋಟರಿ ಬಳಗ ನಮ್ಮೊಂದಿಗೆ ಒಂದಾಗಿ ಮೂರ್ಛೆ ರೋಗ ಪತ್ತೆ ಹಚ್ಚಿ ಶೀಘ್ರವಾಗಿ ಗುಣಪಡಿಸುವುದು ಮೆಸ್ತು ಉತ್ತಮ ಆರೋಗ್ಯಕ್ಕೆ ದಾರಿ ಮಾಡಿಕೊಡುವ ಗುರಿಹೊಂದಲಾಗಿದೆ .

ಹೆಚ್ಚಾಗಿ ಗ್ರಾಮೀಣ ಭಾಗದ ಜನರಿಗೆ ಮೂರ್ಛೆ ರೋಗದ ಲಕ್ಷಣ ಮತ್ತು ಚಿಕಿತ್ಸೆಯ ಬಗ್ಗೆ ಅರಿವಿನ ಅಗತ್ಯ ಸಾಕಷ್ಟಿದೆ ಕಾರಣ ಇದೊಂದು ಮಾನಸಿಕ ಕಾಯಿಲೆಯಾಗಿದ್ದು ಹೇಳಿಕೊಳ್ಳಲು ಸಂಕೋಚಪಡುತ್ತಾರೆ ಹಾಗೂ ಪರಿಸ್ಥಿತಿ ಕೈ ಮೀರಿದಾಗ ಹಲವಾರು ಸಮಸ್ಯೆಗಳಿಗೊಳಗಾಗುತ್ತಾರೆ ಅದರಲ್ಲೂ ಸಾಕಷ್ಟು ಮಹಿಳೆಯರು ಇಂತಹ ಕಾಯಿಲೆಗಳಿಂದ ಸಾಕಷ್ಟು ಕಷ್ಟಗಳನ್ನು ಅನುಭವಿಸುತ್ತಾರೆ ಕೆಲ ಮಹಿಳೆಯರು ಆತ್ಮಹತ್ಯೆಗೆ ಶರಣಾಗಿರುವ ಉದಾಹರಣೆಗಳು ನಮ್ಮ ಕಣ್ಣಮುಂದಿದೆ ಹಾಗಾಗಿ ಮುಕ್ತವಾದ ವಾತಾವರಣ ಕಲ್ಪಿಸುವ ಉದ್ದೇಶದಿಂದ ಇಂತಹ ಶಿಬಿರಗಳನ್ನು ನಡೆಸುವುದು ಅವಶ್ಯಕ

ನಮ್ಮ ದೇಶದಲ್ಲೂ ಸುಮಾರು ಹದಿನೈದು ಕೋಟಿಗೂ ಮಿಗಿಲಾಗಿ ಬಾದಿತರಿದ್ದಾರೆಮೂರ್ಛೆರೋಗವನ್ನು ತಡೆಗಟ್ಟಿಸಬಹುದು ಮತ್ತು ಗುಣಪಡಿಸಬಹುದು ಇಂತಹ ಶಿಬಿರಗಳ ಲಾಬ ಪಡೆದುಕೊಳ್ಳಿ ಆರಂಭದಲ್ಲೇ ಪತ್ತೆಹಚ್ಚಿ ಉತ್ತಮ ಆರೈಕೆಮಾಡಿದರೆ ಶಾಶ್ವತವಾಗಿಗುಣಪಡಿಸಬಹುದು ಹೆಚ್ಚಾಗಿ ಮಕ್ಕಳಲ್ಲಿ ಆರಂಭಹಂತದಲ್ಲಿ ಗುರುತಿಸಿದರೆ ಉತ್ತಮವೆಂದರು. ವಕ್ಕಲೇರಿ ಗ್ರಾಮ ಪಂಚಾಯತಿಯ ಅದ್ಯಕ್ಷರಾದ ಶ್ರೀಮತಿ ರಾದಿಕಾ ಮಂಜುನಾಥ್ ಮಾತನಾಡಿ ಗ್ರಾಮದ ಮತ್ತು ಸುತ್ತಮುತ್ತಲಿನ ಜನರು ಮೂರ್ಛೆ ರೋಗ ವಿದ್ದಲ್ಲಿ. ಮುಕ್ತವಾಗಿ ವೈದ್ಯರೊಂದಿಗೆ ತಮ್ಮ ಸಮಸ್ಯೆಗಳನ್ನು ಹೇಳಿ ಚರ್ಚಿಸಿ ಪರಿಹಾರ ಕಂಡುಕೊಳ್ಳಿ ಮತ್ತು ಇಂತಹ ಶಿಬಿರಗಳಲ್ಲಿ ಪರೀಕ್ಷಿಸಿಕೊಳ್ಳಿ ಎಂದರು.

ಸಮಾಜ ಸೇವಕರು ಮತ್ತು ಶಿಬಿರದ ರೂವಾರಿಗಳಾದ ಸಿಎಂಆರ್ ಶ್ರೀನಾಥ್ ಮಾತನಾಡಿ ಮೂರ್ಛೆರೋಗ ಮುಕ್ತ ಸಮಾಜ ನಿರ್ಮಾಣವಾಗಬೇಕು ಮತ್ತು ಕಾಯಿಲಯ ಬಗ್ಗೆ ಆತಂಕಪಡುವ ಅವಶ್ಯಕತೆಯಿಲ್ಲ ಇದೊಂದು ಮಾನಸಿಕ ಕಾಯಿಲೆಯಾಗಿದ್ದು ಇದರ ನಿರ್ಮೂಲನೆಯ ಕಡೆಗೆ ಎಲ್ಲರು ಒಟ್ಟಿಗೆ ಹೆಜ್ಜೆಹಾಕಿ ನಾವು ಜಾಗೃತಿ ಮೂಡಿಸಿ ಹೇಗೆ ,ಯಾಕೆ ,ಎಲ್ಲಿಂದ ಆರಂಭವಾಯಿತು ಮುಂತಾದ ಕಾರಣಗಳನ್ನು ಆರಂಭದಲ್ಲೇ ಪತ್ತೆಹಚ್ಚಿ ಉತ್ತಮ ಚಿಕಿತ್ಸೆ ನೀಡಿದಲ್ಲಿ ಶಾಶ್ವತವಾಗಿ ಮೂರ್ಛೆ ರೋಗವನ್ನು ಗುಣಪಡಿಸಬಹುದು ಹಾಗು ಜಿಲ್ಲೆಯನ್ನು ಮೂರ್ಛೆರೋಗ ಮುಕ್ತ ಜಿಲ್ಲೆಯನ್ನಾಗಿಸೋಣ ಎಂದರು.

ಎಂ ಸಿ ನಾರಾಯಣಸ್ವಾಮಿರವರು ಜಿಲ್ಲಾ ಮಾನಸಿಕ ಚಿಕಿತ್ಸಕರು ಆರೋಗ್ಯ ಇಲಾಖೆ ಕೋಲಾರ ಇವರು ಮಾತನಾಡಿ ಈ ಕಾಯಿಲೆಗೆ ಚಿಕಿತ್ಸೆ ಮತ್ತು ಆರೈಕೆ ಮುಖ್ಯ ಇದೊಂದು ಸಾಮಾನ್ಯ ಕಾಯಿಲೆಯಾಗಿದ್ದು ಎಲ್ಲ ಕಾಯಿಲೆಗಳ ಹಾಗೆ ಇದಕ್ಕೂ ಚಿಕಿತ್ಸೆ ಇದೆ ಯಾರು ಸಂಕೋಚಪಡದೆ ಮುಕ್ತವಾಗಿ ವೈದ್ಯರೊಂದಿಗೆ ಚರ್ಚಿಸಿ ಸೂಕ್ತಚಿಕಿತ್ಸೆ ಪಡೆದಲ್ಲಿ ಶಾಶ್ವತ ಪರಿಹಾರ ಸಿಗುತ್ತದೆ ಎಂದರು.

ವಕ್ಕಲೇರಿ ರಾಮುರವರು ಮಾತನಾಡಿ ಗ್ರಾಮೀಣ ಮಟ್ಟದಲ್ಲಿ ನಡೆಯುವ ಶಿಬಿರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವೈದ್ಯರೊಂದಿಗೆ ಮುಕ್ತವಾಗಿ ಚರ್ಚಿಸಿ ಶೀಘ್ರವಾಗಿ ಚಿಕಿತ್ಸೆ ಪಡೆದು ಆರೋಗ್ಯಕರ ಜೀವನನಡೆಸಿ ಮತ್ತು ಬೇರೆಯವರನ್ನು ಜಾಗೃತಿಗೊಳಿಸಿ ಎಂದರು. ಜಿಲ್ಲಾ ಆರೋಗ್ಯ ಇಲಾಖೆಯ ವೈದ್ಯರು , ಗ್ರಾಮ ಪಂಚಾಯತಿಯ ಉಪಾದ್ಯಕ್ಷರು ಸದಸ್ಯರು ,ಆಸ್ಟರ್ರೋ ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿ ,ರೋಟರಿ ಸುಧಾಕರ್ ,ರೋಟರಿ ಪ್ರಕಾಶ್ ,ಪ್ರತಾಪ್ ಕೋಲಾರ ಚಿಕ್ಕಬಳ್ಳಾಪುರದ ಸಹಕಾರಸಂಘದ ಅಧ್ಯಕ್ಷರಾದ ಕೆ ವಿ ಗಣೇಶ್ ಮತ್ತು ವಕ್ಕಲೇರಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರಿದ್ದರು.

# ವಾರಸುದಾರರ ಪತ್ತೆಗೆ ಮನವಿ

**ರಾಮನಗರ:** ಚನ್ನಪಟ್ಟಣ ಟೌನಿನ ಜೆ.ಸಿ. ರಸ್ತೆಯ ಕರಬಲ ಮೈದಾನದ ಬಳಿ ಸುಮಾರು 40-45 ವರ್ಷದ ಅಪರಿಚಿತ ವ್ಯಕ್ತಿ ಮೃತಪಟ್ಟಿರುತ್ತಾರೆ. ಮೃತರ ಹೆಸರು ಹಾಗೂ ವಿಳಾಸ ತಿಳಿದುಬಂದಿರುವುದಿಲ್ಲ. 5.8 ಎತ್ತರ, ಎಣ್ಣೆಗೆಂಪು ಮೈಬಣ್ಣ, ಇವರು ಮಾಸಲು ಬಣ್ಣದ ನೈಟ್ ಪ್ಯಾಂಟ್ ಹಾಗೂ ತಿಳಿ ನೀಲಿ ಬಣ್ಣದ ತುಂಬು ತೋಳಿನ ಶರ್ಟ್ ಧರಿಸಿರುತ್ತಾರೆ. ಇವರ ವಾರಸುದಾರರು ಯಾರದರು ಇದ್ದಲ್ಲಿ ಆರಕ್ಷಕ ಉಪ ನಿರೀಕ್ಷಕರು, ಚನ್ನಪಟ್ಟಣ ಪುರ ಪೊಲೀಸ್ ಠಾಣೆ, ಚನ್ನಪಟ್ಟಣ ಇವರನ್ನು ಸಂಪರ್ಕಿಸಬಹುದಾಗಿದೆ.

# ಕೃತಿಗಳ ಆಹ್ವಾನ

**ಬೆಂಗಳೂರು:** ಜನಪದ ಅಕಾಡೆಮಿಯು 2022ನೇ ಸಾಲಿನಲ್ಲಿ ಜನವರಿ 1ರಿಂದ ಡಿಸೆಂಬರ್ 31ರ ವರೆಗೆ ಹಾಗೂ 2023ನೇ ಸಾಲಿನಲ್ಲಿ ಜನವರಿ 01 ರಿಂದ ಡಿಸೆಂಬರ್ 31ರ ವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ ವಿಮರ್ಶೆ-ಸಂಶೋಧನೆ ಮತ್ತು ಜನಪದ ಸಂಕೀರ್ಣ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವ ಜನಪದ ಕೃತಿಗಳನ್ನು 2022 ಮತ್ತು 2023ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ. ಆಸಕ್ತ ಲೇಖಕರು / ಪ್ರಕಾಶಕರು / ಸಂಪಾದಕರು 4 ಕೃತಿಗಳನ್ನು ದ್ವಿಪ್ರತಿ ಬಿಲ್ಲಿನೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ ಬೆಂಗಳೂರು ಇವರಿಗೆ 2024ನೇ ಜುಲೈ 20 ರೊಳಗೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಕಳುಹಿಸಿಕೊಡಬಹುದು.


## ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯ ರಸ್ತೆ, ಬೆಂಗಳೂರು-560 099.
ಫೋನ್: 080-27835122, ಫ್ಯಾಕ್ಸ್: 080-27836569, www.anekal.tpa.gov.in, www.e-vinyasa.kar.nic.in

ಸಂ:ಆಯೋಪ್ರ/ಭೂ.ಬ/13/2024-25 ದಿನಾಂಕ: 29.06.2024

**ಪ್ರಕಟಣೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 14(ಎ) ಪ್ರಕಾರ ಅರ್ಜಿದಾರರು ಭೂ ಉಪಯೋಗ ಬದಲಾವಣೆಗೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿಯನ್ನು ಪರಿಶೀಲಿಸಲಾಗಿ, ಅಡಕದಲ್ಲಿನ ಮಾಹಿತಿಯನ್ನು ಆಧರಿಸಿ ಕೆಳಕಂಡಂತೆ ವಿವರಗಳನ್ನು ಕೋಷ್ಟಕದಲ್ಲಿ ಅಳವಡಿಸಿದೆ. ಕಾಯ್ದೆಯಲ್ಲಿನ ಅಂಶಗಳನ್ವಯ ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ, ಭೂ ಉಪಯೋಗ ಬದಲಾವಣೆಗೆ ಯಾರಿಂದಲಾದರು ಆಕ್ಷೇಪಣೆಗಳಿದ್ದರೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ | ಸರ್ವೆ ನಂ. | ವಿಸ್ತೀರ್ಣ ಎ-ಗು | ಅನುಮೋದಿತ ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1 | ಮೆ: ಸಿಪಾನಿ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್ (SSPL) ಪರವಾಗಿ ಶ್ರೀ ಮಾಧವ ಮೂರ್ತಿ ಎಂ.ಎನ್ | ಆನೇಕಲ್ | ಸರ್ಜಾಪುರ | ಮಾದಪ್ಪನಹಳ್ಳಿ | 24/6 | 1-00 | ಕೃಷಿ | ವಸತಿ |

ಪ್ರಸ್ತಾವನೆಯಲ್ಲಿನ ಪ್ರಶ್ನಿತ ಜಮೀನನ್ನು ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವುದರಿಂದ ಸುತ್ತಲಿನ ಪ್ರದೇಶ ಅಭಿವೃದ್ಧಿ ಹೊಂದುತ್ತದೆ. ಸ್ಥಳೀಯ ಕೂಲಿ ಕಾರ್ಮಿಕರಿಗೆ ಉದ್ಯೋಗವಕಾಶ ದೊರಕುತ್ತದೆ. ಪ್ರಶ್ನಿತ ಜಮೀನಿನಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳುಳ್ಳ ಸುಸಜ್ಜಿತವಾದ ವಸತಿ ವಿನ್ಯಾಸ ಅಭಿವೃದ್ಧಿಪಡಿಸುವುದರಿಂದ ವಸತಿ ರಹಿತ ಸಾರ್ವಜನಿಕರಿಗೆ ಕಾನೂನು ಬದ್ಧ ನಿವೇಶನಗಳು ಒದಗಿಸುತ್ತೇವೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ, ಸದರಿ ಪ್ರದೇಶವನ್ನು ಕೃಷಿ ವಲಯದಿಂದ ವಸತಿ ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಚಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- ಸದಸ್ಯ ಕಾರ್ಯದರ್ಶಿ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್.

ವಾಸಾಸಂಇ/ವಾಪ್ರ/ಜಿಎ/690/2024-25



## ಪುರಸಭಾ ಕಾರ್ಯಾಲಯ, ಶ್ರೀನಿವಾಸಪುರ

ಕೋಲಾರ ಜಿಲ್ಲೆ-563135 ಇ-ಮೇಲ್:itstaff_ulb_srinivasapura@yahoo.co.in
ವೆಬ್‌ಸೈಟ್:www.srinivasapuratown.mrc.gov.in, ದೂ.ಸಂ.: 08157-245160,246231

ಸಂಖ್ಯೆ:ಪುಸಶ್ರೀ/ತಾಂತ್ರಿಕ/ಸಿಆರ್/01/2024-25 ದಿನಾಂಕ: 28.06.2024

**ಟೆಂಡರ್ ಪ್ರಕಟಣೆ**
**(ಸ್ಟಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ಕೆ.ಡಬ್ಲ್ಯೂ ಡಿ-1 ಮತ್ತು 2ರ ನಿಬಂಧನೆಗಳಿಗೆ ಒಳಪಟ್ಟು ಇ-ಟೆಂಡರ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ).**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ಪ್ರಕಾರ 2024-25 ನೇ ಸಾಲಿನ ಪುರಸಭಾ ನಿಧಿ ಅನುದಾನದಡಿಯಲ್ಲಿ ಇ-ಪ್ರಕ್ಯೂರ್‌ಮೆಂಟ್ ಏಕ ಲಕೋಟೆ ಪದ್ಧತಿಯಲ್ಲಿ ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರು ರವರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರಕ್ಯೂರ್‌ಮೆಂಟ್ ಇಲಾಖಾ ವೆಬ್‌ಸೈಟ್ **http://kppp.karnataka.gov.in** ರಲ್ಲಿ ಟೆಂಡರ್‌ಗಾಗಿ ಭಾಗವಹಿಸಬಹುದು ಹಾಗೂ ವಿವರಗಳನ್ನು ಪಡೆಯಬಹುದಾಗಿದೆ. **(1)** ಖಾಲಿ ಟೆಂಡರ್ ಫಾರಂಗಳಿಗೆ ಇ-ಪ್ರಕ್ಯೂರ್‌ಮೆಂಟ್ ಪ್ರಕಾರ ಅರ್ಜಿ ಸಲ್ಲಿಸುವ ಹಾಗೂ ಷೆಡ್ಯೂಲ್-ಬಿ ಗಳನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ **ದಿನಾಂಕ: 12.07.2024 ರ ಸಂಜೆ: 05:00 ಗಂಟೆವರೆಗೆ. (2)** ತಾಂತ್ರಿಕ ಬಿಡ್ ಮತ್ತು ಆರ್ಥಿಕ **ಬಿಡ್‌ನ್ನು ತೆರೆಯುವ ದಿನಾಂಕ: 15.07.2024 ಬೆಳಗ್ಗೆ: 11:00 ಗಂಟೆಗೆ.**

| ಪ್ಯಾ ಸಂ. | ಕಾಮಗಾರಿಗಳ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಇ.ಎಂ.ಡಿ (ರೂ.ಗಳಲ್ಲಿ) | ಕಾಲಾವಧಿ |
|---|---|---|---|---|
| | 2024-25 ನೇ ಸಾಲಿನ ಪುರಸಭಾನಿಧಿ ಅನುದಾನ | | | |
| 1 | DMA/2024-25/SE31602 | 21.61 | 43,500 | 12 ತಿಂಗಳು |
| 2 | DMA/2024-25/SE3112 | 21.61 | 43,500 | 12 ತಿಂಗಳು |

**ಸೂಚನೆ:** ಹೆಚ್ಚಿನ ವಿವರಗಳಿಗಾಗಿ ಪುರಸಭೆ ತಾಂತ್ರಿಕ ವಿಭಾಗದಲ್ಲಿ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು.

ಸಹಿ/- ಮುಖ್ಯಾಧಿಕಾರಿ, ಪುರಸಭೆ ಶ್ರೀನಿವಾಸಪುರ

ವಾಸಾಸಂಇ/ಕೋಲಾರ/ಆರ್.ಓ.ಸಂಖ್ಯೆ:60/ಕೆಎಸ್‌ಎಂಸಿಎ/2024-25

ಕಂದಾಯ ಇಲಾಖೆ ಅರ್ಜಿಗಳೇ ಸಿಂಹ ಪಾಲು

# ಚಿಕ್ಕಬಳ್ಳಾಪುರ ಕೇಂದ್ರದಲ್ಲಿ ತಾಲೂಕು ಜನತಾ ದರ್ಶನ

**ಚಿಕ್ಕಬಳ್ಳಾಪುರ:** ವಿವಿಧ ಇಲಾಖೆ ಅಧಿಕಾರಿಗಳು ತಾಲ್ಲೂಕು ಹಂತದಲ್ಲೇ ರೈತರು ಮತ್ತಿತರ ಸಾರ್ವಜನಿಕರ ಸಮಸ್ಯೆಗಳ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ಇತ್ಯರ್ಥಪಡಿಸಬೇಕು. ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಪದೇ ಪದೇ ಅಲೆಯುವುದನ್ನು ತಪ್ಪಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ನಿರ್ದೇಶನ ನೀಡಿದರು.

ಚಿಕ್ಕಬಳ್ಳಾಪುರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ತಮ್ಮ ಕೃಷಿ ಚಟುವಟಿಕೆಗಳನ್ನು ಮುಗಿಸಿಕೊಂಡು ಸೋಮವಾರದ ದಿನದಂದು ತಾಲ್ಲೂಕು ಕಚೇರಿ, ಕೃಷಿ,ತೋಟಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಬರುತ್ತಾರೆ. ಈ ಸಂದರ್ಭದಲ್ಲಿ ಅಧಿಕಾರಗಳು ಮತ್ತು ನೌಕರ ಸಿಬ್ಬಂದಿ ಅನಗತ್ಯ ರಜೆ ಹಾಕದೇ ಹಾಜರಿದ್ದು ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು ಮತ್ತು ಪರಿಹಾರೋಪಾಯಗಳನ್ನು ಸೂಚಿಸಬೇಕು. ಆಯಾ ಇಲಾಖೆಗಳ ಮಟ್ಟದಲ್ಲಿಯೇ ಅರ್ಜಿಗಳು ವಿಲೇವಾರಿಯಾದರೆ ಜನಸ್ಪಂದನ ಕಾರ್ಯಕ್ರಮಕ್ಕೆ ರೈತರು,ಸಾರ್ವಜನಿಕರು ಅರ್ಜಿ ಹಿಡಿದು ಬರುವ ಅಗತ್ಯವೇ ಬರುವುದಿಲ್ಲ. ಈ ಬಗ್ಗೆ ಗಂಭೀರವಾಗಿ ಗಮನ ಹರಿಸಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಬೇಕು ಎಂದು ಸಲಹೆ ನೀಡಿದರು.



ಇಂದಿನ ಜನಸ್ಪಂದನದಲ್ಲಿ 52 ಅರ್ಜಿಗಳು ಬಂದಿದ್ದು, ಈ ಪೈಕಿ 40 ಕಂದಾಯ ಇಲಾಖೆ, 10 ಗ್ರಾಮೀಣಾಭಿವೃದ್ಧಿ ಇಲಾಖೆ ಹಾಗೂ ಒಂದು ಬೆಸ್ಕಾಂ ಮತ್ತು ಒಂದು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಗೆ ಸಂಬಂಧಿಸಿದ ಅರ್ಜಿಗಳಾಗಿವೆ. ಈ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ಕಡ್ಡಾಯವಾಗಿ ಇತ್ಯರ್ಥಪಡಿಸಿ ಜಿಲ್ಲಾಡಳಿತಕ್ಕೆ ವರದಿ ನೀಡಬೇಕು ಎಂದು ಸೂಚಿಸಿದರು.

**ವಿಶೇಷ ಪ್ರಕರಣ ಇತ್ಯರ್ಥ:** ಅಂಧ ವಿಕಲಚೇತನರ ಮಸಾಶನಕ್ಕೆ ಸಂಬಂಧಪಟ್ಟ ಅರ್ಜಿಯನ್ನು ಪರಿಶೀಲಿಸಿ ಸ್ಥಳದಲ್ಲೇ ಲೀಡ್ ಬ್ಯಾಂಕ್ ಮುಖ್ಯಸ್ಥರಿಗೆ ಸೂಚನೆ ನೀಡಿ ಜಿಲ್ಲಾಧಿಕಾರಿಗಳು ಇತ್ಯರ್ಥ ಪಡಿಸಿದರು.ಇನ್ನುಳಿದ 51 ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ವರ್ಗಾಯಿಸಿ ಕಾಲ ಮಿತಿಯೊಳಗೆ ಇತ್ಯರ್ಥಪಡಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಗ್ರಾಮಗಳ ಮೂಲಭೂತ ಅಗತ್ಯಗಳ ಕೊರತೆಗಳ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತರಬೇಕು,ಚರಂಡಿಗಳ ಸ್ವಚ್ಛತೆ ಹಾಗೂ ಪ್ಲಾಸ್ಟಿಕ್ ನಿಯಂತ್ರಣ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಮೂಲಕ ಗ್ರಾಮಗಳ ಸ್ವಚ್ಛತೆಗೆ ಒತ್ತು ನೀಡಬೇಕು.ವಾರಕ್ಕೆ ಒಂದು ದಿನ- ಪ್ರತಿ ಶುಕ್ರವಾರ ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಮಾಡುವ ದಿನ ''ವನ್ನಾಗಿ ಆಚರಣೆ ಮಾಡಬೇಕು, ಈ ದಿನದ ಅಂಗವಾಗಿ ಇಂದು ಚಿಕ್ಕಬಳ್ಳಾಪುರ ನಗರದ ವಾಪಸಂದ್ರ ವಾರ್ಡ್ ನಲ್ಲಿ ''ಸಮುದಾಯದೊಂದಿಗೆ ಸೇರಿ ಡೆಂಗಿ ಜ್ವರವನ್ನು ನಿಯಂತ್ರಿಸೋಣ'' ಎಂಬ ಘೋಷ ವಾಕ್ಯದೊಂದಿಗೆ ಅರಿವು ಮೂಡಿಸಲಾಯಿತು.ಸಾರ್ವಜನಿಕರು ತಮ್ಮ ಸುತ್ತಮುತ್ತಲ ಸ್ವಚ್ಛತೆ ಕಾಪಾಡಿಕೊಳ್ಳುವುದನ್ನು ಕಡಿಮೆ ಮಾಡಬಾರದು. ಸತತವಾಗಿ ಮಳೆ ಬರುತ್ತಿರುವುದರಿಂದ ನೀರಿನ ಮೂಲಗಳಲ್ಲಿ ನೀರು ಸಂಗ್ರಹವಾಗುತ್ತಿದ್ದು, ಸೊಳ್ಳೆಗಳ ಉತ್ಪತ್ತಿಯಾಗುತ್ತಿವೆ. ಡೆಂಗ್ಯೂ, ಚಿಕುಂ ಗುನ್ಯ ನಿಯಂತ್ರಣ ಮಾಡಲು ಮೊದಲು ಮನೆಯ ಮುಂಭಾಗದಲ್ಲಿ ಇಟ್ಟಿರುವ ಕೈ ಕಾಲು ತೊಳೆಯಲು ಬಳಕೆ ಮಾಡುವ ನೀರಿನ ತೊಟ್ಟಿ, ಬ್ಯಾರಲ್, ಚಿಪ್ಪು, ಬಾಟಲ್ ಗಳಲ್ಲಿನ ತೆರವು ಗೊಳಿಸಬೇಕು ಎಂದರು.

ಸೊಳ್ಳೆಗಳು ಮನುಷ್ಯರಿಗೆ ಕಚ್ಚುವುದರಿಂದ ರೋಗಗಳು ಹರಡುತ್ತವೆ. ಸೊಳ್ಳೆಗಳನ್ನು ನಿಯಂತ್ರಿಸಲು ವಾರದಲ್ಲಿ 2 ಬಾರಿ ನೀರು ಶೇಖರಿಸುವ ಡ್ರಂ, ಬ್ಯಾರಲ್, ಗಡಿಗೆ, ಸಿಮೆಂಟ್ ತೊಟ್ಟಿಗಳನ್ನು ಸ್ವಚ್ಚವಾಗಿ ತೊಳೆದು ಒಣಗಿದ ನಂತರ ನೀರು ಶೇಖರಿಸಿ ಮುಚ್ಚಳ ಅಥವಾ ಬಟ್ಟೆಗಳಿಂದ ಕಟ್ಟಿ ಸೊಳ್ಳೆಗಳು ಮೊಟ್ಟೆಗಳನ್ನು ಇಡದಂತೆ ಎಚ್ಚರಿಕೆ ವಹಿಸಬೇಕು, ಚರಂಡಿಯಲ್ಲಿ ಕಸ ಕಡ್ಡಿ ಹಾಕಬಾರದು,ವ್ಯರ್ಥ ನೀರು ಸರಾಗವಾಗಿ ಹೋಗುವಂತೆ ನೋಡಿಕೊಳ್ಳಬೇಕು. ಮಲಗುವಾಗ ಸೊಳ್ಳೆ ಪರದೆಯನ್ನು ಕಟ್ಟಿಕೊಂಡು ಮಲಗುವುದು, ಮೈ ತುಂಬಾ ಬಟ್ಟೆ ಧರಿಸಬೇಕು. ಮಸ್ಕಿಟೋ ಕಾಯಿಲ್, ಕ್ರೀಂ ಬಳಸಿ ಸ್ವಯಂ ರಕ್ಷಣೆ ಮಾಡಿಕೊಳ್ಳಬೇಕು. ಬಾಗಿಲು ಕಿಟಕಿಗಳಿಗೆ ಕರ್ಟನ್ ಹಾಕುವುದರ ಮೂಲಕ ಡೆಂಗ್ಯೂ ಹರಡದಂತೆ ಮುಂಜಾಗ್ರತ ಕ್ರಮಗಳನ್ನು ಅನುಸರಿಸಬೇಕು. ನೀರಿನ ತೊಟ್ಟಿಗಳು, ಟ್ಯಾಂಕ್ ಗಳ, ಸಂಪುಗಳನ್ನು ಪ್ರತಿವಾರ ಸ್ವಚ್ಛಗೊಳಿಸಬೇಕು ಎಂದು ತಿಳಿಸಿದರು.

ಸ್ಮಶಾನಕ್ಕಾಗಿಭೂಮಿ,ಒತ್ತುವರಿತೆರವು,ದಾರಿಗೆಅರ್ಜಿ,ಬಂಡಿ ದಾರಿಗೆ ಅರ್ಜಿ, ನಕಾಶೆಯಲ್ಲಿದ್ದ ದಾರಿಗಳಿಗೆ ಅರ್ಜಿ, ಜಮೀನಿನ ವಿವಾದಗಳ ಅರ್ಜಿ, ನಿವೇಶನಕ್ಕಾಗಿ , ಮನೆಗಳ ನಿರ್ಮಾಣಕ್ಕೆ ಅರ್ಜಿ, ಜನತಾ ದರ್ಶನದಲ್ಲಿ ಸ್ವೀಕರಿಸಿ ವಿಲೇವಾರಿಗೆ ಸೂಕ್ತ ಕ್ರಮವಹಿಸಲಾಯಿತು. ಒಟ್ಟಾರೆ ಜನತಾ ದರ್ಶನದಲ್ಲಿ 52 ಅರ್ಜಿಗಳ ಇತ್ಯರ್ಥಕ್ಕೆ ಅಗತ್ಯ ಕ್ರಮವಹಿಸಲಾಯಿತು. ಜಿಲ್ಲಾ ಪಂಚಾಯತ್ ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ತಹಶೀಲ್ದಾರ್ ಅನಿಲ್, ತಾಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಮಂಜುನಾಥ್, ಉಪ ಪೊಲೀಸ್ ವರಿಷ್ಠಾಧಿಕಾರಿ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಯುವನಿಧಿ ಫಲಾನುಭವಿಗಳು ಸ್ವಯಂ ಘೋಷಣೆ ಮಾಡಿಕೊಳ್ಳಲು ಮನವಿ

**ಚಾಮರಾಜನಗರ:** ಯುವನಿಧಿ ಯೋಜನೆಯ ಪ್ರಯೋಜನ ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂಘೋ?ಣೆ ಮಾಡಿಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ಪದವಿ ಮತ್ತು ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮಾಗಳನ್ನು 2022-23ನೇ ಶೈಕ್ಷಣಿಕ ವ?ದಲ್ಲಿ ವ್ಯಾಸಂಗ ಮಾಡಿ 2023ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್ ನಲ್ಲಿನೋಂದಣಿಯಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ 2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಅಭ್ಯರ್ಥಿಗಳು ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಬೇಕಿದ್ದರೆ, ಪ್ರತಿ ಮಾಹೆಯಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಪ್ರತಿ ತಿಂಗಳ 25ನೇ ತಾರೀಖಿನೊಳಗಾಗಿ ಸ್ವಯಂಘೋ?ಣೆಯನ್ನು ಮಾಡಬೇಕಿದೆ. ಸದರಿ ಯೋಜನೆಯ ಪ್ರಯೋಜನವನ್ನು ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ವೆಬ್‌ಸೈಟ್ https://sevasindhugs.karnataka.gov.in ನಲ್ಲಿ ಸ್ವಯಂಘೋಷಣೆ ಮಾಡಿಕೊಳ್ಳಬೇಕು. ಉಳಿದಂತೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಆಗದ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅವುಗಳ ಜೆರಾಕ್ಸ್ ಪ್ರತಿಗಳನ್ನು ಸಲ್ಲಿಸಿ ಅಪ್ರೂವ್ ಮಾಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಯನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿ ಯವರನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಅಥವಾ ದೂ.ಸಂ 08226-224430 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆಗೆ ಪ್ರೋತ್ಸಾಹಕ್ಕೆ ಸರ್ಕಾರ ಬದ್ಧ

**ಬೆಂಗಳೂರು:** ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆಗೆ ಪ್ರೋತ್ಸಾಹ ಮತ್ತು ಬೆಂಬಲ ನೀಡಲು ಸರ್ಕಾರ ಬದ್ದವಿದೆ ಎಂದು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ತಿಳಿಸಿದರು.

ಕೃಷಿ ಇಲಾಖೆ ಆವರಣದ ಸಂಗಮ ಸಭಾಂಗಣದಲ್ಲಿ ಕೃಷಿ, ಜಲಾನಯನ ಅಭಿವೃದ್ಧಿ ಹಾಗೂ ಅರಣ್ಯ ಇಲಾಖೆಗಳು, ಕೃಷಿ ಅರಣ್ಯ ರೈತರ ಮತ್ತು ತಂತ್ರಜ್ಞರ ಸಂಸ್ಥೆ, ಬಿದಿರು ಸೊಸೈಟಿ ಆಫ್ ಇಂಡಿಯಾ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರ ಹಾಗೂ ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ಬಿದಿರು ಮೌಲ್ಯವರ್ಧಿತ ವಸ್ತುಗಳ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ಬಿದಿರು ಮೌಲ್ಯವರ್ಧಿತ ವಸ್ತುಗಳ ಪ್ರದರ್ಶನವು ಉತ್ತಮವಾಗಿದೆ. ಇದು ರಾಜ್ಯ ಮಟ್ಟದಲ್ಲಿ ಬೆಳಕು ಚೆಲ್ಲುವ ಕಾರ್ಯಕ್ರಮವಾಗಿದೆ. ಬಿದಿರಿನ ಉಪಯೋಗಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.



ಬಿದಿರನ್ನು ಸಂಸ್ಕರಣೆ ಮಾಡಿ ಉಪಯೋಗಿಸಬಹುದು. ಕಡಿಮೆ ನೀರು, ಕಡಿಮೆ ವೆಚ್ಚದಲ್ಲಿ ಬಿದಿರನ್ನು ಬೆಳೆಯಬಹುದು. ಆಡು ಮುಟ್ಟದ ಸೊಪ್ಪಿಲ್ಲ ಎಂಬ ಗಾದೆಯಂತೆ ದಿನ ನಿತ್ಯವು ಬಿದಿರಿನಿಂದ ತಯಾರಿಸಿದ ವಸ್ತುಗಳ ಪ್ರಯೋಜನ ಪಡೆಯುತ್ತೇವೆ. ಬಿದಿರಿನಿಂದ ಮಾಡಿದ ಪೀಠೋಪಕರಣಗಳು ಗಟ್ಟಿ ಇರುವುದರಿಂದ ದೀರ್ಘಕಾಲ ನಾವು ಬಳಸಬಹುದು. ಬಿದಿರು ಕೇವಲ ಸಣ್ಣ ಪುಟ್ಟ ಪೀಠೋಪಕರಣ, ಆಟಿಕೆ ತಯಾರಿಸಲು ಸೀಮಿತವಾಗಿಲ್ಲ. ಬದಲಿಗೆ ದೊಡ್ಡ ಪಿಠೋಪಕರಣ, ನಿರ್ಮಾಣ ಕ್ಷೇತ್ರದಲ್ಲೂ ವ್ಯಾಪಕವಾಗಿ ಬಳಕೆಯಲ್ಲಿದೆ ಎಂದರು.

ಕೆಂಪೇಗೌಡ ಬೆಂಗಳೂರು ಇಂಟರ್ ನ್ಯಾಷನಲ್ ಏರ್ ಪೋರ್ಟ್ ಟರ್ಮಿನಲ್ 2 ನಲ್ಲಿ ಒಳಾಂಗಣ ಮತ್ತು ಹೊರಾಂಗಣದಲ್ಲಿ ಬಿದಿರನ್ನು ಉಪಯೋಗಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಚಿವರು ಕೃಷಿ ಅರಣ್ಯ-ರೈತರಿಗೊಂದು ಆಶಾಕಿರಣ ವಿಶೇಚ ಸಂಚಿಕೆ ಬಿಡುಗಡೆ ಮಾಡಿದರು.

ಕಾರ್ಯಕ್ರಮದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಸಿ.ಎನ್. ನಂದಿನಿಕುಮಾರಿ, ಕೃಷಿ ಇಲಾಖೆಯ ಆಯುಕ್ತರಾದ ವೈ.ಎಸ್ .ಪಾಟೀಲ್, ಕೃಷಿಅರಣ್ಯ ರೈತರ ಮತ್ತು ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಅಜಯ್ ಮಿಶ್ರಾ, ಕೃಷಿ ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿ ವಿ.ಕೆ. ಕಮತರ, ಬಿದಿರು ಸೊಸೈಟಿ ಆಫ್ ಇಂಡಿಯಾದ ಕಾರ್ಯನಿರ್ವಾಹಕ ನಿರ್ದೇಶಕರಾದ ಡಾ.ಕೆ.ಎನ್. ಮೂರ್ತಿ, ಕೃಷಿ ಅರಣ್ಯ ರೈತರ ಮತ್ತು ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿಗಳಾದ ಹೆಚ್.ಜಿ.ಶಿವಾನಂದ ಮೂರ್ತಿ ಸೇರಿದಂತೆ ಕೃಷಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವೈಯಕ್ತಿಕ ಯುಜಿಡಿ ಸಂಪರ್ಕಕ್ಕೆ ಅರ್ಜಿ ಆಹ್ವಾನ

**ಮೈಸೂರು:** 2024-25 ನೇ ಸಾಲಿಗೆ ಪಿರಿಯಾಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ಅನುಷ್ಠಾನಗೊಂಡಿರುವ ಕಲ್ಯಾಣ ಕಾರ್ಯಕ್ರಮದಡಿ ಶೇ.24.10, ಶೇ.7.25, ಹಾಗೂ ಶೇ.5 ಮನೆಗಳಿಗೆ ವೈಯಕ್ತಿಕ ಯುಜಿಡಿ ಸಂಪರ್ಕಕ್ಕೆ ಸಂಬಂಧಿಸಿದಂತೆ ವಾಸ್ತವಿಕ ಶುಲ್ಕದ ವೆಚ್ಚವನ್ನು ಫಲಾನುಭವಿಗಳ ಹೆಸರಿನ ವೆಚ್ಚವನ್ನು ಯುಜಿಡಿ ಅಥವಾ ನೀರಿನ ಸಂಪರ್ಕ ನೀಡುವ ಸಂಸ್ಥೆಗೆ ನೇರವಾಗಿ ಪಾವತಿಸಲು ಅರ್ಹ ಅರ್ಜಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಸೆ.09 ಕೊನೆ ದಿನಾಂಕ ವಾಗಿದ್ದು, ಆಸಕ್ತರು ನಿಗದಿತ ನಮೂನೆಯನ್ನು ಕಛೇರಿ ವೇಳೆಯಲ್ಲಿ ಪಡೆದು ಸೂಕ್ತ ದಾಖಲಾತಿಗಳೊಂಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ ಎಂದು ಪಿರಿಯಾಪಟ್ಟಣ ಪುರಸಭೆಯ ಮುಖ್ಯಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ತರಬೇತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತದಲ್ಲಿ ತರಬೇತಿ ಭತ್ಯೆ ನೀಡಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಗೆ ಜಿಲ್ಲೆಯ ಹಿಂದುಳಿದ ವರ್ಗದ 10 ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ತರಬೇತಿ ಅವಧಿಯು 04 ವರ್ಷಗಳಾಗಿದ್ದು, ಮಾಹೆಯಾನ ರೂ.4,000/-ಗಳ ತರಬೇತಿ ಭತ್ಯೆ ನೀಡಲಾಗುತ್ತದೆ. ಪ್ರವರ್ಗ-2ಎ, 3ಎ ಮತ್ತು 3ಬಿ ಗಳಿಗೆ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.2.50/-ಲಕ್ಷಗಳ ಮಿತಿಗೊಳಪಟ್ಟಿರಬೇಕು ಹಾಗೂ ಪ್ರವರ್ಗ-1ಕ್ಕೆ ರೂ.3.50/-ಲಕ್ಷಗಳು ಮಿತಿಗೊಳಪಟ್ಟಿರುತ್ತದೆ. ಅಭ್ಯರ್ಥಿಗಳ ವಯಸ್ಸು 30 ವರ್ಷ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳಿಗೆ 31 ವರ್ಷಗಳು ಮೀರಿರಬಾರದು. ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಬಾರ್ ಕೌನ್ಸಿಲ್‌ನಲ್ಲಿ ನೊಂದಣಿ ಮಾಡಿಸಿರಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 10 ರೊಳಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ರವರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ ಎಸ್.ಬಿ-4, 2ನೇ ಮಹಡಿ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ, ದೂರವಾಣಿ ಸಂ:08156-277053 ಗೆ ಸಂಪರ್ಕಿಸಬಹುದೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ

**ಹುಳಿಯಾರು:** ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಲ್ಲಿ 2024-25 ನೇ ಸಾಲಿಗೆ ಅಧಿಸೂಚನೆ ಹೊರಡಿಸಿರುವ ಬೆಳೆಗಳಿಗೆ ಸಾಲ ಪಡೆದಿರುವ/ಪಡೆಯುವ ರೈತರಿಗೆ ಕಡ್ಡಾಯವಾಗಿ ವಿಮೆಗೆ ಒಳಪಡಿಸಿದ್ದು ಹಾಗೂ ಬೆಳೆ ಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿರುತ್ತದೆ ಎಂದು ಹುಳಿಯಾರಿನ ಸಹಾಯಕ ತೋಟಗಾರಿಕೆ ಅಧಿಕಾರಿ ಮಂಜುನಾಥ್ ತಿಳಿಸಿದ್ದಾರೆ. ಬೆಳೆ ವಿಮೆಯಲ್ಲಿ ಅಡಿಕೆ, ಮಾವು, ಪಪ್ಪಾಯ ಮತ್ತು ದಾಳಿಂಬೆ ಒಳಪಟ್ಟಿದ್ದು ವಿಮೆ ಮಾಡಿಸುವ ರೈತರು ಕೂಡಲೇ ನಿಗಧಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಭೂಮಿ ಹೊಂದಿರುವ ದಾಖಲೆಗಳಾದ ಪಹಣಿ, ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ನಕಲು ಪ್ರತಿಗಳನ್ನು ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ತಾಲ್ಲೂಕಿನ ಯಾವುದಾದರು ರಾಷ್ಟ್ರೀಯ ಅಧಿಕೃತ ಬ್ಯಾಂಕುಗಳಲ್ಲಿ/ ಗ್ರಾಮ ಒನ್ ಮತ್ತು ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೊಂದಣಿ ಮಾಡಿಸಬಹುದಾಗಿರುತ್ತದೆ ಎಂದು ತಿಳಿಸಿದ್ದಾರೆ.



ಅಡಿಕೆ, ದಾಳಿಂಬೆ ಮತ್ತು ಪರಂಗಿ ಬೆಳೆಗಳಿಗೆ ನೊಂದಾಯಿಸಿಕೊಳ್ಳಲು ಕೊನೆಯ ದಿನಾಂಕವು 01-07-2024 ಮತ್ತು ಮಾವು ಬೆಳೆಗೆ 31-07-2024 ಕೊನೆಯ ದಿನಾಂಕವಾಗಿರುತ್ತದೆ. ಮಾರ್ಗಸೂಚಿ ಅನ್ವಯ ಬ್ಯಾಂಕಿನಲ್ಲಿ ಸಾಲ ಮಂಜೂರಾದ ಎಲ್ಲಾ ರೈತರು ಈ ಯೋಜನೆಯಡಿಯಲ್ಲಿ ಒಳಪಡಿಸಲಾಗುವುದು ಹಾಗೂ ಸಾಲ ಪಡೆದ ರೈತರು ಯೋಜನೆಯಲ್ಲಿ ನೊಂದಾಯಿಸಿಕೊಳ್ಳಲು ಇಚ್ಛಿಸದೇ ಇದ್ದಲ್ಲಿ ಸಂಬಂಧಿಸಿದ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ಬೆಳೆ ನೊಂದಣೆಯ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.

ಅಡಿಕೆ ಬೆಳೆಗೆ ವಿಮಾ ಮೊತ್ತ ಹೆಕ್ಟೇರ್‌ಗೆ 1,28,000 ರೂಗಳಾಗಿದ್ದು ರೈತರು ಪಾವತಿಸಬೇಕಾದ ವಿಮಾ ಕಂತು 6400 ರೂ. ಆಗಿರುತ್ತದೆ. ದಾಳಿಂಬೆವಿಮಾ ಮೊತ್ತ ಹೆಕ್ಟೇರ್‌ಗೆ 1,27,000 ರೂ.ಗಳಾಗಿದ್ದು ರೈತರು ಪಾವತಿಸಬೇಕಾದ ವಿಮಾ ಕಂತು 6350 ರೂ. ಆಗಿರುತ್ತದೆ. ಪರಂಗಿ ವಿಮಾ ಮೊತ್ತ ಹೆಕ್ಟೇರ್‌ಗೆ 1,34,000 ರೂ.ಗಳಾಗಿದ್ದು ರೈತರು ಪಾವತಿಸಬೇಕಾದ ವಿಮಾ ಕಂತು 6700 ರೂ.ಆಗಿರುತ್ತದೆ. ಮಾವುವಿಗೆ ವಿಮಾ ಮೊತ್ತ ಹೆಕ್ಟೇರ್‌ಗೆ 80,000 ರೂ.ಗಳಾಗಿದ್ದು ರೈತರು ಪಾವತಿಸಬೇಕಾದ ವಿಮಾ ಕಂತು 4000 ರೂ. ಆಗಿರುತ್ತದೆ ಎಂದು ಮಂಜುನಾಥ್ ವಿವರಿಸಿದ್ದಾರೆ.

# ನಾಡಪ್ರಭು ಕೆಂಪೇಗೌಡ 515 ನೇ ಜಯಂತಿ ಆಚರಣೆ

**ವಿಜಯಪುರ:** ಬಸವಣ್ಣ, ಕನಕದಾಸರು, ಅಂಬೇಡ್ಕರ್ , ಕೆಂಪೇಗೌಡರು, ಅಬ್ದುಲ್ ಕಲಾಂ, ಇವರಾರು ಒಂದು ಜಾತಿಗೆ ಸೀಮಿತವಲ್ಲ, ನಾವು ಅವರ ವಿಚಾರಧಾರೆಗಳನ್ನು ಅನುಸರಿಸಬೇಕೆಂದು ಅಖಿಲ ಕರ್ನಾಟಕ ಮಿತ್ರ ಸಂಘದ ರಾಜ್ಯಾಧ್ಯಕ್ಷ ಚಿ.ಮಾ.ಸುಧಾಕರ ತಿಳಿಸಿದರು. ವಿಜಯಪುರ ಪಟ್ಟಣದ ಸೋಲಾಲ್ ದಿಣ್ಣೆ ಹತ್ತಿರವಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ(ಪೂರ್ವ) ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಹಾಗೂ ಅಖಿಲ ಕರ್ನಾಟಕ ಮಿತ್ರ ಸಂಘದ ಆಶ್ರಯದಲ್ಲಿ ಏರ್ಪಡಿಸಿದ್ದ ನಾಡಪ್ರಭು ಕೆಂಪೇಗೌಡ 515 ನೇ ಜಯಂತಿಯ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಚಂದ್ರಶೇಖರ್ ಹಡಪದ್ ನಾಡಪ್ರಭು ಕೆಂಪೇಗೌಡ ಜಯಂತಿಯ ಬಗ್ಗೆ ಉಪನ್ಯಾಸ ನೀಡುತ್ತಾ ಹಿರಿಯ



ಕೆಂಪೇಗೌಡರು (1510-1569) ವಿಜಯನಗರ ಸಾಮ್ರಾಜ್ಯದ ಸಾಮಂತ ರಾಜ್ಯವಾಗಿದ್ದ ಯಲಹಂಕ ನಾಡಿನ ಪಾಳೇಗಾರರಾಗಿದ್ದರು. ಹಂಪಿಯ ವೈಭವವನ್ನು ಕಂಡು ಬೆರಗಾಗಿದ್ದ ಕೆಂಪೇಗೌಡರ ದೂರದೃಷ್ಟಿಯಿಂದ ನಿರ್ಮಿಸಿದ ಬೆಂಗಳೂರು ನಗರ ಕರ್ನಾಟಕ ರಾಜ್ಯದ ರಾಜಧಾನಿಯಾಗಿರುವುದಲ್ಲದೆ ಭಾರತದ ಪ್ರಮುಖ ನಗರ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಶಾಲಾ ಮುಖ್ಯೋಪಾಧ್ಯಾಯರಾದ ಸುಜಾತಾ, ಮಿತ್ರ ಸಂಘದ ಕಾರ್ಯಾಧ್ಯಕ್ಷರಾದ ವಿ. ವಿಶ್ವನಾಥ್, ಗೌರವ ಕಾರ್ಯದರ್ಶಿಯಾದ ಆರ್. ಮುನಿರಾಜು, ಶಿಕ್ಷಕರಾದ ಸೋಮಶೇಖರ್, ಮಂಜುಳಾ, ರಾಮರತ್ನ, ರಾಮಲಕ್ಷ್ಮಿ, ಸೂರ್ಯಪ್ರಭ, ವಿಜಯಲಕ್ಷ್ಮಿ, ಕುಮಾರಿ ಜಲಜಾಕ್ಷಿ ಮತ್ತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಈಡಿಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಗೆ ಶಾಸಕರಿಂದ ಚಾಲನೆ

**ಬೆಂಗಳೂರು ಗ್ರಾಮಾಂತರ:** ಪ್ರಸ್ತುತ ಮಳೆಗಾಲವಾಗಿದ್ದು ರಾಜ್ಯದಲ್ಲಿ ಡೆಂಗಿ ಜ್ವರ ಪ್ರಕರಣಗಳು ಏರಿಕೆಯಾಗುವ ಸಾಧ್ಯತೆಯಿಂದಾಗಿ ರಾಜ್ಯಾದ್ಯಂತ ಜೂನ್ 28ರಂದು ಈಡಿಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಗೆ ಚಾಲನೆ ನೀಡಲಾಗಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದಲ್ಲಿ ಹೊಸಕೋಟೆ ಶಾಸಕರು ಹಾಗೂ ಕಿಯೋನಿಕ್ಸ್ ಅಧ್ಯಕ್ಷರಾದ ಶರತ್ ಕುಮಾರ್ ಬಚ್ಚೆಗೌಡರಿಂದ ಚಾಲನೆ ನೀಡಲಾಯಿತು. ಈ ಚಾಲನೆಯು ಪ್ರತಿ ಗುರುವಾರ ಲಸಿಕಾ ದಿನವಾಗಿರುವಂತೆ ಪ್ರತಿ ಶುಕ್ರವಾರ ಈಡಿಸ್ ಸೊಳ್ಳೆ ನಿರ್ಮೂಲನಾ ದಿನವನ್ನಾಗಿ ಆಚರಿಸಲಾಗುವುದು. ಪ್ರತಿ ಶುಕ್ರವಾರ ಸಾರ್ವಜನಿಕರು ಸ್ವತಹ ತಮ್ಮ ಮನೆಗಳಲ್ಲಿ, ಸಿಬ್ಬಂದಿ ವರ್ಗದವರು ಕಚೇರಿಗಳಲ್ಲಿ, ಶಾಲಾ ಕಾಲೇಜುಗಳು ಇತ್ಯಾದಿಗಳಲ್ಲಿ ನೀರು ತುಂಬುವ ಹೆಚ್ಚು ದಿನಗಳವರೆಗೆ ಶೇಖರಣೆಯಾಗುವ ಪರಿಕರಗಳನ್ನು ಪ್ರತಿದಿನ ಸ್ವಚ್ಛಗೊಳಿಸಬೇಕು. ಮಳೆ ನೀರು ಸಂಗ್ರಹವಾಗುವ ಘನತ್ಯಾಜ್ಯ ವಸ್ತುಗಳ ವಿಲೇವಾರಿ ಮಾಡುವುದರ ಮೂಲಕ ಡೆಂಗಿ ಜ್ವರ ನಿಯಂತ್ರಣ ಕ್ರಮದಲ್ಲಿ ಅತಿ ಮುಖ್ಯವಾದ ಈಡಿಸ್ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶ ಮಾಡುವುದರಿಂದ ಡೆಂಗಿ ನಿಯಂತ್ರಣ ಮಾಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಜುಲೈ ತಿಂಗಳಿನಲ್ಲಿ ಆಚರಿಸಲ್ಪಡುವ ಡೆಂಗಿ ವಿರೋಧ ಮಾಸಾಚರಣೆಯ ಧ್ಯೇಯ ವಾಕ್ಯವು 'ಸಮುದಾಯದೊಂದಿಗೆ ಸೇರಿ ಡೆಂಗಿ ಜ್ವರವನ್ನು ನಿಯಂತ್ರಿಸೋಣ' ಎಂದಾಗಿದೆ. ಈ ಡೆಂಗಿ ಜ್ವರ ನಿಯಂತ್ರಣ ಕ್ರಮಗಳ ಅನುಷ್ಠಾನದಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಿ ಡೆಂಗಿ ನಿಯಂತ್ರಣಕ್ಕೆ ಕೈಜೋಡಿಸಿ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಸುನಿಲ್ ಕುಮಾರ್ ಹೇಳಿದರು.

# ಜಾನಪದ ಕೃತಿಗಳ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ಜಾನಪದ ಅಕಾಡೆಮಿಯ ವತಿಯಿಂದ 2022 ನೇ ಸಾಲಿನಲ್ಲಿ ಜನವರಿ 01 ರಿಂದ ಡಿಸೆಂಬರ್ 31 ರವರೆಗೆ ಹಾಗೂ 2023 ನೇ ಸಾಲಿನಲ್ಲಿ ಜನವರಿ 01 ರಿಂದ ಡಿಸೆಂಬರ್31 ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತು ಪಡಿಸಿ) ಕನಿಷ್ಠ 150 ಪುಟಗಳಿಗೂ ಮೇಲ್ಪಟ್ಟಿರುವಂತೆ 1) ಜಾನಪದ ಗದ್ಯ, 2) ಜಾನಪದ ಪದ್ಯ, 3) ಜಾನಪದ ವಿಚಾರ-ವಿಮರ್ಶೆ-ಸಂಶೋಧನೆ, 4) ಜಾನಪದ ಸಂಕೀರ್ಣ ಈ ನಾಲ್ಕು ಪ್ರಕಾರಗಳ ಅತ್ಯುತ್ತಮ ಜಾನಪದ ಕೃತಿಗಳಿಗೆ ಬಹುಮಾನ ನೀಡುವ ಯೋಜನೆಯಡಿಯಲ್ಲಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ. ಲೇಖಕರು/ ಪ್ರಕಾಶಕರು/ ಸಂಪಾದಕರು 4 ಕೃತಿಗಳನ್ನು ದ್ವಿಪ್ರತಿಯೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2 ನೆ ಮಹಡಿ, ಕನ್ನಡ ಭವನ, ಜೆ.ಸಿ ರಸ್ತೆ ಬೆಂಗಳೂರು-560002 ಇವರಿಗೆ 2024 ರ ಜುಲೈ. 20 ಒಳಗಾಗಿ ತಲುಪುವಂತೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಕಳುಹಿಸಬೇಕೆಂದು ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

**ಮೈಸೂರು:** ವಿಶ್ವ ಬಾಲಕಾರ್ಮಿಕ ವಿರೋಧಿ ದಿನ-2024 ರ ಅಂಗವಾಗಿ ಜೂನ್ 01 ರಿಂದ 30 ರವರೆಗೆ ಜಿಲ್ಲೆಯಾದ್ಯಂತ ಜಿಲ್ಲಾ ಕಾರ್ಯಪಡೆ ಹಾಗೂ ಅಧಿಕಾರಿಗಳನ್ನೊಳಗೊಂಡಂತೆ ಒಂದು ತಿಂಗಳ ಬಾಲ/ಕಿಶೋರ ಕಾರ್ಮಿಕ ರಕ್ಷಣಾ ಅಭಿಯಾನ ಹಮ್ಮಿಕೊಂಡಿದ್ದು, ಅದರಂತೆ ಮೈಸೂರು ನಗರ ಪ್ರದೇಶದಲ್ಲಿ ಜೂನ್ 24 ಮತ್ತು 25 ರಂದು ಬಾಲ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನವನ್ನು ನಡೆಸಿ, ವಿವಿಧ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ 09 ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಿ ಕೆಲಸದಿಂದ ಬಿಡುಗಡೆಗೊಳಿಸಲಾಯಿತು. ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಿ ಸದರಿ ಕಿಶೋರ ಕಾರ್ಮಿಕ ಮಕ್ಕಳನ್ನು ಬಾಲಕರ ಬಾಲಮಂದಿರಕ್ಕೆ ದಾಖಲಿಸಲಾಯಿತು. ಅಭಿಯಾನದಲ್ಲಿ ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಮಕ್ಕಳ ವಿಶೇಷ ಪೊಲೀಸ್ ಘಟಕ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಸರ್ಕಾರೇತರ ಸಂಸ್ಥೆಗಳ ಸಿಬ್ಬಂದಿಗಳು ಹಾಜರಿದ್ದರು ಎಂದು ಸಹಾಯಕ ಕಾರ್ಮಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆ, ಯುವತಿ ಪತ್ತೆಗೆ ಮನವಿ

**ರಾಮನಗರ:** ಚನ್ನಪಟ್ಟಣ ತಾಲ್ಲೂಕಿನ ಮಳೂರು ಹೋಬಳಿಯ ಮಾಕಳಿ ಗ್ರಾಮದ ನಿವಾಸಿಗಳಾದ ಪೂಜಾ (27 ವರ್ಷ) ಎಂಬ ಮಹಿಳೆ ಹಾಗೂ ಗುಣಶ್ರೀ (9 ವರ್ಷ) ಎಂಬ ಯುವತಿ ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ. ಪೂಜಾ ಚಹರೆಯ ವಿವರ:- 5.2 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕೋಲುಮುಖ, ಇವರು ಕಾಣೆಯಾಗುವಾಗ ಹಸಿರು ಬಣ್ಣದ ಟೀಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಗುಣಶ್ರೀ ಚಹರೆಯ ವಿವರ:- 4 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ. ಇವರು ಕಾಣೆಯಾಗುವಾಗ ಹಸಿರು ಬಣ್ಣದ ಟೀಶರ್ಟ್ ಹಾಗೂ ಬಿಳಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ಎಂ.ಕೆ. ದೊಡ್ಡಿ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ವ್ಯಕ್ತಿ ಪತ್ತೆಗೆ ಮನವಿ

**ರಾಮನಗರ:** ಚನ್ನಪಟ್ಟಣ ಟೌನಿನ ಬಿ.ಎಂ. ಸ್ಟ್ರೀಟ್‌ನ ನಿವಾಸಿ ಸಮೀಉಲ್ಲಾ ಖಾನ್ (33 ವರ್ಷ) ಎಂಬ ವ್ಯಕ್ತಿ ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ. ಚಹರೆಯ ವಿವರ:- 5.3 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಬಣ್ಣ, ತೆಳ್ಳನೆಯ ಮೈಕಟ್ಟು, ಇವರು ಕಾಣೆಯಾಗುವಾಗ ಕ್ರೀಮ್ ಬಣ್ಣದ ತುಂಬು ತೋಳಿನ ಶರ್ಟ್, ಬ್ಲೂ ಜೀನ್ಸ್ ಪ್ಯಾಂಟ್, ತಲೆಗೆ ಬಿಳಿಯ ಬಣ್ಣದ ಟೋಪಿ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ಚನ್ನಪಟ್ಟಣ ಪೂರ್ವ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಕೆಂಪೇಗೌಡರ ನಾಯಕತ್ವದ ಗುಣ ಅಳವಡಿಸಿಕೊಳ್ಳಿ

**ರಾಮನಗರ:** ಬೆಂಗಳೂರು ಪ್ರಪಂಚಾದ್ಯಂತ ವ್ಯಾಪಾರ ವಹಿವಾಟಿನಲ್ಲಿ ಇಂದು ಅಗ್ರಸ್ಥಾನದಲ್ಲಿದೆ. ಇದಕ್ಕೆ ಕೆಂಪೇಗೌಡರು ಮೊದಲು ಅಡಿಪಾಯ ಹಾಕಿದರು ಎಂದು ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ಅಭಿಪ್ರಾಯಪಟ್ಟರು.

ಅವರು ಜೂ. 27ರ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅಂದು ಕೆಂಪೇಗೌಡರು ಇಡೀ ಬೆಂಗಳೂರಿನ ಸುತ್ತಮುತ್ತಲು ಸಾಮ್ರಾಜ್ಯ ವಿಸ್ತರಣೆ ಮಾಡಿದ್ದರು. ಅದೇ ರೀತಿ ನೀವು ನಿಮ್ಮ ಅವಕಾಶಗಳನ್ನು ಕೇವಲ ಜಿಲ್ಲೆಗೆ ಸೀಮಿತಗೊಳಿಸಿಕೊಳ್ಳಬೇಡಿ. ದೇಶಾದ್ಯಂತ ಉದ್ಯೋಗ ನಿರ್ವಹಿಸುವಂತಹ ಮಾನಸಿಕ ಸ್ಥಿತಿಯನ್ನು ರೂಡಿ ಮಾಡಿಕೊಳ್ಳಬೇಕು. ಈ ಸಂದೇಶವನ್ನು ಎಲ್ಲಾ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಇಲ್ಲಿ ನೆರೆದಿರುವ ಎಲ್ಲಾ ತಂದೆ ತಾಯಂದಿರಿಗೆ ನಾನು ಮನವಿ ಮಾಡುತ್ತಿದ್ದೇನೆ ತಮ್ಮ ಮಕ್ಕಳಿಗೆ ಶಿಕ್ಷಣ ಮತ್ತು ಉದ್ಯೋಗದ ವಿಷಯಗಳಲ್ಲಿ ಕೇವಲ ಜಿಲ್ಲೆಗೆ ಸೀಮಿತಗೊಳಿಸಬೇಡಿ ದೇಶಾದ್ಯಂತ ಅಪಾರ ಅವಕಾಶಗಳಿದ್ದು ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.



ಜಾನಪದ ವಿದ್ವಾಂಸರು ಹಾಗೂ ಸಾಹಿತಿಗಳಾದ ಡಾ. ಬೈರೇಗೌಡ ಅವರು ಮಾತನಾಡಿ, ಕೆಂಪೇಗೌಡರು ಎಲ್ಲಾ ಸಮುದಾಯದವರೆಗೆ ಅನುಕೂಲವಾಗುವಂತೆ 16 ಪೇಟೆಗಳನ್ನು ನಿರ್ಮಿಸಿದರು ಇದು ಅವರು ಸಮುದಾಯಗಳ ಅಭಿವೃದ್ಧಿಗೆ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳಾಗಿದ್ದವು ಬೆಂಗಳೂರು ಸುತ್ತಮುತ್ತಲು ಸಾವಿರಾರು ಕೆರೆಗಳನ್ನು ನಿರ್ಮಿಸಿದ್ದರು. ಅವರ ಜನೋಪಕಾರಿ ಕಾರ್ಯಗಳು ಇಂದಿಗೂ ಮಾದರಿಯಾಗಿವೆ ಎಂದು ತಿಳಿಸಿದರು. ಯುವಕರು ಅವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಕೆಂಪೇಗೌಡರು ರೈತಾಪಿ ಜನರಿಗೆ ಕೃಷಿಗೆ ಅನುಕೂಲವಾಗುವಂತೆ ಕೆರೆಗಳನ್ನು ನಿರ್ಮಿಸಿ ಅನುಕೂಲ ಮಾಡಿ ಕೊಟ್ಟಿದ್ದರು ಹಲವಾರು ದೇವಸ್ಥಾನಗಳನ್ನು ನಿರ್ಮಿಸಿ ಹಲವಾರು ವರ್ತಕರಿಗೆ ಆಶ್ರಯವನ್ನು ನೀಡಿದರು ಅಂದಿನ ಕಾಲದಲ್ಲೇ ಬೆಂಗಳೂರನ್ನು ಮಾದರಿ ಬೆಂಗಳೂರನ್ನಾಗಿ ನಿರ್ಮಿಸಿದ್ದರು ಇದಕ್ಕೆ ಅವರು ಬೆಂಗಳೂರಿನ ನಾಲ್ಕು ಮೂಲೆಯಲ್ಲಿ ನಿರ್ಮಿಸಿದ್ದ ಕೋಟೆಗಳೆ ಸಾಕ್ಷಿಯಾಗಿದೆ ಎಂದರು.

ಜಿಲ್ಲೆಯಲ್ಲಿ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಅಭ್ಯಾಸ ಮಾಡಿ ಅತಿಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಮತ್ತು ಕಲೆ, ಸಾಹಿತ್ಯ ಮತ್ತು ಇನ್ನಿತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರಿಗೆ ಸನ್ಮಾನಿಸಲಾಯಿತು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿರುವ ನಾಡಪ್ರಭು ಶ್ರೀ ಕೆಂಪೇಗೌಡರ ಪ್ರತಿಮೆಗೆ ಶ್ರೀ ಆದಿಚುಂಚನಗಿರಿ ರಾಮನಗರ ಶಾಖಾ ಮಠದ ಮಠಾಧಿಕಾರಿ ಶ್ರೀ ಅನ್ನದಾನೇಶ್ವರನಾಥ ಸ್ವಾಮೀಜಿ, ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಅವರು ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್. ಎಚ್ ರಾಮಚಂದ್ರ, ರಾಮನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್, ನಾಡಪ್ರಭು ಕೆಂಪೇಗೌಡ ಸಮಿತಿಯ ಅಧ್ಯಕ್ಷರಾದ ಚಂದ್ರಣ್ಣ, ಕಾರ್ಯದರ್ಶಿಗಳಾದ ರವಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು ಟಿ.ಜಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರುಗಳು ಉಪಸ್ಥಿತರಿದ್ದರು.

# ಕೆಂಪೇಗೌಡರ ಆದರ್ಶ ಅನುಸರಿಸೋಣ

**ಮೈಸೂರು:** ನಾಡನ್ನು ಕಟ್ಟುವ ಕಾರ್ಯದಲ್ಲಿ ಕೆಂಪೇಗೌಡರ ಪಾತ್ರ ಮಹತ್ವವಾದದ್ದು, ಈ ನಿಟ್ಟಿನಲ್ಲಿ ಪ್ರತಿಯೊಂದು ಪೀಳಿಗೆಯವರಿಗೂ ಅವರ ಕೊಡುಗೆ ಅಪಾರ ಎಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ. ದೇವೇಗೌಡ ಅವರು ಹೇಳಿದರು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಕರ್ನಾಟಕ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ನಾಡಪ್ರಭು ಶ್ರೀ ಕೆಂಪೇಗೌಡರ 515 ನೇ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತೀ ವರ್ಷವು ಕೆಂಪೇಗೌಡ ಜಯಂತಿಯನ್ನು ಅರ್ಥ ಪೂರ್ಣವಾಗಿ ಆಚರಿಸಿ ಸಮಾಜದ ಎಲ್ಲಾ ಜನಸಾಮಾನ್ಯರಿಗೂ ಕೆಂಪೇಗೌಡರ ಕೊಡುಗೆಗಳನ್ನು ತಿಳಿಸುವ ಕೆಲಸ ಮಾಡಲಾಗುತ್ತಿದೆ. ಆದರೇ ಇದು ಕೇವಲ ಜಯಂತಿಗೆ ಸೀಮಿತವಾಗದೆ ದಿನನಿತ್ಯ ಅವರ ಬಗ್ಗೆ ಅರಿವು ಮೂಡಿಸಿ ಅವರ ಆಶಯಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳುವಂತೆ ಮಾಡಬೇಕು ಎಂದರು.



ಕೆಂಪೇಗೌಡ ಅವರು 16 ನೇ ಶತಮಾನದಲ್ಲಿಯೇ ಹಲವು ತಜ್ಞರೊಂದಿಗೆ ಚರ್ಚಿಸಿ ಬೆಂಗಳೂರಿನ ನಿರ್ಮಾಣದ ಕನಸನ್ನು ಕಂಡು ಅದನ್ನು ನನಸು ಮಾಡಿ ಬೆಂಗಳೂರಿನ ನಿರ್ಮಾತೃ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಅನೇಕ ಪೇಟೆಗಳು, ಮಾರುಕಟ್ಟೆ, ದೇವಾಲಯಗಳು, ಕೆರೆಗಳನ್ನು ನಿರ್ಮಿಸಿ ಬೆಂಗಳೂರಿಗೆ ಹೊಸ ಚೈತನ್ಯ ತುಂಬಿದರು. ಇಂದು ಬೆಂಗಳೂರು ಪ್ರಪಂಚಕ್ಕೆ ಪರಿಚಿತವಾಗಲು ಮುಖ್ಯ ಕಾರಣವೇ ಕೆಂಪೇಗೌಡರು. ಬೆಂಗಳೂರಿನ ಅಂತ ರಾಷ್ಟ್ರೀಯ ವಿಮಾನ ನಿಲ್ದಾಣ ಹಾಗೂ ಪ್ರತಿಮೆಯೇ ನಾಡಪ್ರಭು ಕೆಂಪೇಗೌಡರ ಕೊಡುಗೆಯನ್ನು ತಿಳಿಸುತ್ತವೆ ಎಂದರು.

ಜಿಲ್ಲಾಧಿಕಾರಿಗಳಾದ ಡಾ.ಕೆ.ವಿ.ರಾಜೇಂದ್ರ ಅವರು ಮಾತನಾಡಿ, ಪ್ರತಿಯೊಂದು ಜಯಂತಿಯ ಆಚರಣೆಗಳನ್ನು ಸಂಕೇತಿಕವಾಗಿ ಆಚರಣೆ ಮಾಡುವುದರ ಜೊತೆಗೆ ಅವರ ಚಿಂತನೆಗಳನ್ನು, ಆದರ್ಶಗಳನ್ನು, ಕೊಡುಗೆಗಳನ್ನು ಬಳಸಿ ಉಳಿಸಿಕೊಂಡು ಹೋಗಬೇಕು ಎಂದರು.

ಯಾವುದೇ ತಂತ್ರಜ್ಞಾನದ ಬಳಕೆ ಇಲ್ಲದ 16 ನೇ ಶತಮಾನದಲ್ಲಿಯೇ ವೈಜ್ಞಾನಿಕವಾಗಿ ನಗರವನ್ನು ಕಟ್ಟುವಲ್ಲಿ ಸಫಲರಾದರು ಕೆಂಪೇಗೌಡರು. ಯಾವುದೇ ಒಂದು ಜಾತಿಗೆ ಮಾತ್ರ ಸೀಮಿತವಾಗದೆ ಇಡೀ ಸಮಾಜಕ್ಕೆ ಕೊಡುಗೆ ಕೊಟ್ಟಂತಹ ಮಹಾನ್ ವೀರ ಕೆಂಪೇಗೌಡ. ಇವರು ಕೊಟ್ಟಂತಹ ಕೊಡುಗೆಯನ್ನು ಮುಂದಿನ ಪೀಳಿಗೆಗೆ ತಿಳಿಸಿಕೊಡುವಂತಹ ಪ್ರಯತ್ನ ಮಾಡಬೇಕು ಎಂದರು.

ವಿಧಾನ ಪರಿಷತ್ನ ಶಾಸಕರಾದ ಸಿ.ಎನ್.ಮಂಜೇಗೌಡ ಅವರು ಮಾತನಾಡಿ, ಕೆಂಪೇಗೌಡರು ಮಾಡಿದ ಸಾಧನೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ, ಅದನ್ನು ಉಳಿಸಿಕೊಂಡು ಹೋಗಬೇಕು. ರಾಜ್ಯದ ರಕ್ಷಣೆಗಾಗಿ ಅವರು ಮಾಡಿದ ತ್ಯಾಗ, ಬಲಿದಾನವನ್ನು ನಾವು ನೆನೆಯಬೇಕು. ಅವರು ಯಾವುದೇ ಒಂದು ಸಮಾಜಕ್ಕೆ ಮಾತ್ರ ಸೀಮಿತವಲ್ಲ ಎಂದರು.

ಮೈಸೂರು ಆದಿ ಚುಂಚನಗಿರಿ ಶಾಖಾ ಮಠದ ಶ್ರೀ ಶ್ರೀ ಸೋಮೇಶ್ವರನಾಥ ಸ್ವಾಮೀಜಿಯವರು ಅವರು ಮಾತನಾಡಿ, ಸಮಾಜದ ಅಭಿವೃದ್ಧಿಯ ಹರಿಕಾರರಾದ ಕೆಂಪೇಗೌಡರ ವಿಚಾರ ಲಹರಿ, ಕೊಡುಗೆಗಳು ಅಪಾರ. ಮನುಷ್ಯ ಕುಲ ತಾನೊಂದೇ ವಲಂ ಎಂಬಂತೆ ಅವರು ಮಾಡಿದ ಕೆಲಸಗಳನ್ನು ನಮ್ಮ ಮಕ್ಕಳಿಗೆ ತಿಳಿಸಿ ಕೊಡಬೇಕು ಎಂದರು.ಮುಖ್ಯ ಭಾಷಣಕಾರರಾದ ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕರಾದ ಡಿ.ಕೆ ರಾಜೇಂದ್ರ ಅವರು ಮಾತನಾಡಿ, ನಾವು ಪ್ರತಿವರ್ಷ ವಿವಿಧ ಜಯಂತಿಗಳನ್ನು ಆಚರಿಸುತ್ತಾ ಬಂದಿದ್ದೇವೆ. ಯಾವುದೇ ಮಹಾವೀರರ ಜಯಂತಿಗಳು ಸಹ ಹುಟ್ಟಿನಿಂದಲೇ ಅವರ ಜಾತಿಗೆ ಸೇರಿರಬಹುದು ಆದರೆ ಇಂದು ಜಾತಿಯನ್ನು ಮೀರಿ ಸಮಾಜಕ್ಕೆ ಅವರು ಕೊಟ್ಟಂತಹ ಕೊಡುಗೆ ಮಹತ್ವವಾದದ್ದು ಎಂದರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್, ವಿಧಾನ ಪರಿಷತ್ತಿನ ಶಾಸಕರಾದ ಕೆ.ವಿವೇಕಾನಂದ, ಜಿಲ್ಲಾ ಪಂಚಾಯತ್ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ.ಎಂ ಗಾಯತ್ರಿ, ಮೈಸೂರು ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ವಿ.ಎನ್ ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ.ಸುದರ್ಶನ್, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಡ್ಡಿಕೆರೆ ಗೋಪಾಲ್ ಸೇರಿದಂತೆ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ರಿಲಯನ್ಸ್ ಫೌಂಡೇಷನ್ ಸಹಯೋಗದಲಿ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇದೇ ಮೊದಲ ಬಾರಿಗೆ 'ಇಂಡಿಯಾ ಹೌಸ್'

ವಿಶ್ವ ಮಟ್ಟದಲ್ಲಿ ಪ್ರಮುಖ ಕ್ರೀಡಾಕೂಟವಾದ ಒಲಿಂಪಿಕ್ಸ್ ಆರಂಭಕ್ಕೆ ಇನ್ನು ಕೇವಲ ಒಂದು ತಿಂಗಳಷ್ಟೇ ಬಾಕಿ ಇದೆ. ಪ್ಯಾರಿಸ್ ಒಲಿಂಪಿಕ್ಸ್- 2024ರ ಕಡೆಗೆ ವಿಶ್ವಾದ್ಯಂತದ ಕ್ರೀಡಾಸಕ್ತರು ಕಣ್ಣು ನೆಟ್ಟಿದ್ದಾರೆ. ಅಂದಹಾಗೆ ಇದೇ ಮೊದಲ ಬಾರಿಗೆ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾರತದ ''ಇಂಡಿಯಾ ಹೌಸ್'' ಕಾಣಬಹುದಾಗಿದೆ. ಭಾರತೀಯ ಒಲಿಂಪಿಕ್ಸ್ ಒಕ್ಕೂಟದ ಸಹಭಾಗಿತ್ವ ವಹಿಸಿರುವಂಥ ರಿಲಯನ್ಸ್ ಫೌಂಡೇಷನ್ ನಿಂದ ಈ ''ಇಂಡಿಯಾ ಹೌಸ್'' ಪರಿಕಲ್ಪನೆ ಮೂಡಿದೆ. ಈ ಇಂಡಿಯಾ ಹೌಸ್ ನಲ್ಲಿ ಭಾರತದ ಕ್ರೀಡಾ ಸಂಸ್ಕೃತಿ- ಪರಂಪರೆಯನ್ನು ಪ್ರದರ್ಶಿಸಲಾಗುತ್ತದೆ. ಅದರಲ್ಲಿ ಕ್ರೀಡೆಗೆ ಸಂಬಂಧಿಸಿ ಭಾರತದ ಭೂತ- ಭವಿಷ್ಯತ್ ಹಾಗೂ ವರ್ತಮಾನದ ಸಾಧನೆ, ಕನಸುಗಳನ್ನು ಸಹ ತೋರಿಸಲಾಗುತ್ತದೆ. ತಂತ್ರಜ್ಞಾನ ಮತ್ತು ಡಿಜಿಟಲೈಸೇಷನ್ ನಲ್ಲಿ ಭಾರತದ ಸಾಧನೆಯನ್ನು ಜಗತ್ತಿನೆದುರು ತೆರೆದಿಡಲಾಗುತ್ತದೆ. ವಿಶ್ವದ ವಿವಿಧ ಅಥ್ಲೀಟ್ ಗಳು, ಗಣ್ಯರು, ಕ್ರೀಡಾ ಉತ್ಸಾಹಿಗಳು ಈ ಇಂಡಿಯಾ ಹೌಸ್ ಗೆ ಭೇಟಿ ನೀಡುವ ನಿರೀಕ್ಷೆ ಇದೆ. ಇನ್ನು ಭಾರತದ ನೀತಿಯನ್ನು ವ್ಯಾಖ್ಯಾನಿಸುವ ಏಕತೆ, ವೈವಿಧ್ಯತೆ ಮತ್ತು ಶ್ರೇಷ್ಠತೆಯನ್ನು ಸಾರುವುದಕ್ಕೂ ಇದು ಸಹಕಾರಿ ಆಗುತ್ತದೆ. ಇಂಡಿಯಾ ಹೌಸ್ ಎಂಬುದು ಯಾಕೆ ಮಹತ್ವದ್ದು ಎಂಬ ಬಗ್ಗೆ ಮಾತನಾಡಿರುವ ಐಒಎ ಸದಸ್ಯೆ , ರಿಲಯನ್ಸ್ ಫೌಂಡೇಷನ್ ಸ್ಥಾಪಕಿ ಮತ್ತು ಅಧ್ಯಕ್ಷೆ ನೀತಾ ಅಂಬಾನಿ ಅವರು, ''ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಇದೇ ಮೊದಲ ಬಾರಿಗೆ ಇಂಡಿಯಾ ಹೌಸ್ ಅನ್ನು ಘೋಷಿಸಲು ನಾನು ಅಪಾರ ಸಂತೋಷ ಪಡುತ್ತೇನೆ ಮತ್ತು ಇದೇ ಉತ್ಸಾಹದಿಂದ ರೋಮಾಂಚನಗೊಂಡಿದ್ದೇನೆ. ಕಳೆದ ವರ್ಷ ಭಾರತದಲ್ಲಿ ನಡೆದ ಐಒಸಿ ಅಧಿವೇಶನವು 40 ವರ್ಷಗಳಲ್ಲಿ ಮೊದಲನೆಯದು, ನಮ್ಮ ಕ್ರೀಡಾಪಟುಗಳನ್ನು ಗೌರವಿಸುವ, ವಿಜಯ ಆಚರಿಸುವ, ನಮ್ಮ ಸಾಧನೆಗಳನ್ನು ಹಂಚಿಕೊಳ್ಳುವ ಮತ್ತು ಜಗತ್ತನ್ನು ಭಾರತಕ್ಕೆ ಸ್ವಾಗತಿಸುವ ಜಾಗವಾದ ಇಂಡಿಯಾ ಹೌಸ್ ಅನ್ನು ಪ್ರಾರಂಭಿಸುವುದರೊಂದಿಗೆ ಈ ಪ್ರಯತ್ನಕ್ಕೆ ವೇಗ ನೀಡಲು ನಾವು ಸಂತೋಷಪಡುತ್ತೇವೆ,'' ಎಂದಿದ್ದಾರೆ.

## ಈರುಳ್ಳಿ ವಡೆ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ದೋಸೆ ಅಕ್ಕಿ- 2 ಕಪ್, ಕಾಯಿತುರಿ- 1 ಕಪ್, ಈರುಳ್ಳಿ-4, ಹಸಿಮೆಣಸಿನಕಾಯಿ-4, ಶುಂಠಿ-ಸ್ವಲ್ಪ, ಕರಿಬೇವುಸೊಪ್ಪು- ಸ್ವಲ್ಪ

### ಮಾಡುವ ವಿಧಾನ

3 ಈರುಳ್ಳಿ, 3 ಹಸಿಮೆಣಸಿನಕಾಯಿ, ಶುಂಠಿ, ಕರಿಬೇವುಸೊಪ್ಪನ್ನು ಸಣ್ಣಗೆ ಹೆಚ್ಚಿಕೊಳ್ಳಿ, ನಂತರ 2 ಗಂಟೆ ನೆನೆಸಿಟ್ಟ ದೋಸೆ ಅಕ್ಕಿ, 1 ಕಪ್ ಕಾಯಿತುರಿ, 1 ಈರುಳ್ಳಿ, 1 ಮೆಣಸಿನಕಾಯಿ ಸೇರಿಸಿ ರುಬ್ಬಿಕೊಳ್ಳಿ. ಜೊತೆಗೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಬೇಕಾದರೆ ನೀರು ಸೇರಿಸಿ ರುಬ್ಬಿಕೊಳ್ಳಿ. ಆದರೆ ಹಿಟ್ಟು ಗಟ್ಟಿಯಾಗಿರಬೇಕು. ನಂತರ ಈ ಹಿಟ್ಟಿಗೆ ಹೆಚ್ಚಿಟ್ಟ ಈರುಳ್ಳಿ, ಶುಂಠಿ, ಹಸಿಮೆಣಸಿನಕಾಯಿ, ಕರಿಬೇವುಸೊಪ್ಪನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ನಂತರ ಒಂದು ಬಾಣಲೆಯಲ್ಲಿ ಎಣ್ಣೆ ಹಾಕಿ ಸ್ಟೌವ್ ಮೇಲಿಡಿ. ಹಿಟ್ಟನ್ನು ಉಂಡೆ ಮಾಡಿ ವಡೆ ತರಹ ಕೈಯಲ್ಲೇ ತಟ್ಟಿ ಕಾದ ಎಣ್ಣೆಗೆ ಬಿಡಿ. ಕಂದು ಬಣ್ಣ ಬಂದಾಗ ಸರ್ವಿಂಗ್ ಪ್ಲೇಟ್ ಗೆ ಹಾಕಿಟ್ಟರೆ ಸವಿಯಲು ಈರುಳ್ಳಿ ವಡಾ ರೆಡಿ.

## ನಟಿಯರ ಬಗ್ಗೆ ಶಾಕಿಂಗ್ ಹೇಳಿಕೆಕೊಟ್ಟ

90ರ ದಶಕದಲ್ಲಿ ಖ್ಯಾತಿ ಗಳಿಸಿದ ನಟಿಯರಲ್ಲಿ ರಂಬಾ ಕೂಡ ಒಬ್ಬರು. ರಂಬಾ 90 ರ ದಶಕದ ಮಕ್ಕಳ ನೆಚ್ಚಿನ ನಟಿಯರಲ್ಲಿ ಒಬ್ಬರು ಮತ್ತು ಕನ್ನಡ, ತಮಿಳು, ತೆಲುಗು, ಮಲಯಾಳಂ, ಬೆಂಗಾಲಿ, ಹಿಂದಿ ಮತ್ತು ಭೋಜ್ಪುರಿ ಸೇರಿದಂತೆ ಹಲವು ಭಾಷೆಗಳಲ್ಲಿ ನಟಿಸಿದ್ದಾರೆ.

ರಂಬಾ 100ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ.

ಅವರು 1992 ರಲ್ಲಿ ಮಲಯಾಳಂ ಚಲನಚಿತ್ರ ?ಸರ್ಗಮ್? ಮೂಲಕ ಸಿನಿರಂಗಕ್ಕೆ ಪಾದಾರ್ಪಣೆ ಮಾಡಿದರು. ಆಗ ಅವರಿಗೆ ಕೇವಲ 15 ವರ್ಷ. ಮೊದಲ ಚಿತ್ರ ಹಿಟ್ ಆಗುತ್ತಿದ್ದಂತೆ ರಂಬಾಗೆ ಸಿನಿಮಾ ಅವಕಾಶಗಳು ಬರತೊಡಗಿದವು. ಅದೇ ವರ್ಷದಲ್ಲಿ ಅವರು ತೆಲುಗು ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು.

1993ರಲ್ಲಿ, ನವರಸ ನಾಯಕ ಜಗ್ಗೇಶ್ ನಟನೆಯ ಸರ್ವರ್ ಸೋಮಣ್ಣ ಸಿನಿಮಾದ ಮೂಲಕ ರಂಬಾ ಸ್ಯಾಂಡಲ್ವುಡ್ಗೆ ಕಾಲಿಟ್ಟರು. ಕೆಂಪಯ್ಯ ಐಪಿಎಸ್, ಓ ಪ್ರೇಮವೇ, ಪಾಂಚಾಲಿ, ಬಾವ ಬಾಮೈದ, ಸಾಹುಕಾರ, ಪಾಂಡು ರಂಗ ವಿಠಲ, ಗಂಡುಗಲಿ ಕುಮಾರ ರಾಮ, ಅನಾಥರು ಸೇರಿದಂತೆ ಹಲವು ಕನ್ನಡ ಸಿನಿಮಾದಲ್ಲಿ ನಟಿಸಿದ್ದಾರೆ.

ಇನ್ನು ಇತ್ತೀಚಿಗೆ ಸಂದರ್ಶನವೊಂದರಲ್ಲಿ ರಂಬಾ ಕುತೂಹಲಕಾರಿ ವಿಷಯಗಳನ್ನು ಹೊರ ಹಾಕಿದ್ದಾರೆ.. ಆಗ ಚಿತ್ರರಂಗದಲ್ಲಿ ನಿಮ್ಮ ಗೆಳತಿ ಯಾರು ಎಂದು ಕೇಳಿದಕ್ಕೆ, ಉತ್ತರಿಸಿದ ನಟಿ, ಚಿತ್ರರಂಗದಲ್ಲಿ ನನ್ನ ನೆಚ್ಚಿನ ನಟಿ ಅಂದ್ರೆ, ಸೌಂದರ್ಯ. ನನಗೆ ಅವರಂದ್ರೆ ತುಂಬಾ ಇಷ್ಟ. ಚಿತ್ರರಂಗದಲ್ಲಿ ತೀರಾ ಆತ್ಮೀಯ ಗೆಳೆತನ ಎಂಬುದೇನೂ ಇರಲ್ಲಲ್ಲ ಎಂದಿದ್ದಾರೆ..

ಈಗಿನ ಪೀಳಿಗೆಯಲ್ಲಿ ತಮ್ಮ ನೆಚ್ಚಿನ ನಟಿ ಯಾರು ಎಂಬ ಪ್ರಶ್ನೆಗೆ ಉತ್ತರಿಸಿದ ರಂಬಾ, ನಯನತಾರಾ, ತ್ರಿಶಾ, ಇಲಿಯಾನಾ, ಕಾಜಲ್ ಹೀಗೆ ಸಾಕಷ್ಟು ನಟಿಯರಿದ್ದರೂ ನನಗೆ ತ್ರಿಷಾ ಎಂದರೆ ಹೆಚ್ಚು ಇಷ್ಟ. ನಾನು ಅವರನ್ನು ಒಂದೆರಡು ಬಾರಿ ಮಾತ್ರ ಭೇಟಿ ಮಾಡಿದ್ದೇನೆ ಎಂದರು. ಅಲ್ಲದೆ, ಭಾವುಕರಾಗಿ ಮಾತನಾಡಿದ ಅವರು, ಬೇರೆ ನಟಿಯರು ಹಾಗಲ್ಲ.. ನನ್ನನ್ನು ಕಂಡರೂ ನಿರ್ಲಕ್ಷಿಸುತ್ತಾರೆ ಎಂದು ಶಾಕಿಂಗ್ ವಿಚಾರ ಬಿಚ್ಚಿಟ್ಟರು.

ಸಧ್ಯ ರಂಭಾ ಕೆನಡಾದ ಉದ್ಯಮಿ ಇಂದ್ರಕುಮಾರ್ ಪದ್ಮನಾಥನ್ ಅವರನ್ನು 2010 ರಲ್ಲಿ ವಿವಾಹವಾದರು. ಸಧ್ಯ ದಂಪತಿಗೆ 2 ಹೆಣ್ಣು ಮಕ್ಕಳು ಮತ್ತು ಒಬ್ಬ ಮಗನಿದ್ದಾರೆ. ಕಿರುತೆರೆ ಹಾಗೂ ಬೆಳ್ಳಿತೆರೆಯಲ್ಲಿ ಹಲವು ಕಾರ್ಯಕ್ರಮಗಳಲ್ಲಿ ತೀರ್ಪುಗಾರರಾಗಿ ರಂಭಾ ಭಾಗವಹಿಸಿರುವುದು ಗಮನಾರ್ಹ.



## ಗ್ಯಾಸ್ಟ್ರಿಕ್ ಸಮಸ್ಯೆಗೆ ಸರಳ ಪರಿಹಾರ



### ಹೆಲ್ತ್ ಟಿಪ್ಸ್

ಹೊಟ್ಟೆಯಲ್ಲಿ ಉರಿ, ಹೊಟ್ಟೆ ಬಿಗಿತ, ಹೊಟ್ಟೆ ನುಲಿಯುವುದು, ಎದೆ ಉರಿ ಇವೆಲ್ಲವೂ ಗ್ಯಾಸ್ಟ್ರಿಕ್ ನ ಲಕ್ಷಣಗಳು. ಕೆಲವೊಮ್ಮೆ ನಾವು ಸೇವಿಸಿದ ಆಹಾರದಿಂದಲೂ ಸಹ ಈ ರೀತಿಯ ತೊಂದರೆ ಕಾಣಿಸಿಕೊಳ್ಳುತ್ತದೆ. ಈ ರೀತಿಯ ಸಮಸ್ಯೆ ಪ್ರತಿನಿತ್ಯವೂ ಕಾಡುತ್ತಿದ್ದರೆ, ವೈದ್ಯರನ್ನು ಕಾಣುವುದು ಉತ್ತಮ.

ಆದರೆ ಯಾವಾಗಲಾದರೂ ಒಮ್ಮೆ ಕಂಡು ಬಂದಲ್ಲಿ ಮನೆಯಲ್ಲೇ ಸರಳವಾದ ಉಪಚಾರಗಳ ಮೂಲಕ ಈ ಸಮಸ್ಯೆಯಿಂದ ದೂರವಿರಬಹುದು.

ಊಟಕ್ಕೆ ಮುಂಚೆ ಕನಿಷ್ಟ ಒಂದು ಗ್ಲಾಸ್ ನೀರನ್ನು ಕುಡಿಯುವ ಅಭ್ಯಾಸ ಮಾಡಿಕೊಳ್ಳಿ. ನೀರು ಜೀರ್ಣಾಂಗ ವ್ಯವಸ್ಥೆಯಲ್ಲಿ ಉತ್ತಮವಾಗಿ ಕೆಲಸ ಮಾಡುತ್ತದೆ.

ಚೂಯಿಂಗ್ ಗಮ್ ಜಗಿಯುತ್ತಾ ಮಾತನಾಡುವ ಅಭ್ಯಾಸವಿದ್ದರೆ ಕೂಡಲೇ ನಿಲ್ಲಿಸಿ. ಏಕೆಂದರೆ, ಮಾತನಾಡುವಾಗ ಗಾಳಿಯೂ ಒಳ ಸೇರಿ, ಹೊಟ್ಟೆ ಉಬ್ಬರ ಕಾಣಿಸಿಕೊಂಡು ಗ್ಯಾಸ್ ಉತ್ಪತ್ತಿಯಾಗುತ್ತದೆ. ಹೊಟ್ಟೆಯಲ್ಲಿ ಸೇರಿರುವ ಗ್ಯಾಸನ್ನು ಶಮನ ಮಾಡಲು ಹರ್ಬಲ್ ಪಾನೀಯಗಳು ಬಹಳಾನೇ ಉತ್ತಮ. ಇದು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ.

ಹೊಟ್ಟೆಗೆ ಗ್ಯಾಸ್ ಹೋಗದಂತೆ ಮಾಡಲು, ನಾವು ಸೇವಿಸುವ ಆಹಾರದಲ್ಲಿ ಗ್ಯಾಸ್ ಇರುವ ಆಹಾರಗಳನ್ನು ನಿಲ್ಲಿಸಿ. ಉದಾ: ಅವರೆಕಾಳು, ಬೇಳೆಗಳು, ಎಲೆಕೋಸು, ಮೂಲಂಗಿ ಇತ್ಯಾದಿ. ಪೆಪ್ಸಿ, ಕೋಕಾಕೋಲ, ಸ್ಪ್ರೈಟ್ ಮುಂತಾದ ಸೋಡಾ ಇರುವಂತಹ ಪಾನೀಯಗಳನ್ನು ನಿಲ್ಲಿಸಿ. ಇದು ಹೊಟ್ಟೆಯಲ್ಲಿ ಗ್ಯಾಸ್ ತುಂಬಿ ಸಮಸ್ಯೆಯನ್ನು ಇನ್ನೂ ಹೆಚ್ಚಿಸುತ್ತವೆ.

ರಾತ್ರಿ ಊಟವಾದ ಬಳಿಕ ಒಂದು ಲೋಟ ಉಗುರು ಬೆಚ್ಚಗಿನ ನೀರನ್ನು ಸೇವಿಸಿದರೆ ಜೀರ್ಣಕ್ರಿಯೆ ಸರಿಯಾಗಿ ಆಗಿ ಗ್ಯಾಸ್ಟ್ರಿಕ್ ಸಮಸ್ಯೆ ಬರುವುದಿಲ್ಲ.

## ರಾಷ್ಟ್ರೀಯ ಮಕ್ಕಳ ಪಾರ್ಶ್ವವಾಯುವಿನ ಶೃಂಗ




ಅತ್ಯಂತ ನಿರೀಕ್ಷೆಯ ಎರಡು ದಿನಗಳ 2ನೇ ರಾಷ್ಟ್ರೀಯ ಪೀಡಿಯಾಟ್ರಿಕ್ ಸ್ಟ್ರೋಕ್ ಕಾನ್ ಕ್ಲೇವ್ 2024 (ಮಕ್ಕಳ ಪಾರ್ಶ್ವವಾಯು ಶೃಂಗ 2024) ಅನ್ನು ಇಂಡಿಯನ್ ಸ್ಟ್ರೋಕ್ ಅಸೋಸಿಯೇಷನ್ (ಐ.ಎಸ್.ಎ) ಅಧ್ಯಕ್ಷ ಡಾ.ನಿರ್ಮಲ್ ಸೂರ್ಯ ಮತ್ತು ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ ಮಕ್ಕಳ ಪಾರ್ಶ್ವವಾಯು ರೋಗತಡೆ, ಆರೈಕೆ ಮತ್ತು ಚಿಕಿತ್ಸೆಯ ಕ್ಷೇತ್ರಗಳ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಪರಿಣಿತರು ಒಂದೇ ಸೂರಿನಡಿ ಸೇರುವ ಅಪೂರ್ವ ಸಂದರ್ಭವಾಗಿದೆ. ಉದ್ಯಾನ ನಗರಿ ಬೆಂಗಳೂರು ತನ್ನ ಪ್ರತಿಷ್ಠೆಗೆ ತಕ್ಕಂತೆ ಆರೋಗ್ಯಸೇವೆಯಲ್ಲಿ ತನ್ನ ಪ್ರತಿಷ್ಠೆಯನ್ನು ಉಳಿಸಿಕೊಂಡಿದ್ದು ಈ ಬೃಹತ್ ಸಮ್ಮೇಳನದ ಮೂಲಕ ತನ್ನ ಹಿರಿಮೆಗೆ ಮತ್ತೊಂದು ಗರಿ ಸೇರಿಸಿಕೊಂಡಿದೆ.

ಜಾಗತಿಕವಾಗಿ ಮಕ್ಕಳ ಪಾರ್ಶ್ವವಾಯು ಮಕ್ಕಳಲ್ಲಿ ಮರಣಕ್ಕೆ ಆರನೇ ಮುಂಚೂಣಿಯ ಕಾರಣವಾಗಿದೆ. ಸುಮಾರು ಐವತ್ತರಿಂದ ಅರವತ್ತು ಶೇಕಡಾ ಮಕ್ಕಳ ಪಾರ್ಶ್ವವಾಯು ಪ್ರಕರಣಗಳನ್ನು ಚಿಕಿತ್ಸೆ ನೀಡಲು ಮತ್ತು ತಡೆಯಲು ಸಾಧ್ಯ. ಪ್ರತಿ ನಿಮಿಷ ಭಾರತದಲ್ಲಿ ಸುಮಾರು 52 ಶಿಶುಗಳು ಜನಿಸುತ್ತಿದ್ದು ಮಕ್ಕಳ ಪಾರ್ಶ್ವವಾಯುವಿನ ಸಾಮಾಜಿಕ-ಆರ್ಥಿಕ ಪರಿಣಾಮಗಳು ಅಪಾರವಾಗಿವೆ. ಭಾರತದಲ್ಲಿ ಪ್ರಕಟವಾದ ಕೆಲ ಅಧ್ಯಯನಗಳ ಪ್ರಕಾರ ಮಕ್ಕಳ ಪಾರ್ಶ್ವವಾಯು ಮಕ್ಕಳ ಆಸ್ಪತ್ರೆ ಸೇರ್ಪಡೆಯ ಶೇ.1ಕ್ಕಿಂತ ಕಡಿಮೆ ಇದೆ ಮತ್ತು ಎಲ್ಲ ಯುವ ಪಾರ್ಶ್ವವಾಯು ಪ್ರಕರಣಗಳ ಶೇಕಡಾ ಐದರಿಂದ ಹತ್ತರಷ್ಟು(40 ವರ್ಷಗಳ ವಯಸ್ಸಿಗಿಂತ ಕಿರಿಯರು) ಹೊಂದಿವೆ. ಈ ಸಂಖ್ಯೆಗಳು ಬರೀ ಅಂದಾಜು ಆಗಿದೆ ಮತ್ತು ವಾಸ್ತವ ಸಂಖ್ಯೆ ಇನ್ನೂ ಹೆಚ್ಚಾಗಿರುವ ಸಾಧ್ಯತೆ ಇದ್ದು ಸಾಕಷ್ಟು ಪ್ರಕರಣಗಳು ವರದಿಯಾಗುವುದಿಲ್ಲ ಮತ್ತು ಪತ್ತೆಯಾಗುವುದಿಲ್ಲ. ವಯಸ್ಕರಲ್ಲಿ ಹೆಚ್ಚು ರಕ್ತದೊತ್ತಡ, ಕರೊನರಿ ಆರ್ಟರಿ ರೋಗ, ಧೂಮಪಾನ, ಬೊಜ್ಜು, ಹೆಚ್ಚಿನ ಕೊಲೆಸ್ಟರಾಲ್ ಮತ್ತು ದುರ್ಬಲ ಜೀವನಶೈಲಿ ಇತ್ಯಾದಿ ರಿಸ್ಕ್ ಅಂಶಗಳಿರುತ್ತವೆ ಆದರೆ ಮಕ್ಕಳ ಪಾರ್ಶ್ವವಾಯುವಿಗೆ ಕಾರಣಗಳನ್ನು ಗುರುತಿಸುವುದು ಬಹಳ ಸಂಕೀರ್ಣ ಮತ್ತು ಹಲವು ಅಂಶಗಳನ್ನು ಹೊಂದಿದೆ.

ಸಮ್ಮೇಳನದಲ್ಲಿ ಉಪನ್ಯಾಸ ನೀಡುವ ತಜ್ಞರಲ್ಲಿ ಡಾ.ನಿರ್ಮಲ್ ಸೂರ್ಯ (ಅಧ್ಯಕ್ಷರು- ಐ.ಎಸ್.ಎ), ಡಾ.ವಿಕ್ರಮ್ ಹುಡೇದ್(ಸಂಘಟನಾ ಅಧ್ಯಕ್ಷರು), ಡಾ.ಅರವಿಂದ್ ಶರ್ಮಾ (ಕಾರ್ಯದರ್ಶಿ-ಐ.ಎಸ್.ಎ), ಡಾ.ಮಿನಲ್ ಕೆಕಟ್ ಪುರೆ(ಸಂಘಟನಾ ಕಾರ್ಯದರ್ಶಿ), ಡಾ.ವಿನಯನ್ ಕೆ.ಪಿ., ಡಾ.ಶೆಫಾಲಿ ಗುಲಾಟಿ ಮತ್ತು ಡಾ.ಪ್ರತಿಭಾ ಸಿಂಘಿ (ಅಧ್ಯಕ್ಷರು- ಇಂಟರ್ನ್ಯಾಷನಲ್ ಚೈಲ್ಡ್ ನ್ಯೂರಾಲಜಿ ಅಸೋಸಿಯೇಷನ್), ಡಾ.ಹೆಲ್ತರ್ ಫುಲ್ಲರ್ ಟನ್ (ಅಧ್ಯಕ್ಷರು- ಇಂಟರ್ನ್ಯಾಷನಲ್ ಪೀಡಿಯಾಟ್ರಿಕ್ ಸ್ಟ್ರೋಕ್ ಆರ್ಗನೈಸೇಷನ್) ಮತ್ತು ಡಾ.ಮಜಾ ಸ್ಟೀನ್ಲಿನ್ (ಉಪಾಧ್ಯಕ್ಷರು- ಇಂಟರ್ನ್ಯಾಷನಲ್ ಪೀಡಿಯಾಟ್ರಿಕ್ ಸ್ಟ್ರೋಕ್ ಅಸೋಸಿಯೇಷನ್) ಅತ್ಯಂತ ಪ್ರಭಾವಿ ಅಂತಾರಾಷ್ಟ್ರೀಯ ತಜ್ಞರು ಇದ್ದಾರೆ. 2ನೇ ನ್ಯಾಷನಲ್ ಪೀಡಿಯಾಟ್ರಿಕ್ ಕಾನ್ ಕ್ಲೇವ್ ಆರೋಗ್ಯಸೇವಾ ವೃತ್ತಿಪರರಿಗೆ ಮಕ್ಕಳ ಪಾರ್ಶ್ವವಾಯುವಿನ ರೋಗತಡೆ, ಆರೈಕೆ ಮತ್ತು ಚಿಕಿತ್ಸೆ ಕುರಿತು ಅವರ ಜ್ಞಾನ ಹಂಚಿಕೊಳ್ಳಲು, ಅರ್ಥಪೂರ್ಣ ಚರ್ಚೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸುತ್ತದೆ. ಈ ಸಮ್ಮೇಳನವು ದೇಶಾದ್ಯಂತ ಪೂರೈಸುವ ಮಕ್ಕಳ ಆರೈಕೆಯ ಗುಣಮಟ್ಟ ಸುಧಾರಿಸುವ ಮತ್ತು ಈ ಕ್ಷೇತ್ರದ ಪ್ರಮುಖ ಸಮಸ್ಯೆಗಳನ್ನು ನಿವಾರಿಸುವ ಗುರಿ ಹೊಂದಿದೆ.

## ಡಾರ್ಕ್ ಸರ್ಕಲ್ ಹೋಗಲಾಡಿಸಲು ಸರಳ ಮನೆಮದ್ದು

### ಬ್ಯೂಟಿ ಟಿಪ್ಸ್



ಪುರುಷರು ಮತ್ತು ಮಹಿಳೆಯರು ಇಬ್ಬರನ್ನೂ ಕಾಡುವ ಸಮಸ್ಯೆಗಳಲ್ಲೊಂದು ಡಾರ್ಕ್ ಸರ್ಕಲ್. ಕಣ್ಣುಗಳ ಕೆಳಗೆ ಮತ್ತು ಸುತ್ತಲೂ ಕಪ್ಪು ವೃತ್ತಗಳಾಗಿ ಮುಖದ ಸೌಂದರ್ಯವೇ ಹಾಳಾಗುತ್ತದೆ. ಒತ್ತಡ, ನಿದ್ರೆಯ ಕೊರತೆ, ಹಾರ್ಮೋನುಗಳ ಬದಲಾವಣೆ, ಜೀವನಶೈಲಿಯ ಬದಲಾವಣೆ, ಅನುವಂಶಿಕತೆ ಇಂತಹ ಅನೇಕ ಕಾರಣಗಳಿಂದ ಡಾರ್ಕ್ ಸರ್ಕಲ್ಗಳಾಗುತ್ತವೆ. ಸಮಯಕ್ಕೆ ಸರಿಯಾಗಿ ಇವುಗಳಿಗೆ ಚಿಕಿತ್ಸೆ ಪಡೆಯದಿದ್ದರೆ ಮುಖದ ಸೌಂದರ್ಯವೇ ಕೆಡುತ್ತದೆ. ರಾಸಾಯನಿಕಗಳುಳ್ಳ ಔಷಧಿಗಳ ಮೂಲಕ ಇದನ್ನು ತ್ವರಿತವಾಗಿ ಗುಣಪಡಿಸಬಹುದು. ಆದರೆ ಮುಖದ ಚರ್ಮವು ತುಂಬಾ ಸೂಕ್ಷ್ಮವಾಗಿರುವುದರಿಂದ ಸೈಡ್ ಎಫೆಕ್ಟ್ಗಳಿಲ್ಲದ ಮನೆಮದ್ದುಗಳನ್ನು ಮಾಡುವುದು ಸೂಕ್ತ. ಇವು ನಿಮ್ಮ ಮುಖ ಮತ್ತು ಕಣ್ಣಿನ ಸುತ್ತಲಿನ ಕಪ್ಪು ವಲಯಗಳನ್ನು ನಿವಾರಿಸುತ್ತದೆ.

**ಟೊಮೆಟೊ:** ಡಾರ್ಕ್ ಸರ್ಕಲ್ ಹೋಗಲಾಡಿಸುವಲ್ಲಿ ಟೊಮೆಟೊ ರಾಮಬಾಣದಂತೆ ಕೆಲಸ ಮಾಡುತ್ತದೆ. ಇದು ಚರ್ಮವನ್ನು ಮೃದುವಾಗಿಸುತ್ತದೆ. ಒಂದು ಚಮಚ ಟೊಮೆಟೊ ರಸಕ್ಕೆ ಒಂದು ಚಮಚ ನಿಂಬೆ ರಸವನ್ನು ಬೆರೆಸಿ ಕಣ್ಣುಗಳ ಬಳಿ ಇರುವ ಕಪ್ಪು ಕಲೆಗಳ ಮೇಲೆ ಹಚ್ಚಿ 10 ನಿಮಿಷ ಬಿಟ್ಟು ನಂತರ ನೀರಿನಿಂದ ತೊಳೆಯಿರಿ. ಇದನ್ನು ದಿನಕ್ಕೆ ಎರಡು ಬಾರಿ ಮಾಡಿ. ಇದಲ್ಲದೆ ನೀವು ಪ್ರತಿದಿನ ಟೊಮೆಟೊ ಮತ್ತು ನಿಂಬೆ ರಸವನ್ನು ಬೆರೆಸಿ ಕುಡಿಯಬಹುದು. ಇದು ಕೂಡ ಕಪ್ಪು ವೃತ್ತಗಳನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಕಾರ್ಯಕ್ಷೇತ್ರದಲ್ಲಿ ಬೆಳವಣಿಗೆ, ಶ್ವಾಸಕೋಶ ಕಾಯಿಲೆಯವರು ಎಚ್ಚರ.

**ವೃಷಭ:** ವಾಹನಗಳ ಮಾರಾಟಸ್ಥರಿಗೆ ಶುಭ, ವಿದ್ಯಾರ್ಥಿಗಳಿಗೆ ಸಂಪೂರ್ಣ ಯಶಸ್ಸು, ವ್ಯವಹಾರದಲ್ಲಿ ಮಂದಗತಿ.

**ಮಿಥುನ:** ಆಹಾರ ಪದಾರ್ಥ ತಯಾರಿಕರಿಗೆ ಬೇಡಿಕೆ, ಆಪ್ತರ ಭೇಟಿಗಾಗಿ ದೂರ ಪ್ರಯಾಣ, ಸ್ತ್ರೀಯರ ಆರೋಗ್ಯದಲ್ಲಿ ಚೇತರಿಕೆ.

**ಕರ್ಕಾಟಕ:** ಸರ್ಕಾರಿ ಕಾರ್ಯದಲ್ಲಿ ಅಭಿವೃದ್ಧಿ, ವಾಕ್ಚಾತುರ್ಯದಿಂದ ಮುನ್ನಡೆ, ಒಡಹುಟ್ಟಿದವರಿಂದ ಬೆಂಬಲ.

**ಸಿಂಹ:** ಗಣ್ಯ ವ್ಯಕ್ತಿಗಳ ಭೇಟಿ, ವಿದೇಶ ಪ್ರಯಾಣದ ಯೋಗ, ಗಣಿತಜ್ಞರಿಗೆ ಬೇಡಿಕೆ.

**ಕನ್ಯಾ:** ಹಣ್ಣು ತರಕಾರಿ ವ್ಯಾಪಾರಿಗಳಿಗೆ ಆದಾಯ, ಭೂ ವ್ಯವಹಾರದಲ್ಲಿ ಲಾಭ, ನಿಷ್ಠೂರಕ್ಕೆ ಗುರಿಯಾಗುವಿರಿ.

**ತುಲಾ:** ಹಿತ ಶತ್ರುಗಳಿಂದ ಕಾಟ, ಬರಹಗಾರರಿಗೆ ಗೌರವ ಪ್ರಾಪ್ತಿ, ಕುಟುಂಬದಲ್ಲಿ ಅನ್ಯೋನ್ಯತೆ ಇರುತ್ತದೆ.

**ವೃಶ್ಚಿಕ:** ಉನ್ನತ ಹುದ್ದೆಯಲ್ಲಿರುವವರಿಗೆ ಸಂತಸ, ಹಣಕಾಸಿನ ವಿಚಾರದಲ್ಲಿ ಎಚ್ಚರದಿಂದಿರಿ, ಉದಯೋನ್ಮುಖ ಕಲಾವಿದರಿಗೆ ಶುಭ.

**ಧನಸ್ಸು:** ಬಂಡವಾಳ ಹೂಡಿಕೆ ಬೇಡ, ಕೃಷಿಗೆ ಮಾರ್ಗದರ್ಶನ ಲಭ್ಯ, ಅನುವಂಶಿಕ ವ್ಯವಹಾರಗಳಲ್ಲಿ ಲಾಭ.

**ಮಕರ:** ಚಿನ್ನದ ಕೆಲಸ ಮಾಡುವವರಿಗೆ ಬೇಡಿಕೆ, ಬಂಧುಗಳಿಂದ ಅಸಹಕಾರ, ಮೇಕಪ್ ವಸ್ತು ತಯಾರಿಕರಿಗೆ ಬೇಡಿಕೆ.

**ಕುಂಭ:** ಧಾರ್ಮಿಕ ಕಾರ್ಯಗಳಲ್ಲಿ ಆಸಕ್ತಿ, ವಿದ್ಯಾರ್ಥಿಗಳಿಗೆ ಉತ್ತಮ ಫಲಿತಾಂಶ, ಯಂತ್ರ ರಿಪೇರಿಯವರಿಗೆ ಶುಭ.

**ಮೀನ:** ರಕ್ಷಣಾ ವಿಭಾಗದ ಕೆಲಸಗಾರರಿಗೆ ಶುಭ, ಗುರಿಯನ್ನು ತಲುಪುವಲ್ಲಿ ಶ್ರಮ ವಹಿಸಿ, ಸಂಗಾತಿಯ ಆರೋಗ್ಯದಲ್ಲಿ ವ್ಯತ್ಯಾಸ.

## ಅಂತರರಾಷ್ಟ್ರೀಯ ಸಂಸದೀಯ ದಿನ




ಸಂಸದೀಯ ಆಡಳಿತ ವ್ಯವಸ್ಥೆಗಳನ್ನು ಗೌರವಿಸಲು ಜೂನ್ 30 ರಂದು ಅಂತರರಾಷ್ಟ್ರೀಯ ಸಂಸದೀಯ ದಿನವನ್ನು ಆಚರಿಸಲಾಗುತ್ತದೆ. 2018 ರಲ್ಲಿ ಯುನೈಟೆಡ್ ನೇಷನ್ಸ್ ಜನರಲ್ ಅಸೆಂಬ್ಲಿ ನಿರ್ಣಯದಿಂದ ಮೊದಲ ಬಾರಿಗೆ ಆಚರಿಸಲಾಗುತ್ತದೆ, ಈ ದಿನವು ಸಂಸದೀಯ ಪ್ರಜಾಪ್ರಭುತ್ವದ ವಿಶಿಷ್ಟ ಮತ್ತು ನಿರಂತರ ವ್ಯವಸ್ಥೆಯನ್ನು ರಾಜಕೀಯ ಪ್ರಾತಿನಿಧ್ಯದ ಮಾನದಂಡವೆಂದು ಗುರುತಿಸುತ್ತದೆ. ಪ್ರಗತಿಯ ಸ್ಟಾಕ್ ತೆಗೆದುಕೊಳ್ಳಲು, ಸವಾಲುಗಳನ್ನು ಗುರುತಿಸಲು ಮತ್ತು ಅವುಗಳನ್ನು ಪರಿಹರಿಸಲು ಮಾರ್ಗಗಳನ್ನು ರೂಪಿಸಲು ಸಂಸದೀಯ ವ್ಯವಸ್ಥೆಯು ಸ್ವಯಂ-ಮೌಲ್ಯಮಾಪನವನ್ನು ಹೇಗೆ ನಡೆಸಬಹುದು ಎಂಬುದನ್ನು ಸಹ ಈ ದಿನ ಗುರುತಿಸುತ್ತದೆ.

ಸಂಸದೀಯವಾದದ ಅಂತಾರಾಷ್ಟ್ರೀಯ ದಿನವು ಸಂಸದೀಯ ಆಡಳಿತ ವ್ಯವಸ್ಥೆಯ ವಾರ್ಷಿಕ ಆಚರಣೆಯಾಗಿದೆ. ಈ ದಿನವು ಸಂಸದೀಯ ವ್ಯವಸ್ಥೆಯ ಸ್ಥಾಪಕ ಮೌಲ್ಯಗಳನ್ನು ಮತ್ತು ಶತಕೋಟಿ ಜನರಿಗೆ ರಾಜಕೀಯ ಪ್ರಾತಿನಿಧ್ಯದ ಭರವಸೆಯನ್ನು ಗೌರವಿಸುತ್ತದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಅಧಿಕಾರದಲ್ಲಿರುವ ಜನರ ಹೆಚ್ಚಿನ ಹೊಣೆಗಾರಿಕೆ ಮತ್ತು ಪಾರದರ್ಶಕತೆಯನ್ನು ಖಾತ್ರಿಪಡಿಸುವಲ್ಲಿ ಸಂಸತ್ತುಗಳ ಪಾತ್ರವನ್ನು ಗುರುತಿಸುತ್ತದೆ. ಇಂಟರ್ನ್ಯಾಶನಲ್ ಡೇ ಆಫ್ ಪಾರ್ಲಿಮೆಂಟರಿಸಂ ಇಂಟರ್ ಪಾರ್ಲಿಮೆಂಟರಿ ಯೂನಿಯನ್ ವಾರ್ಷಿಕೋತ್ಸವವನ್ನು ಸೂಚಿಸುತ್ತದೆ. ಸಂಸದೀಯ ಆಡಳಿತ ವ್ಯವಸ್ಥೆಗಳ ಔಪಚಾರಿಕ ಪ್ರಾತಿನಿಧ್ಯವಾಗಿ 1889 ರಲ್ಲಿ ಸ್ಥಾಪಿಸಲಾಯಿತು, ಐ.ಕ.ಗ. ಪ್ರಜಾಸತ್ತಾತ್ಮಕ ಆಡಳಿತ, ಮಾನವ ಪ್ರಾತಿನಿಧ್ಯ, ಪ್ರಜಾಸತ್ತಾತ್ಮಕ ಮೌಲ್ಯಗಳು ಮತ್ತು ಸಮಾಜದ ನಾಗರಿಕ ಆಕಾಂಕ್ಷೆಗಳನ್ನು ಉತ್ತೇಜಿಸಲು ಕೆಲಸ ಮಾಡುವ ಜಾಗತಿಕ ಸಂಸ್ಥೆಯಾಗಿದೆ. ಐ.ಪಿ.ಯು. ಪ್ರಜಾಪ್ರಭುತ್ವ, ಶಾಂತಿ, ಲಿಂಗ ಸಮಾನತೆ, ಮಾನವ ಹಕ್ಕುಗಳು, ಯುವ ಸಬಲೀಕರಣ, ರಾಜಕೀಯ ಸಂವಾದ ಮತ್ತು ಹೆಚ್ಚಿನವುಗಳಿಗಾಗಿ ನಿರ್ಣಾಯಕ ಕೆಲಸ ಮಾಡುತ್ತದೆ. ಪ್ರಾತಿನಿಧಿಕ ಪ್ರಜಾಪ್ರಭುತ್ವದಲ್ಲಿ ಮಹಿಳೆಯರು, ಅಲ್ಪಸಂಖ್ಯಾತರು, ಯುವಜನರು, ಅಂಗವಿಕಲರು ಮತ್ತು ಅಲ್ಪಸಂಖ್ಯಾತರ ಭಾಗವಹಿಸುವಿಕೆಯನ್ನು ಪ್ರೇರೇಪಿಸಲು ಸಂಸ್ಥೆಯು ಟೂಲ್ಕಿಟ್ಗಳನ್ನು ಸಹ ನೀಡುತ್ತದೆ. ಸಂಸತ್ತುಗಳು ಕಾರ್ಯನಿರ್ವಹಿಸುವ ಪ್ರಜಾಪ್ರಭುತ್ವಗಳ ಮೂಲಾಧಾರವಾಗಿದೆ. ಈ ಪದವು ಫ್ರೆಂಚ್ ಪದವಾದ 'ಪಾರ್ಲರ್' ನಿಂದ ಹುಟ್ಟಿಕೊಂಡಿದೆ, ಇದರರ್ಥ 'ಮಾತನಾಡಲು'. ಲಕ್ಷಾಂತರ ಜನರಿಗೆ, ರಾಜಕೀಯ ಪ್ರಾತಿನಿಧ್ಯವು ದೂರದ ಕನಸು. ಐ.ಪಿ.ಯು. ಸಂಸದೀಯ ಪ್ರಜಾಪ್ರಭುತ್ವದ ರಚನೆ ಮತ್ತು ನಿಯಮಗಳ ಮೂಲಕ ಆಡಳಿತ ನಡೆಸಲು ಬಯಸುವ ಕಾರ್ಯಕರ್ತರು, ಸಾಮಾಜಿಕ ಕಾರ್ಯಕರ್ತರು ಮತ್ತು ಉತ್ಸಾಹಿಗಳೊಂದಿಗೆ ಒಗ್ಗಟ್ಟಿನಿಂದ ನಿಂತಿದೆ.

# ತಾಂತ್ರಿಕ ದೋಷ: ಬಾಹ್ಯಾಕಾಶದಲ್ಲೇ ಉಳಿಯಲಿರುವ ಸುನೀತಾ ವಿಲಿಯಮ್ಸ್



ಹೀಲಿಯಂ ಸೋರಿಕೆ ಹಾಗೂ ಥರ್ಸ್ಟರ್ ಸಮಸ್ಯೆಗೆ ಸಿಲುಕಿದ್ದ ಸ್ಟಾರ್ಲೈನರ್ ಗಗನ ನೌಕೆಯು ಗಗನ

**ವಾಷಿಂಗ್ಟನ್:** ಸ್ಟಾರ್ಲೈನರ್ ಗಗನ ನೌಕೆಯಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ, ಅದರಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸಿದ್ದ ಗಗನ ಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಹಾಗೂ ಬಚ್ ವಿಲ್ಮೋರ್ ಮತ್ತೆ ಭೂಮಿಗೆ ಮರಳುವ ಬಗ್ಗೆ ಅನಿಶ್ಚಿತತೆ ತಲೆದೋರಿದೆ.

ಸ್ಟಾರ್ಲೈನರ್ ಕಾರ್ಯಾಚರಣೆಯ ಯೋಜನೆಯನ್ನು 45 ದಿನದಿಂದ 90 ದಿನಕ್ಕೆ ವಿಸ್ತರಿಸುವ ಕುರಿತು ನಾಸಾ ಯೋಜಿಸುತ್ತಿದೆ ಎಂದು ನಾಸಾದ ವಾಣಿಜ್ಯ ಸಿಬ್ಬಂದಿ ಕಾರ್ಯಕ್ರಮ ವ್ಯವಸ್ಥಾಪಕ ಸ್ಟೀವ್ ಸ್ಟಿಚ್ ತಿಳಿಸಿದ್ದಾರೆ ಎಂದು ಅಪಿಓ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಜೂನ್ ತಿಂಗಳ ಆರಂಭದಲ್ಲಿ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳುವಾಗ ಯಾತ್ರಿಗಳಾದ ಭಾರತೀಯ ಮೂಲದ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್ ಅವರನ್ನು ಸುರಕ್ಷಿತವಾಗಿ ಭೂಮಿಗೆ ಕರೆ ತರಲಿದೆ ಎಂದು ನಾಸಾದ ಅಧಿಕಾರಿಗಳು ಪುನರುಚ್ಚರಿಸಿದ್ದಾರೆ.

ಈ ನಡುವೆ, ಸದ್ಯ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿರುವ ಇತರ ಸಿಬ್ಬಂದಿಗಳೊಂದಿಗೆ ಸಮನ್ವಯ ಸಾಧಿಸಿರುವ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್, ತಮ್ಮ ದೈನಂದಿನ ಕೆಲಸಗಳನ್ನು ನಡೆಸುತ್ತಿದ್ದಾರೆ.

# ಪಿರಮಿಡ್ ಮೇಲೆ ಹಾರಾಡಿದ ಭಾರತದ ಯುದ್ಧ ವಿಮಾನ!

**ಈಜಿಪ್ಟ್:** ಭಾರತೀಯ ವಾಯುಸೇನೆ ಹಾಗೂ ಈಜಿಪ್ಟ್‌ನ ವಾಯುಸೇನೆ ಜಂಟಿಯಾಗಿ ಸಮರಾಭ್ಯಾಸ ನಡೆಸಿವೆ. ಎರಡೂ ದೇಶಗಳ ರಫೇಲ್ಗಳು ತಮ್ಮ ಕಾರ್ಯದಕ್ಷತೆಯನ್ನು ಪ್ರದರ್ಶಿಸಿದವು.

ಸಮರಾಭ್ಯಾಸದ ವೇಳೆ ರಫೇಲ್ ಪಿರಮಿಡ್‌ಗಳ ಮೇಲೆ ಹಾರುತ್ತಿರುವ ರೋಮಾಂಚನಕಾರಿ ದೃಶ್ಯ ಕಂಡುಬಂತು.

ಹಲವು ಗಂಟೆಗಳ ಕಾಲ ನಡೆದ ಸಮರಾಭ್ಯಾಸದ ಬಳಕ ಈಜಿಪ್ಟ್‌ನಲ್ಲಿರುವ ಭಾರತೀಯ ರಾಯಭಾರಿ ಅಜಿತ್ ಗುಪ್ತೆ ಅವರು ಐಎಎಫ್ ತಂಡವನ್ನು ಭೇಟಿ ಮಾಡಿ ಶುಭ ಹಾರೈಸಿದ್ದಾರೆ.



# ಬೈಡೆನ್ ಬದಲಿಗೆ ಮಿಶೆಲ್ ಅಧ್ಯಕ್ಷೀಯ ಅಭ್ಯರ್ಥಿ?

**ವಾಷಿಂಗ್ಟನ್:** ವರ್ಷಾಂತ್ಯ ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆ ರಂಗೇರಲಾರಂಭಿಸಿದೆ. ಶುಕ್ರವಾರ ಸಿಎನ್‌ಎನ್ ಆಯೋಜಿಸಿದ್ದ ಚರ್ಚಾ ಕಾರ್ಯಕ್ರಮದಲ್ಲಿ ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರ ಪ್ರಶ್ನೆಗಳಿಗೆ ಉತ್ತರಿಸಲು ಹಾಲಿ ಅಧ್ಯಕ್ಷ, ಡೆಮಾಕ್ರಟಿಕ್ ಅಭ್ಯರ್ಥಿ ಜೋ ಬೈಡೆನ್ ತಡವರಿಸಿದ ಬೆನ್ನಲ್ಲೇ ಅವರ ಬದಲು



ಬೇರೆ ಅಭ್ಯರ್ಥಿ ಕಣಕ್ಕೆ ಇಳಿಸುವ ಚಿಂತನೆಗಳು ನಡೆದಿವೆ ಎನ್ನಲಾಗಿದೆ. ಟ್ರಂಪ್ ವಿರುದ್ಧ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಪತ್ನಿ ಮಿಶೆಲ್ ಒಬಾಮಾ ಅಧ್ಯಕ್ಷೀಯ ಅಭ್ಯರ್ಥಿಯಾಗುವ ಸಾಧ್ಯತೆಯಿದೆ ಎಂದು ಸಂಸದ ಟೆಡ್ ಕ್ರೂಜ್ ಸುಳಿವು ನೀಡಿದ್ದಾರೆ. ಚರ್ಚೆ ವೇಳೆ ಟ್ರಂಪ್ ವಾಗ್ದಾಳಿಗೆ ಸೂಕ್ತ ಉತ್ತರ ನೀಡುವಲ್ಲಿ ಬೈಡೆನ್ ವಿಫಲವಾಗಿದ್ದು, ಡೆಮಾಕ್ರಾಟ್‌ಗಳ ಅಸಮಾಧಾನಕ್ಕೆ ಕಾರಣವಾಗಿದೆ. ರಿಪಬ್ಲಿಕನ್ನರೂ ''ಮೊದಲು ನಿಮ್ಮ ಅಭ್ಯರ್ಥಿಬದಲಿಸಿ' ಎಂದು ಸವಾಲು ಹಾಕು ತ್ತಿದ್ದಾರೆ. ಇದರ ಬೆನ್ನಲ್ಲೇ ಬೈಡೆನ್‌ರನ್ನು ಬದಲಾಯಿಸುವುದಿದ್ದರೆ ಅವರ ಸ್ಥಾನಕ್ಕೆ ಮಿಶೆಲ್ ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಬೈಡೆನ್ ಸೋಲುಂಡರೂ ಅವರ ಬೆನ್ನಿಗೆ ನಿಂತಿರುವ ಮಾಜಿ ಅಧ್ಯಕ್ಷ ಒಬಾಮಾ, ''ಚರ್ಚೆ ವೇಳೆ ಕೆಲವೊಮ್ಮೆ ಹಿನ್ನಡೆ ಸಹಜ' ಎಂದಿದ್ದಾರೆ.

# ಕಿಮ್ ಜಾಂಗ್ ಹುಚ್ಚಾಟ

**ಸಿಯೋಲ್:** ಕೆ-ಪಾಪ್ ಸಂಗೀತವನ್ನು ಆಲಿಸಿದ 22 ವರ್ಷದ ಯುವಕನನ್ನು 2022ರಲ್ಲಿ ಉತ್ತರ ಕೊರಿಯಾದ ಸರ್ಕಾರ ಸಾರ್ವಜನಿಕವಾಗಿ ಗಲ್ಲಿಗೇರಿಸಿದೆ ಎಂಬ ಆಘಾತಕಾರಿ ವರದಿಯನ್ನು ದಕ್ಷಿಣ ಕೊರಿಯಾ ಬಹಿರಂಗಪಡಿಸಿದೆ. ಹಿಂದಿನಿಂದಲೂ ಬಾಹ್ಯ ಪ್ರಪಂಚದ ಬಗ್ಗೆ ತಿಳಿಯುವುದಾಗಲೀ ಅದನ್ನು ಅಳವಡಿಸಿಕೊಳ್ಳುವುದಾಗಲೀ ತನ್ನ ಜನರಿಗೆ ಕಟ್ಟುನಿಟ್ಟಾಗಿ ನಿರ್ಬಂಧಿಸಿರುವ ಉತ್ತರ ಕೊರಿಯಾದ ಭೀಕರ ಸತ್ಯವನ್ನು ದಕ್ಷಿಣ ಕೊರಿಯಾ ಬಯಲಿಗೆಳೆಯುತ್ತಿದೆ. ದಕ್ಷಿಣ ಕೊರಿಯಾದ ಏಕೀಕರಣ ಸಚಿವಾಲಯವು ಉತ್ತರ ಕೊರಿಯಾದ ಮಾನವ ಹಕ್ಕುಗಳ 2024 ರ ವರದಿಯನ್ನು ಗುರುವಾರ ಬಿಡುಗಡೆ ಮಾಡಿದೆ. ಉತ್ತರ ಕೊರಿಯಾದಿಂದ ತಪ್ಪಿಸಿಕೊಂಡು ಬಂದ ಸುಮಾರು 649 ಪ್ರಜೆಗಳಿಂದ ಈ ಸಾಕ್ಷ್ಯಗಳನ್ನು ಸಂಗ್ರಹಿಸಿದೆ. ಉತ್ತರ ಕೊರಿಯಾದಿಂದ ಪಲಾಯನಗೊಂಡ ಜನರಿಂದ ಸಂಗ್ರಹಿಸಿದ ಮಾಹಿತಿಯ ಪ್ರಕಾರ ದಕ್ಷಿಣ ಹ್ವಾಂಗೇ ಪ್ರಾಂತ್ಯದ 22 ವರ್ಷದ ಯುವಕ ಸುಮಾರು 70 ದಕ್ಷಿಣ ಕೊರಿಯಾದ ಹಾಡುಗಳನ್ನು ಆಲಿಸಿ, ಮೂರು ದಕ್ಷಿಣ ಕೊರಿಯಾದ ಚಲನಚಿತ್ರಗಳನ್ನು ವೀಕ್ಷಿಸಿ ಹಾಗೂ ಅವುಗಳನ್ನು ವಿತರಿಸಿದ್ದಕ್ಕೆ ತಪ್ಪಿತಸ್ಥನೆಂದು ಘೋಷಿಸಲಾಗಿದೆ. ಯುವಕ ಹೊರಗಿನ ಸಂಸ್ಕೃತಿಯೊಂದಿಗೆ ತೊಡಗಿಸಿಕೊಂಡಿದ್ದಕ್ಕಾಗಿ ವಿದೇಶಿ ಪ್ರಭಾವಗಳನ್ನು ನಿಗ್ರಹಿಸುವ ಮತ್ತು ಆಡಳಿತದ ನಿಯಂತ್ರಣವನ್ನು ನಿರ್ವಹಿಸುವ ಗುರಿಯಿಂದ ಆತನಿಗೆ ಸಾರ್ವಜನಿಕವಾಗಿ ಗಲ್ಲಿಗೇರಿಸಲಾಗಿದೆ ಎಂದು ತಿಳಿದುಬಂದಿದೆ.



# ಉಚಿತ ಸಿಲಿಂಡರ್ ಘೋಷಿಸಿದ ಮಹಾ ಸರ್ಕಾರ



**ನವದೆಹಲಿ:** ಹಣಕಾಸು ಖಾತೆಯನ್ನ ಹೊಂದಿರುವ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರು ಅಕ್ಟೋಬರ್‌ನಲ್ಲಿ ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ 2024-25ರ ರಾಜ್ಯ ಬಜೆಟ್ ಮಂಡಿಸುವಾಗ ಹಲವಾರು ಘೋಷಣೆಗಳನ್ನ ಮಾಡಿದರು.

ಅಜಿತ್ ಪವಾರ್ ಅವರು 21 ರಿಂದ 60 ವರ್ಷ ವಯಸ್ಸಿನ ಅರ್ಹ ಮಹಿಳೆಯರಿಗೆ ಮಾಸಿಕ 1,500 ರೂ.ಗಳ ಭತ್ಯೆಯನ್ನು ಒಳಗೊಂಡ ಆರ್ಥಿಕ ನೆರವು ಯೋಜನೆಯನ್ನ ಘೋಷಿಸಿದರು.

ಮುಖ್ಯಮಂತ್ರಿ ಮಾಝಿ ಲಡ್ಕಿ ಬಹಿನ್ ಯೋಜನೆ ಜುಲೈನಿಂದ ಜಾರಿಗೆ ಬರಲಿದೆ. ಈ ಯೋಜನೆಗಾಗಿ ವಾರ್ಷಿಕ ಬಜೆಟ್ ನಲ್ಲಿ 46,000 ಕೋಟಿ ರೂಪಾಯಿ.

ಐದು ಸದಸ್ಯರ ಅರ್ಹ ಕುಟುಂಬಕ್ಕೆ 'ಮುಖ್ಯಮಂತ್ರಿ ಅನ್ನಪೂರ್ಣ ಯೋಜನೆ' ಅಡಿಯಲ್ಲಿ ಪ್ರತಿ ವರ್ಷ ಮೂರು ಅಡುಗೆ ಅನಿಲ ಸಿಲಿಂಡರ್'ಗಳನ್ನ ಉಚಿತವಾಗಿ ನೀಡಲಾಗುವುದು.

ಮಹಾರಾಷ್ಟ್ರದ ಹತ್ತಿ ಮತ್ತು ಸೋಯಾಬೀನ್ ಬೆಳೆಗಳಿಗೆ ಸರ್ಕಾರವು ಎಲ್ಲಾ ರೈತರಿಗೆ ಪ್ರತಿ ಹೆಕ್ಟೇರ್ಗೆ 5000 ರೂ.ಗಳ ಬೋನಸ್ ನೀಡಲಿದೆ.

ಜುಲೈ 1, 2024 ರ ನಂತರವೂ ಹಾಲು ಉತ್ಪಾದಿಸುವ ರೈತರಿಗೆ ಸರ್ಕಾರವು ಪ್ರತಿ ಲೀಟರ್ಗೆ 5 ರೂಪಾಯಿ ಬೋನಸ್ ನೀಡುತ್ತದೆ.

# ಎನ್‌ಡಿಎಗೆ ಮೈತ್ರಿಗೆ ಮೊದಲ ಅಗ್ನಿ ಪರೀಕ್ಷೆ



**ಪಾಟ್ನಾ:** ಈ ಬಾರಿ ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್ಡಿಎ ಸರ್ಕಾರಅಧಿಕಾರಕ್ಕೆ ಬರುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಜೆಡಿಯುಇದೀಗ ಕೇಂದ್ರ ಸರ್ಕಾರದ ಎದುರು ತನ್ನ ದಶಕದ ಬೇಡಿಕೆಯನ್ನಿಡಲು ಶತ ಪ್ರಯತ್ನ ಮಾಡುತ್ತಿದೆ. ಇದರ ಭಾಗವಾಗಿ ಇಂದು ನಡೆದ ಪಕ್ಷದ ಕಾರ್ಯಕಾರಿಣಿ ಸಭೆಯಲ್ಲಿ ದಶಕದ ಬೇಡಿಕೆಯಾಗಿರುವ ಬಿಹಾರಕ್ಕೆ ವಿಶೇಷ ಸ್ಥಾನಮಾನದ ನಿರ್ಣಯವನ್ನು ಅಂಗೀಕಾರ ಮಾಡಲಾಗಿದೆ.

ಸಭೆಯಲ್ಲಿ, ರಾಜ್ಯಸಭಾ ಸದಸ್ಯ ಸಂಜಯ್ ಝಾ ಅವರನ್ನು ಜೆಡಿಯುನ ಹೊಸ ಕಾರ್ಯಾಧ್ಯಕ್ಷರನ್ನಾಗಿ ನೇಮಿಸಲಾಯಿತು. ಅಲ್ಲದೆ ಜೆಡಿಯು ಎನ್ಡಿಎನಲ್ಲಿಯೇ ಉಳಿಯಲು ನಿರ್ಧರಿಸಲಾಯಿತು. NEET-UGಪ್ರಶ್ನೆ ಪತ್ರಿಕೆ ಸೋರಿಕೆಯ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದ್ದು, ಪೇಪರ್ ಸೋರಿಕೆ ತಡೆಯಲು ಕಠಿಣ ಕಾನೂನುಗಳನ್ನು ಜಾರಿಗೆ ತರಬೇಕು ಎಂಬ ಬೇಡಿಕೆಯನ್ನು ಜೆಡಿಯು ನಾಯಕರು ಮುಂದಿಟ್ಟರು.

ಸಭೆಯಲ್ಲಿ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಜೆಡಿಯು ಪಕ್ಷದ ಮುಖಂಡರು ಬಿಹಾರದ ಆರ್ಥಿಕ ಮತ್ತು ಅಭಿವೃದ್ಧಿ ಕೊರತೆಗಳನ್ನು ಉಲ್ಲೇಖಿಸಿದ್ದು, ವಿಶೇಷ ಸ್ಥಾನಮಾನ ನೀಡಬೇಕು ಎಂಬ ದೀರ್ಘಕಾಲದ ಬೇಡಿಕೆಯನ್ನು ಈಡೇರಿಸುವ ಅಗತ್ಯವನ್ನು ಪ್ರತಿಪಾದಿಸಿದೆ. ಬಿಹಾರ ಸಂಪುಟದಲ್ಲಿ ಕಳೆದ ವರ್ಷ ರಾಜ್ಯಕ್ಕೆ ವಿಶೇಷ ಸ್ಥಾನಮಾನ ನೀಡುವ ಸಂಬಂಧ ನಿರ್ಣಯ ಅಂಗೀಕರಿಸಲಾಗಿತ್ತು.

ಕಾರ್ಯಾಧ್ಯಕ್ಷರಾಗಿ ನೇಮಕವಾದ ನಂತರ ಮಾತನಾಡಿರುವ ಝಾ, ಪ್ರಧಾನಿ ನರೇಂದ್ರ ಮೋದಿ ಯಾವಾಗಲೂ ಬಿಹಾರದತ್ತ ಹೆಚ್ಚು ಗಮನ ಹರಿಸುತ್ತಾರೆ. ರಾಜ್ಯಕ್ಕೆ ವಿಶೇಷ ವರ್ಗದ ಸ್ಥಾನಮಾನ ಅಥವಾ ಪ್ಯಾಕೇಜ್ಗಾಗಿ ಪಕ್ಷದ ಬೇಡಿಕೆಯನ್ನು ಈಡೇರಿಸುತ್ತಾರೆ ಎಂಬ ಭರವಸೆ ಇದೆ. ಜೆಡಿಯು ಯಾವಾಗಲೂ ಎನ್ಡಿಎ ಮೈತ್ರಿಕೂಟದ ಭಾಗವಾಗಿರುವುದಾಗಿ ಘೋಷಿಸಿದ್ದಾರೆ. ರಾಜ್ಯಸಭಾ ಸಂಸದ ಸಂಜಯ್ ಝಾ ಅವರನ್ನು ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ನಾವು ವಿಶೇಷ ಸ್ಥಾನಮಾನ ಮತ್ತು ಆರ್ಥಿಕ ಪ್ಯಾಕೇಜ್‌ಗಾಗಿ ಹೋರಾಟ ಮುಂದುವರಿಸುತ್ತೇವೆ ಎಂದಿದ್ದಾರೆ.

# ಭಾರತದ ಚುನಾವಣಾ ಪ್ರಕ್ರಿಯೆಯನ್ನು ಪ್ರಶಂಸಿಸಿದ ಅಮೇರಿಕಾ !

**ವಾಷಿಂಗ್ಟನ್(ಅಮೇರಿಕಾ):** ಅಮೇರಿಕಾವು ಮತ್ತೊಮ್ಮೆ ಭಾರತದ ಲೋಕಸಭಾ ಚುನಾವಣೆಯ ಪ್ರಶಂಸೆ ಮಾಡಿದೆ. ಅಲ್ಲಿನ ವಿದೇಶಾಂಗ ಇಲಾಖೆಯ ವಕ್ತಾರ ಮ್ಯಾಥ್ಯೂ ಮಿಲ್ಲರ್ ಅವರು ಮಾತನಾಡಿ, ಭಾರತದ ಚುನಾವಣೆಯ ವಿಷಯಕ್ಕೆ ಬಂದಾಗ, ನಾವು ಅಮೇರಿಕಾ ಸರ್ಕಾರದ ಪರವಾಗಿ ಸ್ಪಷ್ಟವಾಗಿ ಹೇಳುವುದೇನೆಂದರೆ, ಭಾರತದಲ್ಲಿಯ ಚುನಾವಣೆ ಅಂದರೆ ವಿಶ್ವದ ಇತಿಹಾಸದಲ್ಲಿ ಪ್ರಜಾಪ್ರಭುತ್ವದ ಎಲ್ಲಕ್ಕಿಂತ ಶ್ರೇಷ್ಠ ಆಚರಣೆಯಾಗಿದೆ.

ಇದೊಂದು ಅದ್ಭುತ ಸಾಧನೆಯಾಗಿತ್ತು ಎಂದವರು ಹೇಳಿದ್ದಾರೆ.

# HMT ಕಾರ್ಖಾನೆಗೆ ಸಚಿವ ಹೆಚ್‌ಡಿಕೆ ಭೇಟಿ



**ಹರಿಯಾಣ:** ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಶನಿವಾರ ಹರಿಯಾಣದ ಪಿಂಜೋರ್ ನಲ್ಲಿರುವ ಹಿಂದೂಸ್ತಾನ್ ಮಶೀನ್ ಅಂಡ್ ಟೂಲ್ಸ್ - ಊಒಖಿ ಕಾರ್ಖಾನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನವದೆಹಲಿಯಿಂದ ಮಧ್ಯಾಹ್ನದ ನಂತರ ಕಾರ್ಖಾನೆಗೆ ಭೇಟಿ ನೀಡಿದ ಸಚಿವರು, ಇಡೀ ಕಾರ್ಖಾನೆಯನ್ನು ಒಂದು ಸುತ್ತು ಹಾಕಿ ಉತ್ಪಾದನಾ ಚಟುವಟಿಕೆ ವೀಕ್ಷಿಸಿದರು ಹಾಗೂ ಯಂತ್ರಗಳ ಕಾರ್ಯಾಚರಣೆ ವೇಳೆಯಲ್ಲೇ ಉತ್ಪಾದನೆ ಕ್ಷಮತೆಯನ್ನು ಖುದ್ದು ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು.

ಕಾರ್ಖಾನೆ ವೀಕ್ಷಣೆ ನಂತರ ಉನ್ನತ ಅಧಿಕಾರಿಗಳ ಸಭೆ ನಡೆಸಿ ಸಮಗ್ರ ಮಾಹಿತಿ ಪಡೆದುಕೊಂಡ ಕುಮಾರಸ್ವಾಮಿ, ಕಾರ್ಖಾನೆ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅಧಿಕಾರಿಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು. ಕಾರ್ಖಾನೆ ಹೊಂದಿರುವ ಆಸ್ತಿಗಳು, ಆಸ್ತಿಗಳಿಗೆ ಸಂಬಂಧಪಟ್ಟ ಕೋರ್ಟ್ ವ್ಯಾಜ್ಯಗಳು, ಉದ್ಯೋಗಿಗಳ ಬಿಕ್ಕಟ್ಟುಗಳು ಇತ್ಯಾದಿ ಅಂಶಗಳ ಬಗ್ಗೆ ಸಚಿವರಿಗೆ ಅಧಿಕಾರಿಗಳು ಮಾಹಿತಿ ನೀಡಿದರು. ಕಾರ್ಖಾನೆಯ ಸದ್ಯದ ಪರಿಸ್ಥಿತಿಯ ಬಗ್ಗೆ ಸಚಿವರ ಕಳವಳ ಸಮಗ್ರ ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು.

ಕಾರ್ಖಾನೆಯ ವಹಿವಾಟು, ಲಾಭ, ಸಾಲ, ಬಾಕಿ ಸೇರಿದಂತೆ ಹಣಕಾಸು ಸ್ಥಿತಿಗತಿಗಳ ಬಗ್ಗೆ ಅಂಕಿ ಅಂಶಗಳನ್ನು ಪಡೆದುಕೊಂಡ ಸಚಿವರು, ಕಾರ್ಖಾನೆಯ ನೌಕರರ ಜತೆ ಮಾತುಕತೆ, ಕಾರ್ಮಿಕರ ಯೂನಿಯನ್ ಮುಖಂಡರ ಜತೆ ಚರ್ಚೆ ನಡೆಸಿದರು.

# ಅಂಗಡಿಗೆ ನುಗ್ಗಿದ ವ್ಯಾನ್; 4 ಮಂದಿ ಮೃತ್ಯು

**ನ್ಯೂಯಾರ್ಕ್:** ಇಲ್ಲಿನ ಲಾಂಗ್ ದ್ವೀಪದಲ್ಲಿ ವ್ಯಾನೊಂದು ಹಸ್ತಾಲಂಕಾರ ಸೆಲೂನ್ನೊಳಗೆ ನುಗ್ಗಿದ್ದು ಈ ಅಪಘಾತದಲ್ಲಿ 4 ಮಂದಿ ಮೃತಪಟ್ಟಿದ್ದು, ಇತರ 10 ಮಂದಿ ಗಂಭೀರವಾಗಿ ಗಾಯಗೊಂಡಿರುವುದಾಗಿ 'ಅಸೋಸಿಯೇಟೆಡ್ ಪ್ರೆಸ್' ವರದಿ ಮಾಡಿದೆ.ಡಿಯರ್ ಪಾರ್ಕ್ ಪ್ರದೇಶದಲ್ಲಿ ಚಲಿಸುತ್ತಿದ್ದ ವ್ಯಾನು ಚಾಲಕನ ನಿಯಂತ್ರಣ ಕಳೆದುಕೊಂಡು ರಸ್ತೆ ಪಕ್ಕವಿದ್ದ ಸಲೂನ್‌ಗೆ ನುಗ್ಗಿದೆ. ವ್ಯಾನ್ ಅಪ್ಪಳಿಸಿದ ರಭಸಕ್ಕೆ ಸಲೂನ್ನ ಗಾಜಿನ ಬಾಗಿಲು, ಗೋಡೆ ಪುಡಿಯಾಗಿದ್ದು ಛಾವಣಿ ಕುಸಿದಿದೆ. ಸಲೂನ್ನಲ್ಲಿದ್ದ 4 ಮಂದಿ ಮೃತಪಟ್ಟಿದ್ದು ಇತರ 10 ಮಂದಿ ಗಾಯಗೊಂಡಿದ್ದು ಓರ್ವನನ್ನು ತುರ್ತು ನಿಗಾ ಘಟಕಕ್ಕೆ ದಾಖಲಿಸಲಾಗಿದೆ ಎಂದು ಪೊಲೀಸರನ್ನು ಉಲ್ಲೇಖಿಸಿದ ವರದಿ ತಿಳಿಸಿದೆ.




# ಉಕ್ರೇನ್‌ನ ಆಗ್ನೇಯ ಭಾಗದಲ್ಲಿ ರಷ್ಯಾ ದಾಳಿ



**ಮಾಸ್ಕೋ:** ಆಗ್ನೇಯ ಉಕ್ರೇನ್ ನಗರ ಜಪೊರಿಝಿಯಾ ಹೊರಭಾಗದಲ್ಲಿರುವ ವಿಲ್ನಿಯನ್ಸ್ಕ ಪಟ್ಟಣದ ಮೇಲೆ ಶನಿವಾರ ದಾಳಿ ನಡೆಸಿದ ಉಸ್ಸಿಯಾ ಪಡೆಗಳು ಇಬ್ಬರು ಮಕ್ಕಳು ಸೇರಿದಂತೆ ಏಳು ಜನರನ್ನು ಕೊಂದು ಕನಿಷ್ಠ 10 ಜನರನ್ನು ಗಾಯಗೊಳಿಸಿವೆ ಎಂದು ಪ್ರಾದೇಶಿಕ ಗವರ್ನರ್ ತಿಳಿಸಿದ್ದಾರೆ.

ಇಂದು ಶತ್ರುಗಳು ನಾಗರಿಕರ ವಿರುದ್ಧ ಮತ್ತೊಂದು ಭಯಾನಕ ಭಯೋತ್ಪಾದಕ ಕೃತ್ಯವನ್ನು ನಡೆಸಿದ್ದಾರೆ ಎಂದು ಜಪೊರಿಝಿಯಾ ಗವರ್ನರ್ ಇವಾನ್ ಫೆಡೋರೊವ್ ಟೆಲಿಗ್ರಾಮ್ ಮೆಸೇಜಿಂಗ್ ಆಪ್ನಲ್ಲಿ ಪೋಸ್ಟ್ ಮಾಡಿದ ವೀಡಿಯೊದಲ್ಲಿ ಹೇಳಿದ್ದಾರೆ.

ಈ ದಾಳಿಯು ಕೆಲಸವಿಲ್ಲದ ದಿನವಾದ ಮಧ್ಯದಲ್ಲಿ, ಪಟ್ಟಣ ಕೇಂದ್ರದಲ್ಲಿ ಸಂಭವಿಸಿದೆ, ಅಲ್ಲಿ ಜನರು ವಿಶ್ರಾಂತಿ ಪಡೆಯುತ್ತಿದ್ದರು, ಅಲ್ಲಿ ಮಿಲಿಟರಿ ಗುರಿಗಳಿಲ್ಲ ಎಂದು ಫೆಡೋರೊವ್ ಹೇಳಿದರು.

ದಾಳಿಯಲ್ಲಿ ಮೂಲಸೌಕರ್ಯ, ಅಂಗಡಿ ಮತ್ತು ವಸತಿ ಕಟ್ಟಡಗಳಿಗೆ ಹಾನಿಯಾಗಿದೆ ಎಂದು ಹೇಳಿದರು.

# ಆಸ್ಟ್ರೇಲಿಯಾ ಪ್ರಧಾನಿಗೆ ಜೀವ ಬೆದರಿಕೆ ಕರೆ



**ಆಸ್ಟ್ರೇಲಿಯಾ:** ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರು ತಮಗೆ ಮತ್ತು ತಮ್ಮ ಕುಟುಂಬಕ್ಕೆ ಉಗ್ರಗಾಮಿಯಿಂದ ಕೊಲೆ ಬೆದರಿಕೆಗಳು ಬಂದಿವೆ ಎಂದು ಬಹಿರಂಗಪಡಿಸಿದ್ದಾರೆ.

ಶಂಕಿತನನ್ನು ಜೋರ್ಡಾನ್ ಪ್ಯಾಟನ್ ಎಂದು ಗುರುತಿಸಲಾಗಿದೆ. 19 ವರ್ಷದ ಯುವಕ ಬುಧವಾರ ನ್ಯೂಕ್ಯಾಸಲ್ ಸಂಸದ ಟಿಮ್ ಕ್ರಾಕೆಂಥೋರ್ಪ್ ಅವರ ಕಚೇರಿಗೆ ಚಾಕು ಮತ್ತು ಕೆಲವು ಮಾರಕಾಸ್ತ್ರಗಳೊಂದಿಗೆ ಪ್ರವೇಶಿಸಿ ಅದನ್ನು ಚಿತ್ರೀಕರಿಸಿದ್ದಾನೆ ಎಂದು ಆರೋಪಿಸಲಾಗಿದೆ. ಈ ಬಗ್ಗೆ ಮಾತನಾಡಿದ ಅಲ್ಬನೀಸ್, ಆ ದಾಖಲೆ ? ಲೇಬರ್ ಸಂಸದರಿಗೆ ಮಾತ್ರವಲ್ಲ, ಇತರ ಜನರಿಗೆ, ನನ್ನ ಕುಟುಂಬಕ್ಕೆ ಬೆದರಿಕೆಗಳು ಸೇರಿದಂತೆ ತುಂಬಾ ಆತಂಕಕಾರಿಯಾಗಿದೆ ಎಂದು ಅಲ್ಬನೀಸ್ ಹೇಳಿದರು.

ತನಿಖಾಧಿಕಾರಿಗಳ ಪ್ರಕಾರ, 19 ವರ್ಷದ ಯುವಕ ಇತ್ತೀಚೆಗೆ ಉಗ್ರಗಾಮಿ ದೃಷ್ಟಿಕೋನಗಳಿಂದ ತುಂಬಿದ 200 ಪುಟಗಳ ಪ್ರಣಾಳಿಕೆಯನ್ನು ಹಲವಾರು ಮಾಧ್ಯಮಗಳು ಮತ್ತು ಸಾರ್ವಜನಿಕ ವ್ಯಕ್ತಿಗಳಿಗೆ ವಿತರಿಸಿದ್ದಾನೆ. ಎಬಿಸಿ ನ್ಯೂಸ್ ಪ್ರಕಾರ, ಪ್ಯಾಟನ್ ಚಿತ್ರೀಕರಿಸಿದ ಏಳು ನಿಮಿಷಗಳ ವೀಡಿಯೊದಲ್ಲಿ ಅವರು ಬ್ಯಾಲಿಸ್ಟಿಕ್ ಉಡುಗೆ, ಫೇಸ್ ಮಾಸ್ಕ್, ಗ್ಲೌಸ್ ಮತ್ತು ಗೋಪ್ರೊ ಕ್ಯಾಮೆರಾ ಹೊಂದಿರುವ ಹೆಲ್ಮೆಟ್ ಸೇರಿದಂತೆ ಸಾರ್ವಜನಿಕ ಶೌಚಾಲಯದಲ್ಲಿ ವೇಷಭೂಷಣವನ್ನು ಸಿದ್ಧಪಡಿಸುತ್ತಿರುವುದನ್ನು ತೋರಿಸುತ್ತದೆ ಎಂದು ಆರೋಪಿಸಲಾಗಿದೆ.

# ರಾಜ್ದೀಪ್, ಧೃವ್ ರಾಠಿಗೆ ಸಂಕಷ್ಟ





**ನವದೆಹಲಿ:** ಮೊಬೈಲ್ ಬಳಸಿ ಒಟಿಪಿ ಪಡೆದು ಇವಿಎಂ ಅನ್ಲಾಕ್ ಮಾಡಲಾಗಿದೆ ಎಂದು ಸುಳ್ಳು ಸುದ್ದಿ ಪ್ರಸಾರ ಮಾಡಿದ ಆರೋಪದಡಿ ಮಿಡ್ ಡೇ ಪತ್ರಿಕೆ, ಪತ್ರಕರ್ತ ರಾಜ್ದೀಪ್ ಸರ್ದೇಸಾಯಿ, ಹಾಗೂ ಯೂಟ್ಯೂಬರ್ ಧೃವ್ ರಾಠಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಮುಂಬೈ ವಾಯವ್ಯ ಕ್ಷೇತ್ರದಲ್ಲಿ ಶಿವಸೇನೆ ಅಭ್ಯರ್ಥಿ ರವೀಂದ್ರ ವಾಯಿಕರ್ ಇತ್ತೀಚೆಗೆ 48 ಮತದಿಂದ ಗೆದ್ದಿದ್ದರು.

ಮತ ಎಣಿಕೆ ಕೇಂದ್ರದ ಏಜೆಂಟ್ ಆಗಿದ್ದ ಬಂಧು ಮಂಗೇಶ್ ಪಂಡಿಲ್ಕರ್ ಅವರು, ಎಣಿಕೆ ಕೇಂದ್ರದ ಅಧಿಕಾರಿಯ ಮೊಬೈಲ್ ಬಳಸಿ ಒಟಿಪಿ ಪಡೆದು ಇವಿಎಂ ಅನ್ಲಾಕ್ ಮಾಡಿದ್ದರು ಎಂದು ಅವರ ವಿರುದ್ಧ ಆರೋಪ ಕೇಳಿಬಂದಿತ್ತು. ಈ ಬಗ್ಗೆ ಎಫ್‌ಐಆರ್ ಕೂಡ ದಾಖಲಿಸಲಾಗಿತ್ತು. ಹೀಗಾಗಿ ಚುನಾವಣಾಧಿಕಾರಿ ಸ್ಪಷ್ಟನೆ ನೀಡಿ, ಈ ಇವಿಎಂ ಅನ್ ಲಾಕ್ ಅಸಾಧ್ಯ ಎಂದು ಕ್ಲೀನ್ ಚಿಟ್ ನೀಡಿದ್ದರು. ಅದಾಗ್ಯೂ ಕೂಡ ಒಟಿಪಿ ಪಡೆದು ಇವಿಎಂ ಅನ್ಲಾಕ್ ಮಾಡಲಾಗಿದೆ ಎಂದು ಸುಳ್ಳು ಸುದ್ದಿ ಪ್ರಸಾರ ಮಾಡಲಾಗಿತ್ತು.

ಸುಳ್ಳು ಹೇಳಿಕೆಗಳೊಂದಿಗೆ ವರದಿಯನ್ನು ಬರೆದಿದ್ದಕ್ಕಾಗಿ ಮಿಡ್-ಡೇ ವರದಿಗಾರ ಶಿರಿಶ್ ವಕಟಾನಿಯಾ, ಇಂಡಿಯಾ ಟುಡೆ ಪತ್ರಕರ್ತ ರಾಜದೀಪ್ ಸರ್ದೇಸಾಯಿ, ಶಿವಸೇನೆ (ಯುಬಿಟಿ) ಸಂಸದೆ ಪ್ರಿಯಾಂಕಾ ಚತುರ್ವೇದಿ, ಎನ್ಸಿಪಿ ಶಾಸಕ ಜಿತೇಂದ್ರ ಅವ್ಹಾದ್, ಕಾಂಗ್ರೆಸ್ ಸಾಮಾಜಿಕ ಮಾಧ್ಯಮ ಸೆಲ್ ಮುಖ್ಯಸ್ಥೆ ಸುಪ್ರಿಯಾ ಶ್ರೀನೇಟ್, ಯೂಟ್ಯೂಬರ್ ಧೃವ್ ರಾಠಿ, ಕಾಂಗ್ರೆಸ್ ನಾಯಕ ಸರಳ್ ಪಟೇಲ್ ಸೇರಿದಂತೆ ಇತರರ ವಿರುದ್ಧ ವಕೀಲ ವಿವೇಕಾನಂದ ದಯಾನಂದ ಗುಪ್ತಾ ದೂರು ನೀಡಿದ್ದಾರೆ.

# ಉಗ್ರರಿಗೆ ಆರ್ಥಿಕ ನೆರವು ತಡೆ: ಭಾರತದ ಕ್ರಮಕ್ಕೆ ವ್ಯಾಪಕ ಮೆಚ್ಚುಗೆ



**ಸಿಂಗಾಪುರ:** ಹಣಕಾಸು ಅಕ್ರಮ ವರ್ಗಾವಣೆ ಮತ್ತು ಉಗ್ರರಿಗೆ ಆರ್ಥಿಕ ನೆರವು ನಿಗ್ರಹದಲ್ಲಿ ಭಾರತದ ಸಾಧನೆ ಗಮನಾರ್ಹವಾದದ್ದು ಎಂದು ಅಂತಾರಾಷ್ಟ್ರೀಯ ಹಣಕಾಸು ಕಾರ್ಯಪಡೆ ಮೆಚ್ಚುಗೆ ಸೂಚಿಸಿದೆ. ಸಿಂಗಾಪುರದಲ್ಲಿ ನಡೆದ ಎಫ್ ಎಟಿಎಫ್ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆಸಲಾಗಿದೆ. ಉಗ್ರ ಸಂಘಟನೆಗಳಿಗೆ ಹಣದ ಹರಿವು ತಡೆಯುವ ನಿಟ್ಟಿನಲ್ಲಿ ಭಾರತ ಸರಕಾರ ಕೈಗೊಂಡಿರುವ ಕ್ರಮಗಳು ಉತ್ತಮ ಫಲಿತಾಂಶ ನೀಡುತ್ತಿವೆ. 1 ವರ್ಷ ಕಾಲ ಭಾರತ ಸರಕಾರ ರೂಪಿಸಿದ ಕ್ರಮಗಳನ್ನು ಪರಿಶೀಲನೆಗೆ ಒಳಪಡಿಸಿದ ಬಳಿಕ ಈ ಅಭಿಪ್ರಾಯ ವ್ಯಕ್ತಪಡಿಸಲಾಗಿದೆ ಎಂದು ಕಾರ್ಯಪಡೆ ಹೇಳಿದೆ. ಆದರೆ ಹಣಕಾಸು ಅಕ್ರಮ ಮತ್ತು ಉಗ್ರರಿಗೆ ವಿತ್ತೀಯ ನೆರವು ನೀಡುವ ಪ್ರಕರಣಗಳಿಗೆ ಸಂಬಂಧಿಸಿದ ವಿಚಾರಣೆ ಇನ್ನೂ ವೇಗ ಪಡೆದುಕೊಳ್ಳಬೇಕಾಗಿದೆ ಎಂದು ಅಭಿಪ್ರಾಯಪಟ್ಟಿದೆ. ಉಗ್ರರನ್ನು ಮಟ್ಟ ಹಾಕಲು ಕೇಂದ್ರ ಕೈಗೊಂಡಿರುವ ಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದೆ. ಹಣಕಾಸು ಗುಪ್ತಚರ ಸಂಸ್ಥೆಗಳ ಮೂಲಕ ಉಗ್ರರಿಗೆ ವಿತ್ತೀಯ ನೆರವು ನೀಡುವ ವ್ಯವಸ್ಥೆಗಳನ್ನು ಭಾರತ ಮಟ್ಟ ಹಾಕಿದೆ ಎಂದು ಕಾರ್ಯಪಡೆ ಹೇಳಿದೆ. ಇದಕ್ಕೆ ಪ್ರತಿಕ್ರಿಯಿಸಿದ ವಿದೇಶಾಂಗ ಇಲಾಖೆ, ಎಫ್‌ಎಟಿಎಫ್ ವರದಿಯು ಭಾರತದ ಆರ್ಥಿಕತೆಯ ಸ್ಥಿರತೆ, ಸಮಗ್ರತೆಯನ್ನು ಪ್ರತಿಬಿಂಬಿಸಿದೆ' ಎಂದು ಹೇಳಿದೆ.

# ನೇಪಾಳದಲ್ಲಿ ಭೂಕುಸಿತ: ಏಳು ಮಂದಿ ಸಾವು

**ನವದೆಹಲಿ:** ಪಶ್ಚಿಮ ನೇಪಾಳದಲ್ಲಿ ಶನಿವಾರ ಸಂಭವಿಸಿದ ಎರಡು ಭೂಕುಸಿತಗಳಲ್ಲಿ ಏಳು ಜನರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.ಗುಲ್ಮಿ ಜಿಲ್ಲೆಯ ಮಲ್ಲಿಕಾ ಗ್ರಾಮೀಣ ಪುರಸಭೆಯಲ್ಲಿ ಭೂಕುಸಿತದಲ್ಲಿ ಮನೆ ಕೊಚ್ಚಿಹೋದ ಒಂದೇ ಕುಟುಂಬದ ಐವರು ಸಾವನ್ನಪ್ಪಿದ್ದಾರೆ.

ಭಾರೀ ಮಳೆಯಿಂದಾಗಿ ಮಾರಣಾಂತಿಕ ಭೂಕುಸಿತ ಸಂಭವಿಸಿದೆ ಮತ್ತು ಎಲ್ಲಾ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪುರಸಭೆಯ ಅಧ್ಯಕ್ಷ ದೇವಿ ರಾಮ್ ಆರ್ಯಲ್ ಕ್ಸಿನ್ಹುವಾ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಸಿಯಾಂಗ್ಜಾ ಜಿಲ್ಲೆಯ ಫೆಡಿಖೋಲಾ ಗ್ರಾಮೀಣ ಪುರಸಭೆಯಲ್ಲಿ ಭೂಕುಸಿತದಲ್ಲಿ ತಾಯಿ ಮತ್ತು ಮಗಳು ಸಾವನ್ನಪ್ಪಿದ್ದಾರೆ ಎಂದು ಜಿಲ್ಲಾ ಪೊಲೀಸ್ ವಕ್ತಾರ ಇಂದ್ರ ಬಹದ್ದೂರ್ ರಾಣಾ ತಿಳಿಸಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ಜೂನ್ 10 ರಂದು ನೇಪಾಳದಲ್ಲಿ ಮಾನ್ಸೂನ್ ಋತುವು ಪ್ರಾರಂಭವಾಯಿತು ಮತ್ತು ಹೊಸ ಸಾವುನೋವುಗಳೊಂದಿಗೆ, ಮಳೆ ಸಂಬಂಧಿತ ಘಟನೆಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ 34ಕ್ಕೆ ತಲುಪಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## ಪ್ಯಾನ್ ಇಂಡಿಯಾ ಚಿತ್ರ ಘೋಷಿಸಿದ ಸಾಯಿ ಧರಮ್ ತೇಜ್ ಹೀರೋ

ಮೆಗಾಸ್ಟಾರ್ ಕುಟುಂಬದ ಮನೆ ಮಗ ಸಾಯಿ ಧರಮ್ ತೇಜ್ ಮತ್ತೆ ಸಿನಿಮಾದಲ್ಲಿ ಆಕ್ಟಿವ್ ಆಗಿದ್ದಾರೆ. ಪ್ಯಾನ್ ಇಂಡಿಯಾ ಸಿನಿಮಾಗೆ ಇದೀಗ ಸಾಯಿ ಧರಮ್ ತೇಜ್ ಹೀರೋ ಆಗಿದ್ದಾರೆ. ಈ ಮೂಲಕ ಫ್ಯಾನ್ಸ್‌ಗೆ ನಟ ಸಿಹಿಸುದ್ದಿ ಕೊಟ್ಟಿದ್ದಾರೆ.

ಈ ಪೋಸ್ಟರ್ ತುಂಬಾ ವಿಶೇಷವಾಗಿದೆ. ನಿಮ್ಮೆಲ್ಲರ ಆಶೀರ್ವಾದ ಬೇಕು ಎಂದು ಚಿತ್ರದ ಪೋಸ್ಟರ್ ಶೇರ್ ಮಾಡಿ ಸಾಯಿ ಧರಮ್ ತೇಜ್ ಬರೆದುಕೊಂಡಿದ್ದಾರೆ. ರೋಹಿತ್ ಕೆಪಿ ನಿರ್ದೇಶನ ಮಾಡಲಿದ್ದಾರೆ. ಬಹುಭಾಷೆಗಳಲ್ಲಿ ಮೂಡಿ ಬರಲಿರುವ ಈ ಚಿತ್ರಕ್ಕೆ ನಿರಂಜನ್ ರೆಡ್ಡಿ ನಿರ್ಮಾಣ ಮಾಡಲಿದ್ದಾರೆ. ಸದ್ಯಕ್ಕೆ 'ಖಆಖ 18' ಟೈಟಲ್ ನೊಂದಿಗೆ ಸಿನಿಮಾ ಶೂಟಿಂಗ್ ಶುರುವಾಗಿದೆ.

'ವಿರೂಪಾಕ್ಷ' ಸಿನಿಮಾ ಯಶಸ್ಸು ಕಂಡಿದೆ. ಈ ಸಿನಿಮಾದ ನಂತರ ಮತ್ತಷ್ಟು ಚಿತ್ರಗಳ ಅವಕಾಶಗಳು ಅರಸಿ ಬರುತ್ತಿವೆ. 2014ರಲ್ಲಿ 'ಪಿಳ್ಳಾ ನುವು ಲೇನಿ



ಜೀವಿತಂ' ಚಿತ್ರದ ಮೂಲಕ ಸಾಯಿ ಧರಮ್ ತೇಜ್ ನಾಯಕನಾಗಿ ತೆಲುಗಿಗೆ ಎಂಟ್ರಿ ಕೊಟ್ಟರು. ಈ ಚಿತ್ರಕ್ಕೆ ಕನ್ನಡದ ಸೂರ್ಯಕಾಂತಿ ಚಿತ್ರದ ರೆಜಿನಾ ನಾಯಕಿಯಾಗಿದ್ದರು.

# 'ಕಂಗುವ' ಚಿತ್ರದ ರಿಲೀಸ್ ಡೇಟ್ ಅನೌನ್ಸ್

ತಮಿಳು ನಟ ಸೂರ್ಯ ನಟನೆಯ 'ಕಂಗುವ' ಸಿನಿಮಾದ ರಿಲೀಸ್ ಡೇಟ್ ಅನ್ನು ಅನೌನ್ಸ್ ಮಾಡಿದ್ದಾರೆ. ದಸರಾ ಪ್ರಯುಕ್ತ ಸಿನಿಮಾ ರಿಲೀಸ್‌ಗೆ ಸಜ್ಜಾಗಿದೆ. ಧ್ರುವ ಸರ್ಜಾ ನಟನೆಯ 'ಮಾರ್ಟಿನ್'ಗೆ, ದೇವರ ಸಿನಿಮಾಗೆ ಠಕ್ಕರ್ ಕೊಡಲು ರೆಡಿಯಾಗಿದೆ.

ಅಕ್ಟೋಬರ್ 10ರಂದು ಬಹುಭಾಷೆಗಳಲ್ಲಿ 'ಕಂಗುವ' ಸಿನಿಮಾ ರಿಲೀಸ್ ಆಗ್ತಿದೆ. ಶಿವ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಈ ಫ್ಯಾಂಟಸಿ ಸಿನಿಮಾವು ದಸರಾ ಹಬ್ಬದ ಸಂದರ್ಭದಲ್ಲಿ ಮನರಂಜನೆ ಕೊಡಲು ರೆಡಿಯಾಗಿದೆ.

ಜ್ಯೂ.ಎನ್‌ಟಿಆರ್ ಮತ್ತು ಜಾನ್ವಿ ಕಪೂರ್ ನಟನೆಯ 'ದೇವರ' ಕೂಡ ಅಕ್ಟೋಬರ್ 10ರಂದು ರಿಲೀಸ್‌ಗೆ ಸಿದ್ಧವಾಗಿದೆ. ಅಕ್ಟೋಬರ್ 11ರಂದು ಧ್ರುವ ಸರ್ಜಾ ನಟನೆಯ 'ಮಾರ್ಟಿನ್' ಸಿನಿಮಾ ಬರಲಿದೆ. ಈ ಮೂರು ಸಿನಿಮಾ ಕೂಡ ಬಾಕ್ಸ್ ಆಫೀಸ್‌ನಲ್ಲಿ ಕ್ಲ್ಯಾಶ್ ಆಗಲಿದೆ.

ಇದೀಗ ಪರಭಾಷಾ ಸಿನಿಮಾದ ಮುಂದೆ ಬಹುನಿರೀಕ್ಷಿತ 'ಮಾರ್ಟಿನ್' ಪೈಪೋಟಿ ಕೊಡಲಿದೆಯಾ ಕಾದುನೋಡಬೇಕಿದೆ. ಈ ಸಿನಿಮಾಗಳ ಸ್ಪರ್ಧೆಯಲ್ಲಿ ಗೆಲ್ಲೋರು ಯಾರು ಸೋಲೋರು ಯಾರು ಎಂದು ಕಾಯಬೇಕಿದೆ.

**ದೇವರ, ಮಾರ್ಟಿನ್ ಜೊತೆ ಕ್ಲ್ಯಾಶ್**





## ಹಿನಾ ಖಾನ್‌ಗೆ ಸ್ತನ ಕ್ಯಾನ್ಸರ್

'ಬಿಗ್ ಬಾಸ್' ಸ್ಪರ್ಧಿ ಹಿನಾ ಖಾನ್ ಅಭಿಮಾನಿಗಳಿಗೆ ತಮ್ಮ ಆರೋಗ್ಯದ ಬಗ್ಗೆ ಮಾಹಿತಿ ನೀಡಿದ್ದಾರೆ. 3ನೇ ಹಂತದ ಸ್ತನ ಕ್ಯಾನ್ಸರ್‌ಗೆ ಒಳಗಾಗಿದ್ದಾರೆ.ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ನಟಿ ಹಂಚಿಕೊಂಡಿದ್ದಾರೆ. ಸದ್ಯ ನಟಿಯ ಆರೋಗ್ಯದ ಸಮಸ್ಯೆ ಕೇಳಿ ಫ್ಯಾನ್ಸ್ ನೋವಾಗಿದೆ.

ಎಲ್ಲರಿಗೂ ನಮಸ್ಕಾರ, ಇತ್ತೀಚೆಗೆ ಕೇಳಿಬಂದ ಕೆಲವು ವದಂತಿಗಳನ್ನು ಪರಿಹರಿಸಲು ನಾನು ಬಯಸುತ್ತೇನೆ. ನನ್ನನ್ನು ಪ್ರೀತಿಸುವ ಮತ್ತು ಕಾಳಜಿ ವಹಿಸುವ ಪ್ರತಿಯೊಬ್ಬರಿಗೂ ಈ ಮಾಹಿತಿಯನ್ನು ಹಂಚಿಕೊಳ್ಳಲು ಇಷ್ಟಪಡುತ್ತೇನೆ. ಈಚೆಗೆ ನನಗೆ 3ನೇ ಹಂತದ ಸ್ತನ ಕ್ಯಾನ್ಸರ್ ಇರುವುದು ತಿಳಿದು ಬಂದಿದೆ ಎಂದು ಫ್ಯಾನ್ಸ್‌ಗೆ 'ಬಿಗ್ ಬಾಸ್' ಸ್ಪರ್ಧಿ ಹಿನಾ ಖಾನ್ ಸಂದೇಶ ರವಾನೆ ಮಾಡಿದ್ದಾರೆ.

ಈ ಕಾಯಿಲೆ ಇದ್ದಾಗಿಯೂ ನಾನು ಉತ್ತಮವಾಗಿದ್ದೇನೆ. ನಾನು ಬಲಶಾಲಿ ಮತ್ತು ಈ ರೋಗವನ್ನು ಜಯಿಸಲು ನಿಜವಾಗಿಯೂ ಬದ್ಧನಾಗಿದ್ದೇನೆ ಎಂದು ಎಲ್ಲರಿಗೂ ಭರವಸೆ ನೀಡಲು ನಾನು ಬಯಸುತ್ತೇನೆ. ನನ್ನ ಚಿಕಿತ್ಸೆಯು ಈಗಾಗಲೇ ಪ್ರಾರಂಭವಾಗಿದೆ. ಇದರಿಂದ ಇನ್ನಷ್ಟು ಬಲವಾಗಿ ಹೊರಹೊಮ್ಮಲು ಅಗತ್ಯವಿರುವ ಎಲ್ಲವನ್ನೂ ಮಾಡಲು ನಾನು ಸಿದ್ಧಳಿದ್ದೇನೆ ಎಂದು ಹಿನಾ ಖಾನ್ ಹೇಳಿಕೊಂಡಿದ್ದಾರೆ.

ಈ ಸಮಯದಲ್ಲಿ ನನ್ನ ಖಾಸಗಿತನವನ್ನು ಗೌರವಿಸುತ್ತೀರಿ ಎಂದು ನಾನು ಭಾವಿಸುತ್ತೇನೆ. ನಿಮ್ಮ ಪ್ರೀತಿ, ಶಕ್ತಿ ಮತ್ತು ಆಶೀರ್ವಾದವನ್ನು ನಾನು ಆಳವಾಗಿ ಪ್ರಶಂಸಿಸುತ್ತೇನೆ. ನಾನು, ನನ್ನ ಕುಟುಂಬ ಮತ್ತು ಪ್ರೀತಿಪಾತ್ರರ ಜೊತೆಗೆ ಧನಾತ್ಮಕವಾಗಿ ಇರುತ್ತೇನೆ. ಸರ್ವಶಕ್ತನ ಅನುಗ್ರಹದಿಂದ, ನಾನು ಈ ಸವಾಲನ್ನು ಜಯಿಸುತ್ತೇನೆ ಮತ್ತು ಸಂಪೂರ್ಣವಾಗಿ ಆರೋಗ್ಯವಾಗಿರುತ್ತೇನೆ ಎಂದು ನಾನು ನಂಬಿದ್ದೇನೆ. ದಯವಿಟ್ಟು ನಿಮ್ಮ ಪ್ರಾರ್ಥನೆ, ಆಶೀರ್ವಾದ ಮತ್ತು ಪ್ರೀತಿ ನನ್ನ ಮೇಲೆ ಇರಲಿ ಎಂದು ನಟಿ ಹೇಳಿದ್ದಾರೆ. ಅಂದಹಾಗೆ, ಸ್ತನ ಕ್ಯಾನ್ಸರ್‌ಗೆ ನಟಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ.

ಕಳೆದ 16 ವರ್ಷಗಳಿಂದ ಕಿರುತೆರೆಯಲ್ಲಿ ನಟಿ ಆಕ್ಟಿವ್ ಆಗಿದ್ದಾರೆ. ಸಿನಿಮಾ, ಸಾಲು ಸಾಲು ಸೀರಿಯಲ್‌ಗಳಲ್ಲಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 'ಯೇ ರಿಶ್ತಾ ಕ್ಯಾ ಕೆಹ್ಲಾತಾ ಹೈ' ಹಿನಾಗೆ ಭಾರೀ ಜನಪ್ರಿಯತೆ ನೀಡಿತ್ತು.

ಟೀಂ ಇಂಡಿಯಾದ ಸಾಧನೆ ಮುರಿಯುವುದು ಬಲು ಕಷ್ಟ

# ವಿಶ್ವಕಪ್ ಜೊತೆ ವಿಶ್ವದಾಖಲೆ



ಭಾರತ ಟಿ20 ಚಾಂಪಿಯನ್ ಆಗುವುದರ ಜೊತೆ ಟಿ20 ವಿಶ್ವಕಪ್‌ನಲ್ಲಿ ವಿಶ್ವದಾಖಲೆ ನಿರ್ಮಿಸಿದೆ. ಟೂರ್ನಿಯ ಎಲ್ಲಾ ಪಂದ್ಯಗಳನ್ನು ಗೆದ್ದು ಕಪ್ ಜಯಿಸಿದ ಏಕಮಾತ್ರ ತಂಡ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ.

ಹೌದು. ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಅಜೇಯವಾಗಿ ಫೈನಲ್ ಪ್ರವೇಶಿಸಿದ್ದವು. ಇದುವರೆಗಿನ ಟಿ20 ಇತಿಹಾಸದಲ್ಲಿ ಎರಡು ತಂಡಗಳು ಅಜೇಯವಾಗಿ ಫೈನಲ್ ತಲುಪಿರುವುದು ಇದೇ ಮೊದಲು. ಎರಡು ತಂಡಗಳು ಗುಂಪು, ಸೂಪರ್ 8 ವಿಭಾಗದಲ್ಲಿ ಅಗ್ರಸ್ಥಾನಿಯಾಗಿ ಫೈನಲ್ ಪ್ರವೇಶಿಸಿತ್ತು. ದಕ್ಷಿಣ ಆಫ್ರಿಕಾ 8 ಜಯದೊಂದಿಗೆ ಫೈನಲ್ ಪ್ರವೇಶಿಸಿದ್ದರೆ ಗುಂಪು ಹಂತದಲ್ಲಿ ಕೆನಡಾದೊಂದಿಗಿನ ಪಂದ್ಯ ಮಳೆಯಿಂದ ರದ್ದಾಗಿದ್ದರಿಂದ 7 ಜಯದೊಂದಿಗೆ ಭಾರತ ಫೈನಲ್ ಪ್ರವೇಸಿಸಿತ್ತು. ಹೀಗಾಗಿ ಈ ಬಾರಿ ಯಾರೇ ಗೆದ್ದರೂ ಅಜೇಯವಾಗಿ ಟಿ20 ವಿಶ್ವಕಪ್ ಟ್ರೋಫಿ ಗೆದ್ದ ತಂಡ ಎಂಬ ವಿಶಿಷ್ಟ ಸಾಧನೆ ನಿರ್ಮಾಣವಾಗುತಿತ್ತು.

ಹಾಗೆ ನೋಡಿದರೆ ಭಾರತ ಕಠಿಣ ಎದುರಾಳಿ ತಂಡಗಳನ್ನು ಮಣಿಸಿ ಫೈನಲ್ ಪ್ರವೇಶಿಸಿತ್ತು. ಲೀಗ್‌ನಲ್ಲಿ ಪಾಕಿಸ್ತಾನ, ಮಾಜಿ ಚಾಂಪಿಯನ್ ಆಸ್ಟ್ರೇಲಿಯಾ, ಅಫ್ಘಾನಿಸ್ತಾನ, ಸೆಮಿಯಲ್ಲಿ ಇಂಗ್ಲೆಂಡ್ ತಂಡವನ್ನು ಭಾರತ ಸೋಲಿಸಿತ್ತು. ಲೀಗ್‌ನಲ್ಲಿ ದಕ್ಷಿಣ ಆಫ್ರಿಕಾ ಬಾಂಗ್ಲಾದೇಶ, ಶ್ರೀಲಂಕಾ, ಸೂಪರ್ 8 ರಲ್ಲಿ ಇಂಗ್ಲೆಂಡ್, ವಿಂಡೀಸ್ ತಂಡವನ್ನು ಮಣಿಸಿತ್ತು. ಸೆಮಿಯಲ್ಲಿ ಅಫ್ಘಾನಿಸ್ತಾನ ದಕ್ಷಿಣ ಆಫ್ರಿಕಾಗೆ ಪ್ರಬಲ ಸ್ಪರ್ಧೆ ನೀಡಿರಲಿಲ್ಲ.

## ವಿಶ್ವಕಪ್ ಗೆದ್ದ ಬೆನ್ನಲ್ಲೇ ಟಿ20 ಕ್ರಿಕೆಟ್‌ಗೆ ಗುಡ್‌ಬೈ ಹೇಳಿದ ಕೊಹ್ಲಿ

ಭಾರತ ಎರಡನೇ ಟಿ20 ವಿಶ್ವಕಪ್ ಕ್ರಿಕೆಟ್ ಗೆದ್ದ ಬೆನ್ನಲ್ಲೇ ವಿರಾಟ್ ಕೊಹ್ಲಿ ಟಿ20 ಕ್ರಿಕೆಟ್‌ಗೆ ಗುಡ್‌ಬೈ ಹೇಳಿದ್ದಾರೆ.



ದಕ್ಷಿಣ ಆಫ್ರಿಕಾ ವಿರುದ್ಧ ಫೈನಲ್‌ನಲ್ಲಿ ವಿಕೆಟ್ ಉರುಳುತ್ತಿದ್ದಾಗ ಗಟ್ಟಿ ಬಂಡೆಯಂತೆ ನಿಂತು 76 ರನ್ (59 ಎಸೆತ, 6 ಬೌಂಡರಿ, 2 ಸಿಕ್ಸರ್) ಸಿಡಿಸಿದ ವಿರಟ್ ಕೊಹ್ಲಿ ಅರ್ಹವಾಗಿಯೇ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು

ಪಂದ್ಯಶ್ರೇಷ್ಠ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ಇದು ನನ್ನ ಕೊನೆಯ ಟಿ 20 ವಿಶ್ವಕಪ್. ಇಲ್ಲಿಯವರೆಗೆ ಇದನ್ನೇ ಸಾಧಿಸಲು ನಾವು ಬಯಸುತ್ತಿದ್ದೆವು ಎಂದು ಹೇಳಿದರು.

ಇದು ಭಾರತಕ್ಕಾಗಿ ಆಡುತ್ತಿರುವ ನನ್ನ ಕೊನೆಯ ಟಿ20 ಪಂದ್ಯ. ಮುಂದೆ ಯುವ ಪೀಳಿಗೆ ಕ್ರಿಕೆಟ್ ತಂಡದ ನೇತೃತ್ವ ವಹಿಸಿಕೊಳ್ಳಬೇಕು ಎಂದು ತಿಳಿಸಿ ಈ ಯಶಸ್ಸಿಗಾಗಿ ದೇವರಿಗೆ ಕೃತಜ್ಞತೆ ಸಲ್ಲಿಸಿದರು.

## ಭಾರತದ ಪರ ವಿಶಿಷ್ಟ ದಾಖಲೆ ಬರೆದ ಹಿಟ್‌ಮ್ಯಾನ್

ಹಿಟ್ ಮ್ಯಾನ್ ರೋಹಿತ್ ಶರ್ಮಾ ಎರಡು ಟಿ20 ವಿಶ್ವಕಪ್ ಜಯಿಸುವ ಮೂಲಕ ಭಾರತದ ಪರ ವಿಶಿಷ್ಟ ದಾಖಲೆ ಬರೆದಿದ್ದಾರೆ. ಹೌದು. 2007ರಲ್ಲಿ ಭಾರತ ಮೊದಲ ಬಾರಿಗೆ ಧೋನಿ ನಾಯಕತ್ವದಲ್ಲಿ ಚಾಂಪಿಯನ್ ಆಗಿತ್ತು. ಪಾಕಿಸ್ತಾನವನ್ನು 5 ರನ್‌ನಿಂದ ಮಣಿಸಿ ಪ್ರಪ್ರಥಮ ಟಿ20 ಕ್ರಿಕೆಟ್ ಟ್ರೋಫಿಯನ್ನು



ತನ್ನದಾಗಿಸಿಕೊಂಡಿತ್ತು. ಈ ಪಂದ್ಯದಲ್ಲಿ ರೋಹಿತ್ ಶರ್ಮಾ ಔಟಾಗದೇ 30 ರನ್ (16 ಎಸೆತ, 2 ಬೌಂಡರಿ, 1 ಸಿಕ್ಸರ್) ಹೊಡೆದಿದ್ದರು. ಈಗ ರೋಹಿತ್ ನಾಯಕತ್ವದಲ್ಲೇ ಭಾರತ ಎರಡನೇ ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಮೂಲಕ ಸತತ ಎರಡು ಬಾರಿ ಚಾಂಪಿಯನ್ ಆದ ತಂಡದಲ್ಲಿದ್ದ ಏಕಮಾತ್ರ ಸದಸ್ಯ ಎಂಬ ಹೆಗ್ಗಳಿಕೆಗೆ ರೋಹಿತ್ ಶರ್ಮಾ ಪಾತ್ರವಾಗಿದ್ದಾರೆ.

ದಕ್ಷಿಣ ಆಫ್ರಿಕಾ ವಿರುದ್ಧ ನಡೆದ ಫೈನಲ್‌ನಲ್ಲಿ 9 ರನ್‌ಗಳಿಸಿ ಔಟ್ ಆಗಿದ್ದರೂ ತಂಡವನ್ನು ಫೈನಲಿಗೆ ತರುವಲ್ಲಿ ರೋಹಿತ್ ಪಾತ್ರ ದೊಡ್ಡದು.

ವಾಲ್ಮೀಕಿ ನಿಗಮ ಹಗರಣ

# ನಕಲಿ ಅಕೌಂಟ್‌ನ ಅಸಲಿ ಮಾಲೀಕರ ಪತ್ತೆ ಮಾಡಿದ ಸಿಐಡಿ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಮತ್ತೊರ್ವ ಆರೋಪಿಯನ್ನು ಬಂಧಿಸಲಾಗಿದೆ.



ಶ್ರೀನಿವಾಸ್ ಬಂಧಿತ ಆರೋಪಿ. ನಕಲಿ ಅಕೌಂಟ್‌ಗಳನ್ನು ಸೃಷ್ಟಿಸಿ ವಹಿವಾಟುಗಳನ್ನು ಮಾಡಿದ ಆರೋಪದ ಮೇಲೆ ಈತನನ್ನು ಬಂಧಿಸಲಾಗಿದೆ. ಕೋಟಿ ಕೋಟಿ ಹಣ ವಹಿವಾಟು ಮಾಡಲು ಆರೋಪಿ ಸಹಾಯ ಮಾಡಿದ್ದ ಎನ್ನಲಾಗಿದೆ.

ಹಗರಣ ಪ್ರಕರಣದ ಆರೋಪಿಗಳು ಒಂದೊಂದೇ ಸತ್ಯ ಬಾಯಿಬಿಡುತ್ತಿದ್ದಾರೆ. ವಾಲ್ಮೀಕಿ ನಿಗಮದ ಕೋಟ್ಯಂತರ ಹಣವನ್ನು ವಹಿವಾಟಿಗೆ 193 ಅಕೌಂಟ್‌ಗಳನ್ನು ಬಳಸಿಕೊಂಡಿದ್ದರು ಎನ್ನುವುದು ಬಯಲಾಗಿದೆ. ಹೈದರಾಬಾದ್ ಮೂಲದ ಸತ್ಯನಾರಾಯಣ ವರ್ಮಾ ಈ ಎಲ್ಲಾ ಯೋಜನೆಗೆ ಮಾಸ್ಟರ್ ಮೈಂಡ್ ಆಗಿದ್ದ.

ಖಾತೆಯಿಂದ ಹೊರಗೆ ಬಂದಿದ್ದ ಹಣವನ್ನು 193 ನಕಲಿ ಖಾತೆಗಳಿಗೆ ವಹಿವಾಟು ಮಾಡಿದ್ದಾರೆ. ಬಾರ್‌ನ ಮಾಲೀಕರ ಅಕೌಂಟ್‌ಗಳಿಗೆ ಹಣ ಕಳುಹಿಸಿ ಪರ್ಸಂಟೇಜ್ ಲೆಕ್ಕದಲ್ಲಿ ಕೋಟಿ ಕೋಟಿ ಹಣವನ್ನು ಡ್ರಾ ಮಾಡಿ ಕೊಟ್ಟಿದ್ದಾರೆ ಎಂಬ ವಿಚಾರ ಬೆಳಕಿಗೆ ಬಂದಿದೆ.

ಹಗರಣದ ತನಿಖೆಯಲ್ಲಿ ಸ್ಫೋಟಕ ವಿಚಾರ ಬಯಲಾಗಿದೆ. ಯಾರದ್ದೋ ಕಂಪನಿ ಹೆಸರಿನಲ್ಲಿ ಇನ್ಯಾರೋ ಖಾತೆ ತೆರೆದು ಕೋಟಿ ಕೋಟಿ ಹಣ ವರ್ಗಾವಣೆ ಮಾಡಿರುವುದು ಗೊತ್ತಾಗಿದೆ. ಅಸಲಿ ಕಂಪನಿಗಳ ಮಾಲೀಕರ ಗಮನಕ್ಕೆ ಬಾರದ ರೀತಿಯಲ್ಲಿ ವಂಚನೆ ಮಾಡಲಾಗಿದೆ. ಅದೇ ಕಂಪನಿ ಹೆಸರಿನಲ್ಲಿ ನಕಲಿ ಖಾತೆ ತೆರೆದು ಕೋಟಿ ಕೋಟಿ ಹಣ ವಹಿವಾಟು ಮಾಡಲಾಗಿದೆ. ನಕಲಿ ಅಕೌಂಟ್‌ನ ಅಸಲಿ ಮಾಲೀಕರನ್ನು ಪೊಲೀಸರು ಪತ್ತೆ ಮಾಡಿದ್ದಾರೆ.

ಅಸಲಿ ಮಾಲೀಕರನ್ನ ಕರೆಸಿ ವಿಚಾರಣೆ ನಡೆಸಿದಾಗ ಅಸಲಿ ಸತ್ಯ ಬಯಲಾಗಿದೆ. ಅಸಲಿ ಮಾಲೀಕರಿಗೆ ತಮ್ಮ ಕಂಪನಿ ಹೆಸರಿನಲ್ಲಿ ನಕಲಿ ಖಾತೆ ತೆರೆದಿರುವುದು ಗೊತ್ತಿಲ್ಲ. ಅದರಲ್ಲೂ ಆ ಖಾತೆಯಲ್ಲಿ ಕೋಟಿ ಕೋಟಿ ಹಣ ಇತ್ತೆ ಎಂದು ಅವರೇ ಅಚ್ಚರಿ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಅಸಲಿ ಕಂಪನಿ ಮಾಲೀಕರಿಂದ ನಾಲ್ಕು ಎಫ್‌ಐಆರ್ ದಾಖಲಾಗಿದೆ.

ವಿಜಯ್ ಕೃಷ್ಣ ಹಾಗೂ ನವೀನ್‌ರಿಂದ ಕೆಪಿ ಅಗ್ರಹಾರದಲ್ಲಿ ಎಫ್‌ಐಆರ್ ದಾಖಲಾಗಿದೆ. ಇದರ ಜೊತೆಗೆ ವಿಜಯನಗರ ಠಾಣೆಯಲ್ಲಿ ರಾಘವೇಂದ್ರ ಹಾಗೂ ರೇಖಾ ಎಂಬವರು ದೂರು ದಾಖಲಿಸಿದ್ದಾರೆ. ಒಂದೊಂದು ಅಕೌಂಟ್‌ನಲ್ಲಿ ಸುಮಾರು 5 ಕೋಟಿಯಂತೆ 20 ಕೋಟಿಗೂ ಅಧಿಕ ಹಣ ವರ್ಗಾವಣೆಯಾಗಿದೆ. ಹಣ ವರ್ಗಾವಣೆ ಮತ್ತೆ ಆ ಖಾತೆಗಳಿಂದ ಹಣ ಡ್ರಾ ಮಾಡಿಕೊಳ್ಳಲಾಗಿದೆ. ಈ ಖಾತೆಗಳಿಗೆ ವಾಲ್ಮೀಕಿ ನಿಗಮದ ಅಧಿಕೃತ ಖಾತೆಯಿಂದ ಹಣ ವರ್ಗಾವಣೆಯಾಗಿದೆ. ಸದ್ಯ ಈ ನಾಲ್ಕು ಎಫ್‌ಐಆರ್‌ಗಳ ಮೂಲ ಕಂಪನಿ ಮಾಲೀಕರು ಮಾಡಿಸಿದ್ದು, ಈ ಎಫ್‌ಐಆರ್‌ಗಳು ಎಸ್‌ಐಟಿಗೆ ವರ್ಗಾವಣೆಯಾಗಿದೆ.

# ಡಿಕೆಶಿ ವಾರ್ನಿಂಗ್ ನಾನ್ ಕೇಳ್ತೀನಾ ನೋಟಿಸ್ ಕೊಡಲಿ ಅಮೇಲೆ ಮಾತಾಡ್ತೀನಿ

**ಬೆಂಗಳೂರು:** ಕಾಂಗ್ರೆಸ್‌ನಲ್ಲಿ ಸಿಎಂ ಹಾಗೂ ಡಿಸಿಎಂ ಫೈಟ್ ಮತ್ತೊಂದು ಹಂತಕ್ಕೆ ತಲುಪಿದೆ. ಈ ವಿಚಾರದ ಬಗ್ಗೆ ಮಾತಾಡೋರಿಗೆ ನೋಟಿಸ್ ಕೊಡ್ತೀವಿ ಎಂಬ ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಸಚಿವ ರಾಜಣ್ಣ ವಾಗ್ದಾಳಿ ನಡೆಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಅವರು, ಡಿಕೆಶಿ ನೋಟಿಸ್ ಕೊಡಲಿ ಕೊಟ್ಟ ಮೇಲೆ ನಾನು ಮಾತಾಡ್ತೇನೆ. ಸಲಹೆ ನೀಡುವಾಗ ಸಾರ್ವಜನಿಕವಾಗಿ ವಿವಾದ ಆಗಬಾರದು ಎಂದು ಅವರು ಹೇಳಿರಬಹುದು. ಅದಕ್ಕೆ ನಾನು ಒಪ್ಪುತ್ತೇನೆ. ಬೇರೆಯವರು ಒಪ್ಪಬಹುದು. ನಾವು ಡಿಸಿಎಂ ಬಗ್ಗೆ ಹೇಳಿದ್ರೆ ಏನು ತಪ್ಪಾಗುತ್ತದೆ ನಾವು ಕೇಳಬಾರದಾ ನಾವು ಕೇಳಿದ್ದೇ ತಪ್ಪಾಗುತ್ತದೆಯೇ ಕೇಳಿದ್ದೇ ತಪ್ಪು ಎಂದರೆ ಯಾವುದೇ ಕ್ರಮ ತೆಗೆದುಕೊಂಡರೂ ಎದುರಿಸಲು ನಾನು ತಯಾರಿದ್ದೇನೆ ಎಂದು ಅವರು ಡಿಸಿಎಂಗೆ ಸವಾಲು ಹಾಕಿದ್ದಾರೆ.



ಡಿಕೆಶಿ ವಾರ್ನಿಂಗ್‌ಗೆ ನಾನು ಕೇಳ್ತೀನಾ ನಾನು ನಾನೇ, ರಾಜಣ್ಣ ರಾಜಣ್ಣನೇ. ಅಧಿಕಾರಕ್ಕೆ ನಾನು ಅಂಟಿಕೊಳ್ಳೊಲ್ಲ. ಬಾಯಿಗೆ ಬೀಗ ಹಾಕಿಕೊಳ್ಳಬೇಕು ಎಂದು ಡಿಕೆಶಿ ಹೇಳಿದ್ರೆ, ಎಲ್ಲರೂ ಬಾಯಿಗೆ ಬೀಗ ಹಾಕಿಕೊಳ್ಳಬೇಕು. ಅವರು ಹೇಳೋರನ್ನ ಹೇಳೋದಕ್ಕೆ ಬಿಟ್ಟು ಬರೀ ನಮಗೆ ಹೇಳಿದ್ರೆ, ನಾನು ಕೇಳುವವನಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ ಸಿಎಂ ಸಿದ್ದರಾಮಯ್ಯ ಅವರು ರಾಜೀನಾಮೆ ಕೊಟ್ಟು ಡಿ.ಕೆ.ಶಿವಕುಮಾರ್ ಅವರನ್ನು ಸಿಎಂ ಮಾಡಿ ಎಂದು ಒಬ್ಬರು ಅಭಿಪ್ರಾಯಪಟ್ಟರೆ, ಅದನ್ನ ಕೇಳಿಕೊಂಡು ನಾವು ಸುಮ್ಮನೆ ಇರೋಕೆ ಆಗುತ್ತಾ ಸಿದ್ದರಾಮಯ್ಯರನ್ನ ಅವರು ಸಿಎಂ ಮಾಡಿದ್ರಾ, ಸಿದ್ದರಾಮಯ್ಯರನ್ನ ಸಿಎಂ ಮಾಡಿರೋದು ಕಾಂಗ್ರೆಸ್ ಶಾಸಕರ ಅಭಿಪ್ರಾಯ ಪಡೆದು ಹೈಕಮಾಂಡ್ ಮಾಡಿರೋದು. ಹಾಗೆ ಸಿಎಂ ಮಾಡೋದಾದ್ರೆ, ಶಾಮನೂರು ಶಿವಶಂಕರಪ್ಪ ಅವರನ್ನ ಸಿಎಂ ಮಾಡಿ ಅಂತ ಸ್ವಾಮೀಜಿಗಳು ಹೇಳ್ತಾರೆ. ನಮ್ಮ ಸಮುದಾಯದ ಸ್ವಾಮೀಜಿಗಳು ಸತೀಶ್ ಜಾರಕಿಹೊಳಿ ಸಿಎಂ ಮಾಡಿ ಅಂತ ಹೇಳ್ತಾರೆ. ಸ್ವಾಮೀಜಿಗಳು ಹೇಳಿದ ಹಾಗೇ ಸಿಎಂಗಳನ್ನ ಮಾಡೋಕೆ ಆಗುತ್ತಾ ಸ್ವಾಮೀಜಿ ಹೇಳಿರೋ ಹೇಳಿಕೆ ಹಿಂದುಳಿದ ವರ್ಗಗಳಿಗೆ ಮಾಡಿದ ಅವಮಾನ. ಪ್ರಜಾಪ್ರಭುತ್ವಕ್ಕೆ ಮಾಡಿರೋ ಅವಮಾನ ಎಂದು ಚಂದ್ರಶೇಖರನಾಥ ಸ್ವಾಮೀಜಿ ವಿರುದ್ಧವೂ ಅವರು ಕಿಡಿಕಾರಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com